ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 92 ಸಂಚಿಕೆ- 92 | PAGE-8 ಪುಟ-8 | ಶನಿವಾರ 17.05.2025 | RS.2/- ಬೆಲೆ 2/-


## ಅಧಿಕಾರದಲ್ಲಿದ್ದಾಗ ರಕ್ಷಣಾ ಕ್ಷೇತ್ರ ಬಲಪಡಿಸದ ಕಾಂಗ್ರೆಸ್:ಕರಂದ್ಲಾಜೆ



ಮಲ್ಲಮ್ಮ ನುಡಿ ವಾರ್ತೆ

ಹುಬ್ಬಳ್ಳಿ:ಮೇ.16: ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ದೇಶದ ರಕ್ಷಣಾ ಕ್ಷೇತ್ರವನ್ನು ಬಲಪಡಿಸಿಲ್ಲ. ರಕ್ಷಣಾ ಸಾಮಾಗ್ರಿಗಳನ್ನು ತಯಾರು ಮಾಡುವ ಸಂಸ್ಥೆಗಳಿಗೂ ಸಹ ಹಣಕಾಸಿನ ನೆರವು ನೀಡಿರಲಿಲ್ಲ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಈ ವೇಳೆ, ಶಾಸಕ ಕೊತ್ತೂರು ಮಂಜುನಾಥ್ ಹೇಳಿಕೆಗೆ ಪ್ರತಿಕ್ರಿಯಿಸಿದರು. ದೇಶ ಸಂಕಷ್ಟ ಮತ್ತು ಸಾಧನೆ ಮಾಡಿದ ಎರಡೂ ಸಮಯದಲ್ಲಿ ಕಾಂಗ್ರೆಸ್ ದೇಶದ ವಿರುದ್ಧ ಮಾತನಾಡುತ್ತದೆ ಎಂದು ಕಿಡಿಕಾರಿದ್ದಾರೆ. ಇಂದು ಭಾರತೀಯ ಸೇನೆ ಸ್ವಾವಲಂಬಿಯಾಗಿ, ಆತ್ಮನಿರ್ಭರವಾಗಿದೆ. ಇದನ್ನು ಕಾಂಗ್ರೆಸ್‌ಗೆ ಸಹಿಸಲು ಆಗುತ್ತಿಲ್ಲ. ಹೀಗಾಗಿ ಅನಾವಶ್ಯಕ ಆರೋಪಗಳನ್ನು ಮಾಡುತ್ತಿದೆ. ಈ ಹಿಂದೆ ಸಿಎಂ ಯುದ್ಧ ಯಾಕೆ ಬೇಕು ಎಂದಿದ್ದರು. ಜಮೀರ್ ನಾನೇ ಬಾಂಬ್ ಕಟ್ಟಿ–ಕೊಂಡು ಹೋಗ್ತೇನೆ ಎಂದಿದ್ದರು. ಒಬ್ಬೊಬ್ಬ ಸಚಿವ, ಶಾಸಕ ಒಂದೊಂದು ಮಾತನಾಡುತ್ತಿದ್ದಾರೆ. ರಾಜ್ಯ ಕಾಂಗ್ರೆಸ್ ಯಾಕೆ ಹೀಗೆ ಹೇಳಿಕೆ ನೀಡುತ್ತಿದೆ. ಹೀಗೆ ಮಾತನಾಡಿ ಎಂದು ಕಾಂಗ್ರೆಸ್ ಹೈಕಮಾಂಡ್ ಏನಾದರೂ ಹೇಳಿಕೊಟ್ಟಿದೆಯೇ ಎಂದು ಪ್ರಶ್ನಿಸಿದರು.ಕಾಂಗ್ರೆಸ್ ಯಾವತ್ತೂ ದೇಶದ ಪರವಾಗಿಲ್ಲ. ಜನ ಎಲ್ಲವನ್ನೂ ನೋಡುತ್ತಿದ್ದಾ–ರೆ. ನಮಗೆ ನಮ್ಮ ಸೈನಿಕರ ಬಗ್ಗೆ ಹೆಮ್ಮೆಯಿದೆ, ತಂತ್ರಜ್ಞಾನದ ಬಗ್ಗೆ ಹೆಮ್ಮೆಯಿದೆ. ಭಾರತ ಇಂದು ಯುದ್ಧ ಸಾಮಗ್ರಿಗಳನ್ನು ಬೇರೆ ದೇಶಕ್ಕೆ ರಫ್ತು ಮಾಡುತ್ತಿದೆ ಎಂದರು.ಚೀನಾ ವಸ್ತುಗಳ ನಿಷೇಧ ವಿಚಾರವಾಗಿ ಮಾತನಾಡಿ, ಚೀನಾದಿಂದ ಹೆಚ್ಚಾಗಿ ಫೋನ್, ಗೊಂಬೆಗಳು ಬರುತ್ತಿವೆ. ಹಂತ ಹಂತವಾಗಿ ಕಡಿವಾಣ ಹಾಕಲಾಗುತ್ತಿದೆ. ಎಲ್ಲವನ್ನೂ ಒಂದೇ ಸಲ ನಿಲ್ಲಿಸಲು ಆಗಲ್ಲ. ಈ ಹಿಂದೆ ಸಾಕಷ್ಟು ಒಪ್ಪಂದಗಳು ಆಗಿವೆ. ಸ್ನೇಹಯುತವಾಗಿ ನಾವು ಹೋಗಬೇಕಿದೆ. ವಿಶ್ವಸಂಸ್ಥೆ ನಿಯಮಗಳನ್ನು ಪಾಲನೆ ಮಾಡಬೇಕಿದೆ ಎಂದು ಹೇಳಿದರು.

## ಐಎಂಎಫ್ ಸಾಲವನ್ನು ಪಾಕ್ ಪರೋಕ್ಷವಾಗಿ ಭಯೋತ್ಪಾದನೆಗೆ ಬಳಸ್ತಿದೆ : ರಾಜನಾಥ್ ಸಿಂಗ್



ಭುಜ್:ಮೇ.16:ಐಎಂಎಫ್ ನೀಡಿರುವ ಸಾಲವನ್ನು ಪಾಕಿಸ್ತಾನ ಪರೋಕ್ಷವಾಗಿ ಉಗ್ರರ ಕುಟುಂಬಗಳಿಗೆ ಹಾಗೂ ಭಯೋತ್ಪಾದನೆಗೆ ಆರ್ಥಿಕ ನೆರವು ನೀಡುತ್ತಿದೆ ಎಂದು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಆರೋಪಿಸಿದರು.

ಇಂದು ಗುಜರಾತ್‌ನ ಭುಜ್ ವಾಯುನೆಲೆಗೆ ಭೇಟಿ ನೀಡಿ ಭಾರತೀಯ ವಾಯುಪಡೆಯನ್ನುದ್ದೇಶಿಸಿ ಮಾತನಾಡಿದ ಅವರು, ಭಿಕ್ಷೆಬೇಡುತ್ತಿದ್ದ ಪಾಕಿಸ್ತಾನಕ್ಕೆ ಅಂತಾರಾಷ್ಟ್ರೀಯ ಹಣಕಾಸು ನಿಧಿಯು ವಿಸ್ತೃತ ನಿಧಿ ಸೌಲಭ್ಯದಡಿಯಲ್ಲಿ ಎರಡು ಕಂತುಗಳಲ್ಲಿ 2.1 ಬಿಲಿಯನ್ ಡಾಲರ್‌ಗಳನ್ನು ವಿತರಿಸಿದೆ. ಇದನ್ನು ಪಾಕಿಸ್ತಾನ ಪರೋಕ್ಷವಾಗಿ ಭಯೋತ್ಪಾದನೆಗೆ ನೀಡುತ್ತಿದೆ. ಈ ಮೂಲಕ ಪಾಕಿಸ್ತಾನ ಸರ್ಕಾರ ಭಾರತೀಯರ ವಿರುದ್ಧ ದಾಳಿ ನಡೆಸಲು ಅವಕಾಶ ನೀಡುತ್ತಿದೆ. ಹೀಗಾಗಿ ನೀಡಿರುವ ಸಾಲವನ್ನು ಐಎಂಎಫ್ ಮರುಪರಿಶೀಲಿಸಬೇಕೆಂದು ಕೇಳಿಕೊಂಡರು.

ಪಾಕ್ ಹಣವನ್ನು ಭಯೋತ್ಪಾದಕ ಮೂಲಸೌಕರ್ಯಗಳ ಅಭಿವೃದ್ಧಿಗೆ ಬಳಕೆ ಮಾಡುತ್ತಿದೆ. ಮೃತ ಭಯೋತ್ಪಾದಕರ ಕುಟುಂಬಗಳಿಗೆ ಈ ಹಣವನ್ನು ಪಾಕ್ ಪರಿಹಾರವಾಗಿ ನೀಡುತ್ತಿದೆ. ಈಗಾಗಲೇ ಮೋಸ್ಟ್ ವಾಂಟೆಡ್ ಉಗ್ರ ಮಸೂದ್‌ಗೆ ಪಾಕಿಸ್ತಾನ 14 ಕೋಟಿ ರೂ. ಪರಿಹಾರ ನೀಡಿದೆ ಎಂದರು.

ಪಾಕ್ ಆಕ್ರಮಿತ ಕಾಶ್ಮೀರ ಹಾಗೂ ಪಾಕಿಸ್ತಾನದ ಭಯೋತ್ಪಾದಕ ನೆಲೆಗಳನ್ನು ಗುರಿಯಾಗಿಸಿಕೊಂಡು ಭಾರತೀಯ ಸೇನೆ ಆರಂಭಿಸಿದ 'ಆಪರೇಷನ್ ಸಿಂಧೂರ' ಕಾರ್ಯಾಚರಣೆ ವೇಳೆ ಐಎಂಎಫ್ ಪಾಕಿಸ್ತಾನಕ್ಕೆ ಸಾಲ ಘೋಷಿಸಿತು. ಈ ವೇಳೆ ಪಾಕ್ ಕೂಡ ಉತ್ತರ ಭಾರತದ ನಾಗರಿಕರ ವಾಸಸ್ಥಾನ ಹಾಗೂ ಮಿಲಿಟರಿ ಪ್ರದೇಶಗಳ ಮೇಲೆ ಡ್ರೋನ್ ಹಾಗೂ ಕ್ಷಿಪಣಿ ದಾಳಿ ನಡೆಸುತ್ತಿತ್ತು.

## ಕೌಶಲ್ಯ ಅಭಿವೃದ್ಧಿ ಇಲಾಖೆಯಲ್ಲಿ ಕೌನ್ಸಿಲಿಂಗ್ ಮೂಲಕ ವರ್ಗಾವಣೆ

ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಮೇ.16: ಕೌಶಲ್ಯ ಅಭಿವೃದ್ಧಿ ಇಲಾಖೆಯಲ್ಲಿನ ಎಲ್ಲಾ ಸಾಮಾನ್ಯ ವರ್ಗಾವಣೆಗಳನ್ನು ಇನ್ನು ಮುಂದೆ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ನಡೆಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಶರಣ್ ಪ್ರಕಾಶ್ ಪಾಟೀಲ್ ಅವರು ಶುಕ್ರವಾರ



ಘೋಷಿಸಿದ್ದಾರೆ. ಇಂದು ಇಲಾಖಾ ಪರಿಶೀಲನಾ ಸಭೆಯಲ್ಲಿ, ಕೌಶಲ್ಯ ಅಭಿವೃದ್ಧಿ ಕಾರ್ಯದರ್ಶಿ ಏಕರೂಪ್ ಕೌರ್ ಅವರಿಗೆ ಹೊಸ ವ್ಯವಸ್ಥೆಗೆ ಸಮಗ್ರ ಮಾರ್ಗಸೂಚಿಗಳನ್ನು ರಚಿಸುವಂತೆ ಪಾಟೀಲ್ ಸೂಚಿಸಿದರು. ನಿರ್ದಿಷ್ಟವಾಗಿ ಸಚಿವಾಲಯದ ಅಡಿಯಲ್ಲಿ ಉದ್ಯೋಗ ಮತ್ತು ತರಬೇತಿ ಇಲಾಖೆ (rEn) ಅತಿ ಹೆಚ್ಚು ಉದ್ಯೋಗಸ್ಥರನ್ನು ಹೊಂದಿದೆ. ಪ್ರಭಾವ ಮತ್ತು ಶಿಫಾರಸುಗಳ ಮೂಲಕ ಆಗುತ್ತಿದ್ದ ವರ್ಗಾವಣೆ ಪ್ರಕ್ರಿಯೆಗಳಿಗೆ ಅಂತ್ಯ ಹಾಡಬೇಕಾಗಿದೆ. ಎಲ್ಲಾ ವರ್ಗಾವಣೆಗಳನ್ನು ಕೌನ್ಸಿಲಿಂಗ್ ಮೂಲಕ ಮಾಡಬೇಕು. ಇದು ಸಿಬ್ಬಂದಿಗೆ ಆದ್ಯತೆಯ ಸ್ಥಳಗಳಲ್ಲಿ ಹುದ್ದೆಗಳನ್ನು ಪಡೆಯಲು ಅನುವು ಮಾಡಿಕೊಡುತ್ತದೆ ಎಂದು ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದರು.

ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗೆ ರಾಜ್ಯ ಸರ್ಕಾರ ಈಗಾಗಲೇ ಜೂನ್ 16ರ ಅಂತಿಮ ಗಡುವು ವಿಧಿಸಿದೆ ಎಂದು ಪಾಟೀಲ್ ನೆನಪಿಸಿದರು. ಸರ್ಕಾರಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ವಿಫಲರಾಗಿರುವ ಹಿರಿಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಚಿವರು, ಶೋಕಾಸ್ ನೋಟಿಸ್‌ಗಳನ್ನು ಹೊರಡಿಸಲು ಮತ್ತು ಸಂಬಂಧಪಟ್ಟ ಅಧಿಕಾರಿಗಳನ್ನು ವಿಳಂಬವಿಲ್ಲದೆ ವರ್ಗಾಯಿಸಲು ಇದೇ ಸಂದರ್ಭದಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದರು. ಯುವಜನರ ಉದ್ಯೋಗ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿ ಸಾಧಿಸಲು ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರ (GTTC), ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆ (KGTTI) ಮತ್ತು ರಾಷ್ಟ್ರೀಯ ಜೀವನೋಪಾಯ ಮಿಷನ್ (NLM) ನಂತಹ ಸಂಸ್ಥೆಗಳಿಗೆ ಯುವನಿಧಿ ಯೋಜನೆ ಮತ್ತು ಉದ್ಯೋಗ ಮೇಳಗಳಿಗೆ ಅರ್ಜಿಗಳನ್ನು ಸಲ್ಲಿಸಲು ಅಲ್ಪಾವಧಿಯ ಮತ್ತು ದೀರ್ಘಾವಧಿಯ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಅಳವಡಿಸಲು ಸಚಿವರು ಸೂಚಿಸಿದರು.

## ರಸ್ತೆ ಅಪಘಾತ; ಓರ್ವನ ಸಾವು


ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಟಾಟ ಎಸಿ ಮತ್ತು ಲಾರಿ ಮಧ್ಯೆ ಡಿಕ್ಕಿ ಸಂಭವಿಸಿ ಓರ್ವ ಮೃತಪಟ್ಟ ಘಟನೆ ತಾಲೂಕಿನ ಹುಡಗಿ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಗುರುವಾರ ಸಂಜೆ ಸಂಭವಿಸಿದೆ.

ಚಿಟಗುಪ್ಪ ತಾಲೂಕಿನ ತಾಳಮಡಗಿ ಗ್ರಾಮದ ನಿವಾಸಿ ಓಂಕಾರ ಮೇತ್ರೆ (38) ಎಂದು ಗುತಿಸಲಾಗಿದೆ. ಗಂಭೀರವಾಗಿ ಗಾಯವಾದ ವ್ಯಕ್ತಿಗೆ ಖಾಸಗಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಬೀದರ್ ನಗರದ ಬ್ರೀಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ ಎಂದು ಪೊಲೀಸ್ ಮೂಲ ತಿಳಿಸಿದೆ.

ಕೂಲಿ ಕೆಲಸಕ್ಕೆಂದು ಓಂಕಾರ ಮೇತ್ರೆ ಹುಮನಾಬಾದ್ ಪಟ್ಟಣಕ್ಕೆ ಬಂದಿದ್ದು, ಕೂಲಿ ಕೆಲಸ ಮುಗಿಸಿಕೊಂಡು ಮನೆಗೆ ಹೋಗುವಾಗ ಮಾರ್ಗ ಮಧ್ಯೆ ಈ ದುರ್ಘಟನೆ ಜರುಗಿದೆ. ಈ ಕುರಿತು ಹುಮನಾಬಾದ್ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಾಸ್ಟೆಲ್ ನಲ್ಲೆ ನೇಣು ಬಿಗಿದುಕೊಂಡು ವಿದ್ಯಾರ್ಥಿ ಆತ್ಮಹತ್ಯೆಗೆ ಶರಣು!



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ.16:ಬೀದರ್ ನಲ್ಲಿ ಘೋರವಾದ ದುರಂತ ಸಂಭವಿಸಿದ್ದು, ಪ್ರಥಮ ವರ್ಷದ ಬಿ–ಫಾರ್ಮಸಿ ಓದುತ್ತಿದ್ದ ವಿದ್ಯಾರ್ಥಿಯೊಬ್ಬ ಹಾಸ್ಟೆಲ್ ನಲ್ಲೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ, ಬೀದರ್‌ನ ನೌಬಾದ್‌ನಲ್ಲಿರುವ ಬಿಸಿಎಂ ವಸತಿ ನಿಲಯದಲ್ಲಿ ನಡೆದಿದೆ. ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿಯನ್ನು ನವನಾಥ ಬಾಜೀರಾವ್ ದೊಂಡಿಬಾ ಎಂದು ತಿಳಿದುಬಂದಿದೆ. ನವನಾಥ್ ಮಾನಸಿಕ ಖಿನ್ನತೆಯಿಂದ ಬಳಲುತ್ತಿದ್ದ ಎನ್ನಲಾಗಿದೆ. ಭಾಲ್ಕಿ ತಾಲೂಕಿನ ಲಖನಗಾಂವ್ ಗ್ರಾಮದ ದೊಂಡಿಬಾ ಹಾಸ್ಟೆಲ್‌ನಲ್ಲಿ ಉಳಿದುಕೊಂಡಿದ್ದ ನಿನ್ನೆಯಷ್ಟೇ ಬಿ–ಫಾರ್ಮಸಿ ಪರೀಕ್ಷೆ ಮುಕ್ತಾಯಗೊಂಡಿದೆ. ಪರೀಕ್ಷೆ ಮುಗಿದಿದ್ದು ಊರಿಗೆ ಬರ್ತೀನಿ ಎಂದು ಕುಟುಂಬಸ್ಥರಿಗೆ ತಿಳಿಸಿದ್ದಾನೆ. ಆದ್ರೆ, ಊರಿಗೆ ಹೋಗುವುದಕ್ಕೂ ಮುನ್ನವೇ ಆತ್ಮಹತ್ಯೆಗೆ ಶರಣಾಗಿದ್ದಾನೆ ಎಂದು ಅವರ ಸಹಪಾಠಿಗಳು ಹೇಳಿದ್ದಾರೆ. ಸ್ಥಳಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಬೀದರ್‌ನ ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನ್ಯಾಯಧೀಶ ರಾಘವೇಂದ್ರಗೆ ವಿಶೇಷ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ನ್ಯಾಯಾಲಯದಲ್ಲಿ ಸೇವೆ ಸಲ್ಲಿಸಿ ವರ್ಗಾವಣೆಯಾದ ನ್ಯಾಯಾಧೀಶ ರಾಘವೇಂದ್ರಗೆ ಪಟ್ಟಣದ ವಕೀಲರ ಸಂಘದ ಕಚೇರಿಯಲ್ಲಿ ವಕೀಲರ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಹಿರಿಯ ನ್ಯಾಯಾಧೀಶ ರಾಘವೇಂದ್ರ ಮಾತನಾಡಿ, ವಿಶ್ವಗುರು ಬಸವಣ್ಣನವರ ಕರ್ಮ ಭೂಮಿಯಲ್ಲಿ ಸೇವೆ ಮಾಡಿರುವುದು ನನ್ನ ಜೀವನದ ಸೌಭಾಗ್ಯ. ಎರಡು ವರ್ಷ ಹತ್ತು ತಿಂಗಳ ಸೇವಾ ಅವಧಿಯಲ್ಲಿ ಹುಮನಾಬಾದ್ ಹಾಗೂ ಬಸವಕಲ್ಯಾಣದ ವಕೀಲರು ನೀಡಿದ ಸಹಕಾರ ಎಂದು ಮರೆಯುವಂತಿಲ್ಲ ಎಂದು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಧೀಶ ಪ್ರಶಾಂತ ಪಾದವಾಡಗಿ, ವಕೀಲರ ಸಂಘದ ಅಧ್ಯಕ್ಷ ಮಂಜುನಾಥ ರೆಡ್ಡಿ, ಸಂಘದ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ ನಾಥೆ, ಉಪಾಧ್ಯಕ್ಷ ವಿಜಯಕುಮಾರ ಜೋತಗೊಂಡ, ಪ್ರಭಾಕರ್ ನಾಗರಾಳೆ, ಲಕ್ಷ್ಮಣ ನಂದಿ, ಅಶೋಕ ವರ್ಮಾ, ವಿ.ಕೆ. ಪಾಟೀಲ್, ಎಸ್.ಕೆ. ರಾಯ್, ಕಲ್ಯಾಣರಾವ ಪಡಶೆಟ್ಟಿ, ಶಂಭುಲಿಂಗ ಧುಮ್ಮನಸೂರೆ, ಮಹಾದೇವಪ್ಪ ಡೊಂಗರಗಿ ಇದ್ದರು.

## ಕಾಂಗ್ರೆಸ್‌ನವ್ರಿಗೆ ಪಾಕ್ ಫ್ರೀ ವೀಸಾ ನೀಡುತ್ತೆ, ಮಂಜುನಾಥ್ ದಾಳಿ ಸ್ಥಳ ನೋಡ್ಕೊಂಡು ಬರಲಿ: ಯತ್ನಾಳ್



ಮಲ್ಲಮ್ಮ ನುಡಿ ವಾರ್ತೆ

ದಾವಣಗೆರೆ:ಮೇ.16:ಕಾಂಗ್ರೆಸ್‌ನವರಿಗೆ ಪಾಕಿಸ್ತಾನದವರು ಫ್ರೀ ವೀಸಾ ಕೊಡ್ತಾರೆ, ಶಾಸಕ ಕೊತ್ತೂರು ಮಂಜುನಾಥ್ ಹೋಗಿ ಭಾರತೀಯ ಸೇನೆ ದಾಳಿ ನಡೆಸಿದ ಜಾಗಗಳನ್ನು ನೋಡಿ–ಕೊಂಡು ಬರಲಿ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದ್ದಾರೆ.

ದಾವಣಗೆರೆಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಕೊತ್ತೂರು ಮಂಜುನಾಥ್ ಅವರು, ಆಪರೇಷನ್ ಸಿಂಧೂರದ ಬಗ್ಗೆ ಲೇವಡಿ ಮಾಡಿದ್ದ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಶಾಸಕರಿಗೆ ಅನುಮಾನ ಇದ್ದರೆ ಫ್ಲೈ???ನಲ್ಲಿ ಹೋಗಿ ನೋಡಿಕೊಂಡು ಬರಲಿ ಎಂದು ಆಕ್ರೋಶ ಹೊರಹಾಕಿದ್ದಾರೆ.

ಪಾಕಿಸ್ತಾನದ ಹೀರೋ ಎಂದರೆ ರಾಹುಲ್ ಗಾಂಧಿ ಹಾಗೂ ಸಿದ್ದರಾಮಯ್ಯ, ಕಾಂಗ್ರೆಸ್‌ನವರಿಗೆ ಪಾಕಿಸ್ತಾನದಿಂದ ಫ್ರೀ ವೀಸಾ ಸಿಗುತ್ತದೆ. ಹೋಗಿ ಎಲ್ಲೆಲ್ಲಿ ಉಗ್ರರ ಕ್ಯಾಂಪ್ ಮೇಲೆ ದಾಳಿಯಾಗಿದೆ ಎಂದು ನೋಡಿ–ಕೊಂಡು ಬರಲಿ. ಈ ರೀತಿ ಸೈನಿಕರ ವಿಚಾರವಾಗಿ ಮಾತನಾಡೋದು ಸರಿಯಲ್ಲ ಎಂದಿದ್ದಾರೆ. ಕೋಲಾರದಲ್ಲಿ ಮಾತನಾಡಿದ್ದ ಶಾಸಕ ಕೊತ್ತೂರು ಮಂಜುನಾಥ್, ಕೇಂದ್ರ ಸರ್ಕಾರ ಬೂಟಾಟಿಕೆಗೆ ನಾಲ್ಕು ಫ್ಲೈಟ್ ಮೇಲೆ ಕಳಿಸಿದ್ದು ಬಿಟ್ರೆ ಏನೂ ಮಾಡಿಲ್ಲ ಎಂದು ಲೇವಡಿ ಮಾಡಿದ್ದರು. 26 ಜನ ಮಹಿಳೆಯರ ಅರಿಶಿನ ಕುಂಕುಮಕ್ಕೆ ಬೆಲೆ ಇಷ್ಟೇನಾ? ಆ ಹೆಣ್ಣು ಮಕ್ಕಳಿಗೆ ಸಿಕ್ಕ ಪರಿಹಾರ ಇದೇನಾ? ಅಂತ ಬೇಸರ ವ್ಯಕ್ತಪಡಿಸಿದ್ದರು. ಸಾಮಾನ್ಯ ಪ್ರಜೆಗಳ ಮೇಲೆ ಯುದ್ಧ ಮಾಡೋದಕ್ಕೆ ನಮ್ಮ ವಿರೋಧವಿದೆ. ಆದ್ರೆ ನಮ್ಮ ದೇಶದೊಳಗೆ ಬಂದು ಪತ್ನಿಯರ ಎದುರೇ ಪತಿಯನ್ನ

(2ನೇ ಪುಟ ನೋಡಿ)

## ಆಶಾ ಕಾರ್ಯಕರ್ತೆಯರಿಗೆ ಗೌರವಧನ ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.16: ಆಶಾ ಕಾರ್ಯಕರ್ತೆಯರ ಗೌರವ ಧನವನ್ನು ರೂ.1,000 ಹೆಚ್ಚಿಸಿ, ರಾಜ್ಯ ಸರ್ಕಾರ ಆದೇಶಿಸಿದೆ. ಕಳೆದ ಬಜೆಟ್‌ನಲ್ಲಿ ಗೌರವ ಧನ ಹೆಚ್ಚಿಸುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಇದೀಗ ಕೊಟ್ಟ ಮಾತಿನಂತೆ ಆಶಾ ಕಾರ್ಯಕರ್ತೆ–ಯರ ಗೌರವ ಧನ ಏರಿಸಿದ್ದಾರೆ. ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದು, 2025–26ನೇ

(2ನೇ ಪುಟ ನೋಡಿ)

## ನುಡಿದಂತೆ ನಡೆದ ಸರ್ಕಾರಕ್ಕೆ 2 ವರ್ಷ: ಮೇ 20 ರಂದು ಹೊಸಪೇಟೆಯಲ್ಲಿ ಸಮರ್ಪಣಾ ಸಂಕಲ್ಪ ಸಮಾವೇಶ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ



ಮಲ್ಲಮ್ಮನುಡಿ ವಾರ್ತೆ ಬಳ್ಳಾರಿ,ಮೇ 16:ರಾಜ್ಯ ಸರ್ಕಾರವು 2 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇದೇ ಮೇ 20 ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಸಮರ್ಪಣಾ ಸಂಕಲ್ಪ ಸಮಾವೇಶ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಕಾರ್ಯಕ್ರಮ ಆಯೋಜನೆ ಕುರಿತಂತೆ, ಶುಕ್ರವಾರ ಹೊಸಪೇಟೆಯ ಜಿಲ್ಲಾ ಕ್ರೀಡಾಂಗಣಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿ ಬಳಿಕ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

2023 ರ ಮೇ 20 ರಂದು ರಾಜ್ಯ ಸರ್ಕಾರವು ಅಸ್ತಿತ್ವಕ್ಕೆ ಬಂದು ಈಗ ಎರಡು ವರ್ಷ ಪೂರೈಸುತ್ತಿದೆ. ಅಂದೇ ಕ್ಯಾಬಿನೆಟ್ ಸಭೆಯಲ್ಲಿ ಪಂಚ ಗ್ಯಾರಂಟಿ ಜಾರಿಗೆ ಕುರಿತಂತೆ ಚರ್ಚಿಸಲಾಗಿತ್ತು. ಪ್ರಥಮವಾಗಿ ಶಕ್ತಿ ಯೋಜನೆ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಮತ್ತು ಯುವನಿಧಿ ಸೇರಿದಂತೆ ಹಂತ–ಹಂತವಾಗಿ ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ ಎಂದು ಅವರು ಹೇಳಿದರು.

ಕಳೆದ ವಿಧಾನಸಭೆ ಚುನಾವಣೆ ಮತ್ತು ಉಪಚುನಾವಣೆಯಲ್ಲಿ ಬಹುಮತದಿಂದ ಆರಿಸಿಗೆಲ್ಲಿಸಿದಂತಹ ಪ್ರಜಾಪ್ರಭುತ್ವದ ಮತದಾರರಿಗೆ ನಮ್ಮ ಸರ್ಕಾರವು ಚುನಾವಣೆ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ, ಕೊಟ್ಟ ಮಾತಿನಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದೇವೆ ಎಂದರು.

ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ ಎಂದು ಹಲವರು ಟೀಕಿಸುತ್ತಿದ್ದಾರೆ. ಈಗಾಗಲೇ ಗ್ಯಾರಂಟಿ ಯೋಜನೆಗಳಿಗೆ 90 ಸಾವಿರ ಕೋಟಿ ರೂ. ಖರ್ಚು ಮಾಡಲಾಗಿದೆ. 2024–25 ನೇ ಸಾಲಿನಲ್ಲಿ 51 ಸಾವಿರ ಕೋಟಿ ರೂ. ಗಳನ್ನು ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಲಾಗಿದೆ. ಕಳೆದ ವರ್ಷ ಗ್ಯಾರಂಟಿ ಯೋಜನೆಗಳಿಗಾಗಿಯೇ 52.9 ಸಾವಿರ ಕೋಟಿ ರೂ. ಮೀಸಲಿಡಲಾಗಿತ್ತು. ಈ ವರ್ಷ 50.18 ಸಾವಿರ ಕೋಟಿ ರೂ. ಮೀಸಲಿಡಲಾಗಿದೆ, ಅಗತ್ಯಬಿದ್ದಲ್ಲಿ ಇನ್ನು ಹೆಚ್ಚಿನ ಅನುದಾನ ನೀಡಲಾಗುವುದು.

2024–25ನೇ ಸಾಲಿನಲ್ಲಿ 3,71,000 ಕೋಟಿ ರೂ. ಬಜೆಟ್ ಗಾತ್ರವಿತ್ತು. 2025–26 ನೇ ಸಾಲಿನಲ್ಲಿ ಬಜೆಟ್

(2ನೇ ಪುಟ ನೋಡಿ)

## ರಾಜ್ಯಾದ್ಯಂತ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಮೇ 25ರ ವರೆಗೆ ವಿಸ್ತರಣೆ: ನ್ಯಾಯಮೂರ್ತಿ ಡಾ. ದಾಸ್



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು, ಮೇ 16:ರಾಜ್ಯದಾದ್ಯಂತ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯ ಮಾಹಿತಿಯನ್ನು ಮೇ 5ರಿಂದ ಮನೆ–ಮನೆಗೆ ಭೇಟಿ ನೀಡಿ ಸಂಗ್ರಹಿಸುತ್ತಿದ್ದು, ಮೊದಲ ಹಂತದಲ್ಲಿ ಮೇ 15ರ ವರೆಗೆ 18.96 ಲಕ್ಷ ಸಮೀಕ್ಷೆ ಮಾಡಲಾಗಿದ್ದು, ಶೇ.73.72 ರಷ್ಟು ಗುರಿ ಸಾಧಿಸಲಾಗಿದೆ ಎಂದು ಪರಿಶಿಷ್ಟ ಜಾತಿ ಒಳ ಮೀಸಲಾತಿಯ ಏಕಸದಸ್ಯ ಆಯೋಗದ ಅಧ್ಯಕ್ಷರಾದ ನ್ಯಾಯಮೂರ್ತಿ ಡಾ.ಹೆಚ್. ಎನ್.ನಾಗಮೋಹನ್ ದಾಸ್ ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಪರಿಶಿಷ್ಟ ಜಾತಿ/ಉಪಜಾತಿಗಳ ಸಮಗ್ರ ಸಮೀಕ್ಷೆ 2025ರ ವರದಿ ನೀಡಲು ಹಮ್ಮಿಕೊಳ್ಳಲಾಗಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ನ್ಯಾಯಮೂರ್ತಿಗಳು, ರಾಜ್ಯದಲ್ಲಿ 2011ರ ಜನಗಣತಿ ಹಾಗೂ ಇಲ್ಲಿಯವರೆಗೆ ನಡೆದಿರುವ ಸಮೀಕ್ಷೆಯ ಜನಗಣತಿಯಲ್ಲಿ ಶೇ.43ರಷ್ಟು ಪರಿಶಿಷ್ಟ ಜಾತಿಯ ಸಮುದಾಯದವರು ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂಬುದಾಗಿ ನಮೂದಿಸಿದ್ದು, ಈ ಮೂರು ಜಾತಿಗಳಲ್ಲಿ ಅನೇಕ ಮೂಲ ಜಾತಿಗಳು ಸೇರಿಕೊಂಡಿರುವುದರಿಂದ ಪರಿಶಿಷ್ಟ ಜಾತಿಗಳ ವೈಜ್ಞಾನಿಕ ಉಪವರ್ಗೀಕರಣಕ್ಕೆ ಅಡ್ಡಿಯಾಗಿದೆ ಎಂದರು. ಪರಿಶಿಷ್ಟ ಜಾತಿಯಲ್ಲಿ 101 ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ದತ್ತಾಂಶವನ್ನು ಸಂಗ್ರಹಿಸಲು ಹೊಸದಾಗಿ ಸಮೀಕ್ಷೆ ನಡೆಸಲು ಮಾರ್ಚ್ 27, 2025ರ ಆಯೋಗದ ಮಧ್ಯಂತರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಶಿಫಾರಸ್ಸಿನ ಅನ್ವಯ ಪರಿಶಿಷ್ಟ ಜಾತಿಯ ಮೂಲ ಜಾತಿಗಳ ಜನಸಂಖ್ಯೆ, ಕುಟುಂಬಗಳ ಸಂಖ್ಯೆ ಹಾಗೂ ಅವರುಗಳು ಪಡೆದಿರುವ ಶಿಕ್ಷಣ, ವೃತ್ತಿ, ವಾಸಿಸುವ ಪ್ರದೇಶ, ಹೊಂದಿರುವ ಸೌಲಭ್ಯಗಳು ಮುಂತಾದ ಸಾಮಾನ್ಯ ಮಾಹಿತಿಗಳು ಹಾಗೂ ಆರ್ಥಿಕತೆಗೆ ಸಂಬಂಧಿಸಿದ ಮಾಹಿತಿ, ಸರ್ಕಾರಿ ಉದ್ಯೋಗ, ಖಾಸಗಿ ಉದ್ಯೋಗ, ವೃತ್ತಿ, ಭೂಮಿಯ ಒಡೆತನ, ಮನೆ, ಆದಾಯ, ಮಾನವ ಅಭಿವೃದ್ಧಿ, ಸರ್ಕಾರದಿಂದ ಪಡೆದಿರುವ ಸೌಲಭ್ಯ, ರಾಜಕೀಯ ಪ್ರಾತಿನಿಧ್ಯತೆ ಇತ್ಯಾದಿ ವಿಷಯಗಳ ಕುರಿತು ಸಮಗ್ರವಾದ ಮಾಹಿತಿಯನ್ನು ಸರ್ಕಾರದ ವತಿಯಿಂದ ಸಮೀಕ್ಷೆ ನಡೆಸಲಾಗುತ್ತಿದೆ ಎಂದರು.

ಸಮೀಕ್ಷೆಯನ್ನು ಆಧುನಿಕ ತಂತ್ರಜ್ಞಾನದ ಸಾಧನಗಳನ್ನು ಬಳಸಿಕೊಂಡು ಕರ್ನಾಟಕ ಸರ್ಕಾರದ ಇ–ಆಡಳಿತ ಇಲಾಖೆಯ

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

ನ ಗಾತ್ರವನ್ನು 4,09,000 ಕೋಟಿ ರೂ. ಗೆ ಹೆಚ್ಚಿಸಲಾಗಿದೆ. ಅಂದರೆ ಸುಮಾರು 38,000 ಕೋಟಿ ರೂ. ಹೆಚ್ಚಳವಾಗಿದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, ನುಡಿದಂತೆ ನಡೆದ ಸರ್ಕಾರ ನಮ್ಮದು ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ರೀತಿಯ ಅನುದಾನದ ಕೊರತೆ ಇಲ್ಲ. ನಮ್ಮ ಸರ್ಕಾರ ಜಾರಿಗೊಳಿಸಿದ ಗ್ಯಾರಂಟಿ ಯೋಜನೆಗಳು ದೇಶಕ್ಕೆ ಮಾದರಿಯಾಗಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.*ಕೆಕೆಆರ್‌ಡಿಬಿ ಗೆ 5 ಸಾವಿರ ಕೋಟಿ ರೂ.:*ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ಅಭಿವೃದ್ಧಿಗೆ ನಮ್ಮ ರಾಜ್ಯ ಸರ್ಕಾರವು 5 ಸಾವಿರ ಕೋಟಿ ರೂ. ನೀಡಿದೆ. ಈ ಭಾಗದ 371 (ಜೆ) ವಿಶೇಷ ಸ್ಥಾನಮಾನವನ್ನು ನಮ್ಮ ಸರ್ಕಾರವೇ ಜಾರಿಗೊಳಿಸಿದ್ದು ಎಂದು ಮನನ ಮಾಡಿದ ಅವರು, ಕೇಂದ್ರ ಸರ್ಕಾರವು ತಿದ್ದುಪಡಿ ಬಳಿಕ ವಿಶೇಷ ಸ್ಥಾನಮಾನ ನೀಡಲು ಪ್ರತಿಬಿಂಬಿಸಿತ್ತು, ಆದರೆ ಈವರೆಗೆ ಒಂದು ರೂ. ಕೂಡ ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕಳೆದ ಸರ್ಕಾರವು ವಸತಿ ಯೋಜನೆಯಡಿ ಒಂದೇ ಒಂದು ಮನೆ ನೀಡಲಾಗಲಿಲ್ಲ, ಈ ಬಾರಿ ವಸತಿ ಯೋಜನೆಯಡಿ ಮನೆ ವಿತರಿಸುವ ಕುರಿತಂತೆ ವಸತಿ ಸಚಿವರು ಪ್ರಸ್ತಾಪಿಸಿದ್ದಾರೆ ಎಂದರು.*1.03 ಲಕ್ಷ ಹಕ್ಕುಪತ್ರ ವಿತರಣೆ:*

ನಮ್ಮ ಸರ್ಕಾರವು ಎರಡು ವರ್ಷ ಪೂರೈಸುತ್ತಿರುವ ಹಿನ್ನಲೆಯಲ್ಲಿ ನುಡಿದಂತೆ ನಡೆದ ಸರ್ಕಾರ ನಮ್ಮದಾಗಿದ್ದು, ಇನ್ನುಮುಂದೆಯೂ ನಡೆಯುತ್ತೇವೆ ಎಂದು ಜನರಿಗೆ ತಿಳಿಯಪಡಿಸಲು ಮೇ 20 ರಂದು ನಡೆಯುವ ಸಮರ್ಪಣಾ ಸಂಕಲ್ಪ ಸಮಾವೇಶ ಕಾರ್ಯಕ್ರಮದಲ್ಲಿ ಹಾಡಿ, ಹಟ್ಟಿ ಮತ್ತು ತಾಂಡಾ ಪ್ರದೇಶದ ಕನಿಷ್ಠ 1.03 ಲಕ್ಷ ಫಲಾನುಭವಿಗಳಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗುತ್ತದೆ. ಇದರಿಂದ ಜನರಿಗೆ ಸೌಲಭ್ಯ ಸಮರ್ಪಿಸುವ ಸಮರ್ಪಣಾ ಸಂಕಲ್ಪ ಸಮಾವೇಶ ಕಾರ್ಯಕ್ರಮ ಇದಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದರು.ಕಾರ್ಯಕ್ರಮಕ್ಕೆ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ವಿರೋಧ ಪಕ್ಷದ ನಾಯಕರು, ಶಾಸಕರುಗಳನ್ನು ಸಹ ಆಹ್ವಾನಿಸಲಾಗಿದೆ. ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಫಲಾನುಭವಿಗಳನ್ನು ಕರೆತರಲಾಗುವುದು. ಕನಿಷ್ಠ 3 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಜನಸ್ತೋಮ ಸೇರುವ ನಿರೀಕ್ಷೆ ಹೊಂದಲಾಗಿದೆ. ಇದಕ್ಕೆ ಬೇಕಾದ ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್, ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಬಿ. ಝೆಡ್.ಜಮೀರ್ ಅಹ್ಮದ್ ಖಾನ್, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಡಾ.ಹೆಚ್.ಕೆ.ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಕೃಷಿ ಸಚಿವ ಎನ್.ಚಲುವರಾಯಸ್ವಾಮಿ, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಸಣ್ಣನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು, ಸಂಸದ ಈ.ತುಕಾರಾಮ್, ಶಾಸಕರಾದ ಹೆಚ್.ಆರ್.ಗವಿಯಪ್ಪ, ಬಿ.ನಾಗೇಂದ್ರ,ಜೆ.ಎನ್.ಗಣೇಶ್,ಎಂ.ಪಿ.ಲತಾ,ಶ್ರೀನಿವಾಸ ನಾಯ್ಕ ಮತ್ತು ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ, ಪ್ರಶಾಂತ್ ಕುಮಾರ್ ಮಿಶ್ರಾ, ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್, ಮೊಹಮದ್ ನೊಂಗ್ಜಾಯ್ ಅಕ್ರಂ ಅಲಿ ಪಾಷಾ, ಎಸ್ಪಿಗಳಾದ ಡಾ.ಶೋಭರಾಣಿ.ವಿ.ಜೆ., ಶ್ರೀಹರಿಬಾಬು ಸೇರಿದಂತೆ ಅನೇಕರು ಹಾಜರಿದ್ದರು.

## 25ರ ವರೆಗೆ ವಿಸ್ತರಣೆ: ನ್ಯಾಯಮೂರ್ತಿ ಡಾ. ದಾಸ್

ಅಧೀನದಲ್ಲಿನ ಇ.ಡಿ.ಸಿ.ಎಸ್ ರವರು ಅಭಿವೃದ್ಧಿಪಡಿಸಿರವ ಮೊಬೈಲ್ ಆ್ಯಪ್ ಮೂಲಕ ನಡೆಸಲಾಗುತ್ತಿದೆ ಕೆಲವೊಂದು ಅಪಾರ್ಟಮೆಂಟ್‌ಗಳಲ್ಲಿ ಸಮೀಕ್ಷೆ ನಡೆಸುವ ಗಣತಿದಾರರಿಗೆ ಅಡ್ಡಿಪಡಿಸುತ್ತಿರುವುದು ಕಂಡು ಬಂದಿದೆ. ಇದು ಅಪರಾಧವಾಗಿದ್ದು, ಸಮೀಕ್ಷೆಗೆ ಅಡ್ಡಿಪಡಿಸದೆ ಸಹಕರಿಸಬೇಕು.

ತೊಂದರೆ ಮಾಡುವವರ ವಿರುದ್ಧ ಕ್ರಮಕೈಗೊಳ್ಳಲಾಗುವುದು

ಎಂದರು.ಮೇ 17ರ ವರೆಗೆ ಇದ್ದ ಸಮೀಕ್ಷೆಯ ಅವಧಿಯನ್ನು ಮೇ 25ರ ವರೆಗೆ ವಿಸ್ತರಿಸಲಾಗಿದ್ದು, ಪರಿಶಿಷ್ಟ ಜಾತಿಯ ಜನರೆಲ್ಲರೂ ಸಮೀಕ್ಷೆಯಲ್ಲಿ ತಪ್ಪದೇ ಭಾವಹಿಸಿ ತಮ್ಮ ಜಾತಿಯ ಬಗ್ಗೆ ನಿಖರವಾದ ಮಾಹಿತಿಯನ್ನು ನೀಡುವುದರೊಂದಿಗೆ ಸಂಪೂರ್ಣ ಸಹಕಾರ ನೀಡಬೇಕೆಂದರು.ಇದೇ ಸಂದರ್ಭದಲ್ಲಿ ಸಮೀಕ್ಷೆ ನಡೆಸುವ ಸಮಯದಲ್ಲಿ ಇತ್ತೀಚೆಗೆ ಕಲ್ಬುರ್ಗಿಯಲ್ಲಿ ಹೃದಯಾಘಾತದಿಂದ ನಿಧನರಾದ ಗಣತಿದಾರ ನಾಗಶೆಟ್ಟಿ ಅವರಿಗೆ ಸಂತಾಪ ವ್ಯಕ್ತಪಡಿಸಿದ ನ್ಯಾಯಮೂರ್ತಿಗಳು, ಅವರ ಕುಟುಂಬಕ್ಕೆ 15 ಲಕ್ಷ ರೂ. ಪರಿಹಾರ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದರು.ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಾದ ರಾಕೇಶ್ ಕುಮಾರ್ ಅವರು ಮಾತನಾಡಿ, ಶಾಸಕರುಗಳು,

ಹಲವು ಸಂಘ–ಸಂಸ್ಥೆಗಳು ಸಮೀಕ್ಷಾ ದಿನಾಂಕದ ಅವಧಿಯನ್ನು ವಿಸ್ತರಿಸುವಂತೆ ಕೋರಿದ್ದರು. ಆ ಹಿನ್ನೆಲೆಯಲ್ಲಿ ಸಮೀಕ್ಷೆಯನ್ನು ಮೂರು ಹಂತಗಳಲ್ಲಿ ನಡೆಸಲಾಗುತ್ತಿದ್ದು, ಮೊದಲ ಹಂತವಾಗಿ ಮನೆ–ಮನೆ ಭೇಟಿ ಮೇ 25ರ ವರೆಗೆ. ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ ಮೇ 26 ರಿಂದ 28ರ ವರೆಗೆ ವಿಶೇಷ ಶಿಬಿರ. ಮೇ 19 ರಿಂದ 28ರ ವರೆಗೆ ಆನ್‌ಲೈನ್ ಮೂಲಕ ಸ್ವಯಂ ಘೋಷಣೆ ಸಮೀಕ್ಷೆ ಹಮ್ಮಿಕೊಳ್ಳಲಾಗಿದೆ ಎಂದರು.ಸಮೀಕ್ಷೆಯನ್ನು ಪರಿಣಾಮಕಾರಿಯಾಗಿ ಮಾಡಲು ಜಿಲ್ಲಾ ಹಂತದಲ್ಲಿ ಗುರುತಿಸಲಾಗಿರುವ ಮಾಸ್ಟರ್

ಟ್ರೈನರ್‌ಗಳಿಗೆ ರಾಜ್ಯ ಮಟ್ಟದಲ್ಲಿ ತರಬೇತಿ ನೀಡಲಾಗಿದ್ದು, ಇವರ ಮೂಲಕ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್‌ಗಳಿಗೆ ಜಿಲ್ಲಾ ಮಟ್ಟದಲ್ಲಿ ತರಬೇತಿ ನೀಡಲಾಗಿದೆ. ಮನೆ–ಮನೆ ಸಮೀಕ್ಷೆಗೆ ನೇಮಕ ಮಾಲಾಗಿರುವ 65,115 ಗಣತಿದಾರರು ಮತ್ತು 5,265 ಮೇಲ್ವಿಚಾರಕರಿಗೆ ಸಮೀಕ್ಷೆಯ ಕುರಿತು ತಾಲ್ಲೂಕು ಮಟ್ಟದಲ್ಲಿ ತರಬೇತಿಯನ್ನು ನೀಡಲಾಗಿದೆ. ಸಮೀಕ್ಷೆಯ ವೇಳೆ ಉದ್ಭವಿಸುವ ತಾಂತ್ರಿಕ ಹಾಗೂ ಇನ್ನಿತರೆ ಪ್ರಶ್ನೆಗಳಿಗೆ ಸಂಬಂಧಿಸಿದಂತೆ ಸ್ಪಷ್ಟೀಕರಣ ನೀಡಲು ಸಹ ತರಬೇತಿ ನೀಡಲಾಗಿದೆ ಎಂದರು.

ಸಮೀಕ್ಷೆಯ ಸಮಯದ ಆರಂಭಿಕ ಹಂತದಲ್ಲಿ ತಾಂತ್ರಿಕ ತೊಂದರೆಗಳನ್ನು ಹೊರತುಪಡಿಸಿ ಸಮೀಕ್ಷೆಯು ಸುಗಮವಾಗಿ ನಡೆಯುತ್ತಿದೆ. 2011ರ ಜನಗಣತಿ ಪ್ರಕಾರ ರಾಜ್ಯದಲ್ಲಿ 21,40,304

ಪರಿಶಿಷ್ಟ ಪಂಗಡಗಳಿದ್ದು, 2025ರ ವೇಳೆಗೆ ಸುಮಾರು 25,72,050 ಪರಿಶಿಷ್ಟ ಜಾತಿ ಕುಟುಂಬಗಳು ಇರಬಹುದೆಂದು ಅಂದಾಜಿಸಲಾಗಿದೆ. ರಾಜ್ಯದ 31 ಜಿಲ್ಲೆಗಳಲ್ಲಿ 18,41,258 ಪರಿಶಿಷ್ಟ ಜಾತಿ ಕುಟುಂಬಗಳನ್ನು ಹಾಗೂ ಪರಿಶಿಷ್ಟ ಜಾತಿಗೆ ಸೇರದ 97,06,233 ಕುಟುಂಬಗಳ ಸಮೀಕ್ಷೆ ಮಾಡಲಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 55,027 ಪರಿಶಿಷ್ಟ ಜಾತಿ ಕುಟುಂಬ, 13,26,323 ಪರಿಶಿಷ್ಟ ಜಾತಿಗೆ ಸೇರದ ಕುಟುಂಬಗಳ ಸಮೀಕ್ಷೆಮಾಡಲಾಗಿದೆ ಎಂದರು.ಜಿಲ್ಲಾವಾರು ಬಾಗಲಕೋಟೆ–61,758, ಬಳ್ಳಾರಿ–46,774, ಬೆಂಗಳೂರು ಗ್ರಾಮಾಂತರ–43,536, ಬಿಬಿಎಂಪಿ–55,027, ಬೆಳಗಾವಿ–1,15,686, ಬೆಂಗಳೂರು–38,769, ಬೀದರ್–61,139 ಚಾಮರಾಜನಗರ–52,860, ಚಿಕ್ಕಬಳ್ಳಾಪುರ–63,879, ಚಿಕ್ಕಮಗಳೂರು–47,527,

ಚಿತ್ರದುರ್ಗ–79,313, ದಕ್ಷಿಣ ಕನ್ನಡ–26,262, ದಾವಣಗೆರೆ–74,557, ಧಾರವಾಡ–35,171, ಗದಗ–34,759, ಹಾಸನ–73,910, ಹಾವೇರಿ–49,748, ಕಲಬುರಗಿ–1,15,940, ಕೊಡಗು–15,494, ಕೋಲಾರ–80,355, ಕೊಪ್ಪಳ–47,766, ಮಂಡ್ಯ–61,481, ಮೈಸೂರು–1,04,939, ರಾಯಚೂರು–79,194, ರಾಮನಗರ–42,044, ಶಿವಮೊಗ್ಗ–54,209, ತುಮಕೂರು–1,10,235, ಉಡುಪಿ–14,631, ಉತ್ತರಕನ್ನಡ–23,965, ವಿಜಯನಗರ–57,363, ವಿಜಯಪುರ–77,449, ಯಾದಗಿರಿ–50,545 ಒಟ್ಟು 18,96,285 ಪರಿಶಿಷ್ಟಜಾತಿ

ಕುಟುಂಬಗಳ ಸಮೀಕ್ಷೆ ನಡೆಸಲಾಗಿದೆ ಎಂದರು.ಪ್ರಾರಂಭಿಕ ಹಂತದ ಸಮೀಕ್ಷೆಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ ಪ್ರಗತಿಯು ಕುಂಠಿತವಾಗಿದ್ದು, ಈ ಕುರಿತು ಬಿಬಿಎಂಪಿ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಬಿಬಿಎಂಪಿ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲಾ ಶಿಕ್ಷಕರ ಕೊರತೆಯಿರುವುದರಿಂದ, ಸಮರ್ಪಕವಾಗಿ ಸಮೀಕ್ಷೆಯನ್ನು ಕೈಗೊಳ್ಳಲು ಪದವಿ ಹೊಂದಿದ ಆಶಾ ಕಾರ್ಯಕರ್ತೆಯರನ್ನು ಅಥವಾ ಅಂಗನವಾಡಿ ಕಾರ್ಯಕರ್ತರನ್ನು ಗಣತಿದಾರರನ್ನಾಗಿ ನೇಮಕ ಮಾಡಲು ಸೂಚಿಸಲಾಗಿದೆ.ಸಮೀಕ್ಷೆ ವೇಳೆ ಉದ್ಭವಿಸುವ ಪ್ರಶ್ನೆಗಳಿಗೆ ಸರಿಯಾದ ಮಾಹಿತಿ ನೀಡಲು ರಾಜ್ಯ ಮಟ್ಟದ ಸಹಾಯವಾಣಿ ಸಂಖ್ಯೆ 9481359000ನ್ನು ಸ್ಥಾಪಿಸಲಾಗಿದೆ.

ಸಹಾಯವಾಣಿಯಲ್ಲಿ ಒಟ್ಟು 15 ಆನ್‌ಲೈನ್‌ಗಳನ್ನು ಅಳವಡಿಸಲಾಗಿದೆ.ಪತ್ರಿಕಾ ಗೋಷ್ಠಿಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷರಾದ ಕಾಂತರಾಜು, ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೇಜರ್ ಮಣಿವಣ್ಣನ್, ಇಡಿಸಿಎಸ್ ಮುಖ್ಯಸ್ಥ ಯತೀಶ್ ಉಪಸ್ಥಿತರಿದ್ದರು.

## ಹೆಚ್ಚಿಸಿ ರಾಜ್ಯ ಸರ್ಕಾರ ಆದೇಶ

ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ಆಶಾ ಕಾರ್ಯಕರ್ತೆಯರಿಗೆ ತಂಡ ಆಧಾರಿತ ಪ್ರೋತ್ಸಾಹ ಧನ ನೀಡುವುದರ ಮೂಲಕ ರೂ. ಗೌರವ ಧನವನ್ನು ರೂ. 1,000 ಹೆಚ್ಚಿಸಲಾಗುವುದು ಎಂದಿದ್ದಾರೆ.

ಆಶಾ ಕಾರ್ಯಕರ್ತೆಯರು ಮಾನ್ಯತೆ ಪಡೆದ ಸಾಮಾಜಿಕ ಆರೋಗ್ಯ ಕಾರ್ಯಕರ್ತೆಯಾಗಿದ್ದು, ಸ್ಥಳೀಯ ಸಮುದಾಯದಿಂದ ಗುರುತಿಸಿ, ಆಯ್ಕೆ ಮಾಡಲಾಗಿದ್ದು, ಅವರ ಗ್ರಾಮ ಅಥವಾ ಪ್ರದೇಶ ವ್ಯಾಪ್ತಿಯಲ್ಲಿ ಸಮುದಾಯ ಆರೋಗ್ಯ ಸ್ಥಿತಿ ಸುಧಾರಣೆಗೆ ಶ್ರಮಿಸುತ್ತಿದ್ದಾರೆ.

ಆರೋಗ್ಯ ಸಿಬ್ಬಂದಿ ಗೌರವ ಧನವೂ ಏರಿಕೆ: ಇನ್ನು ಇದರ ಜೊತೆಗೆ ಆರೋಗ್ಯ ಸಿಬ್ಬಂದಿಗಳ ಗೌರವ ಧನವೂ ಏರಿಕೆ ಮಾಡಿ ಸರ್ಕಾರ ಆದೇಶಿಸಿದೆ. ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಗೌರವ ಧನ 1500 ರೂಪಾಯಿಗೆ ಏರಿಕೆ ಮಾಡಿ ಸರ್ಕಾರ ಆದೇಶಿಸಿದೆ.

# ಸಿದ್ದಯ್ಯಾ ಸ್ವಾಮಿ ನಿಧನ

ಮಲ್ಲಮ್ಮ ನುಡಿ ವಾರ್ತೆ



ಚಿಟಗುಪ್ಪ:ಮೇ.16:ಬೆಂಗಳೂರು ಮಹಾನಗರದ ಬಿಎಮ್‌ಟಿಸಿ ಯಲ್ಲಿ ಚಾಲಕ ಕಂ ನಿರ್ವಾಹಕ ಹುದ್ದೆಯಲ್ಲಿದ್ದ ತಾಲೂಕಿನ ಮೀನಕೇರಾ ಗ್ರಾಮದ ಸಿದ್ದಯ್ಯಾ ಗುರುಲಿಂಗಯ್ಯಾ ಸ್ವಾಮಿ (41) ಕರ್ತವ್ಯದಲ್ಲಿದ್ದಾಗ ಹೃದಯಘಾತದಿಂದ ಶುಕ್ರವಾರ ಮಧ್ಯಾಹ್ನ ನಿಧನರಾಗಿದ್ದಾರೆ. ತಂದೆ, ತಾಯಿ, ಪತ್ನಿ,ಒಬ್ಬ ಗಂಡು ಹಾಗೂ ಒಬ್ಬ ಹೆಣ್ಣು ಮಗಳು, ಇಬ್ಬರೂ ಸಹೋದರರು ಸೇರಿದಂತೆ ಬಂಧು ಬಳಗ ಬಿಟ್ಟು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸ್ವಗ್ರಾಮ ಮೀನಕೇರಾದ ಅವರ ಹೊಲದಲ್ಲಿ ಶನಿವಾರ ಮಧ್ಯಾಹ್ನ 1ಗಂಟೆಗೆ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

# ಸೈಯದ್ ಇಸಾಮುದ್ದೀನ್ ಅವರಿಗೆ ಸನ್ಮಾನ




ಕಲಬುರಗಿ: ಮೇ.13:ತಾಜ್ ನಗರ ಮುಸ್ಲಿಂ ಕಾಲೋನಿ, ಮುಸ್ಲಿಂ ಸಂಘನ ತಾಜ್ ಶಾಲಾ ಮೈದಾನದಲ್ಲಿ ಮಂಗಳವಾರದಂದು ರಜಾ ಕೋಚಿಂಗ್ ಇನ್ಸಿಟ್ಯೂಟ್ ವತಿಯಿಂದ ಒಂದು ಭವ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಎಸ್. ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉನ್ನತ ಸಾಧನೆ ಮಾಡಿದ ಟಾಪರ್‌ಗಳು ಹಾಗೂ ಸಮರ್ ಕ್ಲಾಸಿನಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು.

ಕಾರ್ಯಕ್ರಮದ ವೇಳೆ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳು ಮತ್ತು ಪದಕಗಳನ್ನು ವಿತರಿಸಲಾಯಿತು. ಇದರ ಜೊತೆಗೆ, ಆರು ವಿಭಿನ್ನ ಶಾಲೆಗಳ ಆಯ್ದ ವಿದ್ಯಾರ್ಥಿಗಳಿಗೆ ಸ್ಮರಣಿಕೆಗಳನ್ನು (ಮೆಮೆಂಟೋ) ನೀಡಲಾಯಿತು. ವಿಶೇಷವಾಗಿ ಆ ಮಕ್ಕಳ ಪೋಷಕರಿಗೆ ಪುಷ್ಪಮಾಲೆಯಿಂದ ಗೌರವ ಸಲ್ಲಿಸಲಾಯಿತು. ಈ ಹಂತವು ಕಾರ್ಯಕ್ರಮದ ಅತ್ಯಂತ ಸ್ಪರ್ಶಕಾರಿ ಭಾಗವಾಯಿತು.

ಹಾಲಿ ಮತ್ತು ಕಳೆದ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಶಿಕ್ಷಕರಿಗೂ ಗೌರವ ಸಲ್ಲಿಸಲಾಯಿತು. ಅವರಿಗೆ ಶಾಲು, ಪುಷ್ಪಗುಚ್ಛ ಹಾಗೂ ಸ್ಮರಣಿಕೆಗಳನ್ನು ನೀಡಿ ಅವರ ಸೇವೆಗೆ ಕೃತಜ್ಞತೆ ಸಲ್ಲಿಸಲಾಯಿತು.

ಈ ವಿಶೇಷ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಡಾ. ಶೇಖ್ ಸನಾ ಫರಹೀನ್ ಅವರು ಹಾಜರಾಗಿದ್ದರು. ಅವರು ಎಂ.ಎಸ್ (ಶಲ್ಯ ತಂತ್ರ) ಪರೀಕ್ಷೆಯಲ್ಲಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದಲ್ಲಿ ಎರಡನೇ ರ್ಯಾಂಕ್ ಪಡೆದು ಕಲಬುರಗಿಯ ಹೆಮ್ಮೆ ಆಗಿದ್ದಾರೆ. ಅವರು ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನಿಂದ ಬರುವವರು. ಅವರ ಸಾಧನೆಯನ್ನು ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿ ಸೂಚಿಸಿ, ಧೈರ್ಯ ಹಾಗೂ ಪರಿಶ್ರಮದಿಂದ ಅಧ್ಯಯನ ಮುಂದುವರೆಸಬೇಕೆಂದು ಸಲಹೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಇತರ ಗಣ್ಯ ಅತಿಥಿಗಳಲ್ಲಿ ಅಮೀನ್ ಪಟೇಲ್ (ನ್ಯಾಷನಲ್ ಸ್ಕೂಲ್), ನಸೀರ್ ಮಣಿಯಾಲ್ (ಶೇಖ್ ರೋಜಾ ಸರ್ಕಾರಿ ಶಾಲೆ), ಜಾಕಿಯಾ ಪ್ರವೀಣ್ (ಬಿ.ಬಿ. ರಜಾ ಗರ್ಲ್ಸ್ ಹೈ ಸ್ಕೂಲ್), ಅಬ್ದುರ್ರಹ್ಮಾನ್ ಸಾಹೇಬ್ ಮತ್ತು ಶಂಷುದ್ದೀನ್ ಸಾಹೇಬ್ ಉಪಸ್ಥಿತರಿದ್ದರು. ಹಲವಾರು ಶಾಲೆಗಳ ಶಿಕ್ಷಕರು, ಪೋಷಕರು, ಪಾಲಕರು ಮತ್ತು ಪ್ರದೇಶದ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡರು.

ಈ ಕಾರ್ಯಕ್ರಮವನ್ನು ತಾಜ್ ಉರ್ದೂ ಹೈಸ್ಕೂಲ್‌ನ ಮುಖ್ಯೋಪಾಧ್ಯಾಯರು ಮಧುಮತಿ ನಾದಿರಾ ಬೇಗಮ್ ಅವರ ಮಾರ್ಗದರ್ಶನದಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಸಲಾಯಿತು.

## ಮಂಜುನಾಥ್ ದಾಳಿ ಸ್ಥಳ ನೋಡ್ಕೊಂಡು ಬರಲಿ: ಯತ್ನಾಳ್

ಹೊಡೆದ್ರೆ ಹೇಗೆ ಸಹಿಸೋದು? ಆ ಹೆಣ್ಣು ಮಕ್ಕಳು ಗಟ್ಟಿಯಾಗಿರೋದಕ್ಕೆ ಪರವಾಗಿಲ್ಲ. ಇಲ್ಲಾ ಅಂದ್ರೆ ಹಾರ್ಟ್ ಅಟ್ಯಾಕ್ ಆಗಿ ಸಾಯಬೇಕಿತ್ತು. ಅಂತಹದಕ್ಕೆ ಪರಿಹಾರ ಇದಲ್ಲ, ಬೇರಿಂದ ಕೊಂಬೆ ತನಕ ಎಲ್ಲವನ್ನ ಹೊಡಿಯಬೇಕು. ಭಾರತಕ್ಕೆ ಒಳ್ಳೆಯ ಅವಕಾಶ ಇತ್ತು. ಆದ್ರೆ ಏನೂ ಮಾಡಿಲ್ಲ ಅನ್ನೋದು ಬೇಸರ ತಂದಿದೆ ಎಂದಿದ್ದರು.

ಈ ಹೇಳಿಕೆಗೆ ವಿರೋಧ ವ್ಯಕ್ತವಾಗುತ್ತಿದ್ದಂತೆ ಆಪರೇಷನ್ ಸಿಂಧೂರ ಸಮಾಧಾನ ತಂದಿಲ್ಲ ಅಂದಿದ್ದು, ಸೇನೆ ಬಗ್ಗೆ ಹಗುರವಾಗಿ ಮಾತಾಡಿಲ್ಲ ಎಂದು ಮಂಜುನಾಥ್ ಸ್ಪಷ್ಟನೆ ನೀಡಿದ್ದರು.

# ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮೀಕ್ಷೆ ದಿನಾಂಕ ವಿಸ್ತರಣೆ



ಬೀದರ :ಮೇ.16: ನ್ಯಾಯಮೂರ್ತಿಗಳಾದ ಗೌರವಾನ್ವಿತನಾಗಮೋಹನ್‌ದಾಸ್, ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿ ಒಳ ಮೀಸಲಾತಿ ಮನೆ ಮನೆ ಸಮೀಕ್ಷೆ ದಿನಾಂಕ: 25–05–2025 ರವರೆಗೆ, ವಿಶೇಷ ಶಿಬಿರವು ದಿನಾಂಕ: 26–05–2025 ರಿಂದ 28–05–2025 ರವರೆಗೆ ಹಾಗೂ

ಆನ್‌ಲೈನ್ ಮೂಲಕ ಸ್ವ–ಯಂ ದೃಢೀಕರಣ ಮಾಡಲು ದಿನಾಂಕ: 19–05–2025 ರಿಂದ 28–05–2025 ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮೀಕ್ಷೆಯನ್ನು ನಡೆಸುವ ಸಮಯದಲ್ಲಿ ನವಜಾತ ಶಿಶುವಿನ ವಯಸ್ಸನ್ನು ಶೂನ್ಯ (0) ಎಂದು ಆ್ಯಪ್‌ನಲ್ಲಿ ನಮೂದಿಸಬಹುದು. ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ನಡೆಸುವಾಗ ಆ್ಯಪ್‌ನಲ್ಲಿ ಎಸ್.ಟಿ. ಅಥವಾ ಇತರೆ ಯಾವುದೇ ಅನ್ಯ ಜಾತಿ ನಮೂದಾಗಿದ್ದಲ್ಲಿ ಆ ಕುಟುಂಬ ಮುಖ್ಯಸ್ಥರ ಹೆಸರು, ಪಡಿತರ ಚೀಟಿ ಸಂಖ್ಯೆ, ಜಾತಿ/ಉಪಜಾತಿ ಮತ್ತು ಆರ್.ಡಿ. ಸಂಖ್ಯೆಯನ್ನು ದಾಖಲಿಸಿ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡೆಂಗ್ಯೂ ಜ್ವರದ ಬಗ್ಗೆ ಭಯ ಬೇಡ ಎಚ್ಚರವಿರಲಿ: ಉಪ ಮೇಯರ್ ಡಿ.ಸುಕುಂ




ಬಳ್ಳಾರಿ, ಮೇ 16:ಡೆಂಗ್ಯೂ ಜ್ವರದ ಅಪಾಯಗಳು ಮತ್ತು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು, ರೋಗ ಲಕ್ಷಣ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ದೇಶದಲ್ಲಿ ಪ್ರತಿ ವರ್ಷ ಮೇ 16 ರಂದು ರಾಷ್ಟ್ರೀಯ ಡೆಂಗ್ಯೂ ದಿನ ಆಚರಿಸಲಾಗುತ್ತದೆ ಎಂದು ಮಹಾನಗರ ಪಾಲಿಕೆಯ ಉಪ ಮಹಾಪೌರರಾದ ಡಿ.ಸುಕುಂ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ "ಡೆಂಗ್ಯೂ ಸೋಲಿಸಲು ಹೆಜ್ಜೆಗಳು: ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ" ಎಂಬ ಘೋಷವಾಕ್ಯದಡಿ "ರಾಷ್ಟ್ರೀಯ ಡೆಂಗ್ಯೂ" ದಿನಾಚರಣೆ ಅಂಗವಾಗಿ ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳು, ಮೇಲ್ವಿಚಾರಕರು ಹಾಗೂ ಪೌರ ಕಾರ್ಮಿಕರಿಗೆ ಜಿಲ್ಲಾ ಮಟ್ಟದ ಪುನರ್ ಮನನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಡೆಂಗ್ಯೂ ಜ್ವರದ ಬಗ್ಗೆ ಭಯ ಬೇಡ ಆದರೆ ಎಚ್ಚರವಿರಲಿ. ಎಲ್ಲರೂ ನಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡು ಡೆಂಗ್ಯೂ ರೋಗ ಹರಡದಂತೆ ತಡೆಯೋಣ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಮಾತನಾಡಿ, ಜಿಲ್ಲೆಯಾದ್ಯಂತ ಡೆಂಗ್ಯೂ ಜ್ವರ ಹರಡುವುದನ್ನು ಎದುರಿಸಲು ಮತ್ತು ನಿಯಂತ್ರಿಸಲು ಆರೋಗ್ಯ ಇಲಾಖೆಯು ಮಾಡುತ್ತಿರುವ ನಿರಂತರ ಪ್ರಯತ್ನಗಳ ಭಾಗವಾಗಿ ಪ್ರತಿ ವರ್ಷ ಮೇ 16 ರಂದು ರಾಷ್ಟ್ರಿಯ ಡೆಂಗ್ಯೂ ದಿನವನ್ನು ಆಚರಿಸಲಾಗುತ್ತದೆ.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾ ಕಛೇರಿಯ ವಾರ್ಷಿಕವಾಗಿ ಆಯೋಜಿಸುವ ಈ ದಿನವು ಡೆಂಗ್ಯೂ (ಸೊಳ್ಳೆಯಿಂದ ಹರಡುವ ವೈರಸ್) ಬಗ್ಗೆ ಜಾಗೃತಿ ಮೂಡಿಸಲು ಮತ್ತು ತಡೆಗಟ್ಟುವಿಕೆ, ಶಿಕ್ಷಣ ಮತ್ತು ಆರಂಭಿಕ ಹಸ್ತಕ್ಷೇಪ ತಂತ್ರಗಳ ಮೂಲಕ ಸಾಮೂಹಿಕ ಕ್ರಮವನ್ನು ಉತ್ತೇಜಿಸಲು ಸಮರ್ಪಿಸಲಾಗಿದೆ ಹಾಗೂ ಜಿಲ್ಲೆಯಲ್ಲಿ ಯಾವುದೇ ಡೆಂಗಿ ಮರಣ ಪ್ರಕರಣಗಳು ವರದಿಯಾಗದಂತೆ ಸಮಯೋಚಿತರಾಗಿ ಕಾರ್ಯನಿರ್ವಹಿಸಲು ಹಾಗೂ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಶಸ್ತ್ರ ಚಿಕಿತ್ಸರಾದ ಡಾ.ಎನ್.ಬಸರೆಡ್ಡಿ ಮಾತನಾಡಿ, ಡೆಂಗ್ಯೂ ಎಂಬುದು ಸೋಂಕಿತ ಈಡಿಸ್ ಈಜಿಪ್ಟಿ ಸೊಳ್ಳೆಯ ಕಡಿತದಿಂದ ಹರಡುವ ವೈರಸ್ ಆಗಿದ್ದು, ಇದನ್ನು ಸಾಮಾನ್ಯವಾಗಿ ಡೆಂಗ್ಯೂ ಸೊಳ್ಳೆ ಎಂದು ಕರೆಯಲಾಗುತ್ತದೆ.

ಈ ರೋಗವು ಸೊಳ್ಳೆಗಳ ಸಂತಾನೋತ್ಪತ್ತಿ ಪರಿಸ್ಥಿತಿಗಳು ಸೂಕ್ತವಾಗಿರುವ ಮಳೆಗಾಲ ಮತ್ತು ನಂತರ ಹೆಚ್ಚಾಗುತ್ತದೆ. ಡೆಂಗ್ಯೂ ತಡೆಗಟ್ಟುವ ಕಾರ್ಯಕ್ರಮಗಳಲ್ಲಿ ಸಮುದಾಯ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು.

ಚಿಕಿತ್ಸೆ ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಹರಡುವುದು.

ಸರ್ಕಾರದ ಉಪಕ್ರಮಗಳು ಮತ್ತು ಆರೋಗ್ಯ ಸೇವೆಯ ಲಭ್ಯತೆಯನ್ನು ಎತ್ತಿತೋರಿಸುವುದು.

ಡೆಂಗ್ಯೂ ಋತುವಿಗೆ ಮುನ್ನ ಮುಂಜಾಗ್ರತಾ ಕ್ರಮಕೈಗೊಳ್ಳಲು ಸ್ಥಳೀಯ ಅಧಿಕಾರಿಗಳನ್ನು ಸಜ್ಜುಗೊಳಿಸುವುದು ಎಂದು ತಿಳಿಸಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಪ್ರಾಸ್ತವಿಕವಾಗಿ ಮಾತನಾಡಿ, ರಾಜ್ಯಾದ್ಯಂತ ಡೆಂಗ್ಯೂ ಈಗ ಸ್ಥಳೀಯ ರೋಗವಾಗಿರುವುದರಿಂದ ಹೆಚ್ಚಿನ ಜನರು ಡೆಂಗ್ಯು ಸೋಂಕಿನ ಅಪಾಯದಲ್ಲಿದ್ದಾರೆ. ರಾಷ್ಟ್ರೀಯ ಡೆಂಗ್ಯೂ ದಿನ–2025 ನ್ನು ಡೆಂಗ್ಯೂ ಸೋಲಿಸುವ ಹೆಜ್ಜೆಗಳು: ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ ಎಂಬ ಘೋಷಾವಾಕ್ಯದೊಂದಿಗೆ ಪ್ರಸ್ತುತ ಜಿಲ್ಲೆಯಲ್ಲಿ ಬೀಳುತ್ತಿರುವ ಬೇಸಿಗೆ ಮಳೆ ಹಾಗೂ ಮುಂಬರುವ ಮಳೆಗಾಲದ ದಿನಗಳಲ್ಲಿ ಡೆಂಗಿ ಜ್ವರ ಹರಡುವ ಈಡೀಸ್ ಸೊಳ್ಳೆಗಳ ಉತ್ಪತ್ತಿ ತಾಣಗಳು ಹೆಚ್ಚಾಗಿದ್ದು, ಡೆಂಗ್ಯೂ ಜ್ವರ ಪ್ರಕರಣವು ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿ ಪರಿಣಮಿಸುವ ಸಾಧ್ಯತೆ ಅಧಿಕವಾಗಿರುವ ಹಿನ್ನಲೆಯಲ್ಲಿ ಡೆಂಗ್ಯೂ ನಿಯಂತ್ರಣದ ಸಂಬಂಧ ಈಡೀಸ್ ಲಾರ್ವ ನಿರ್ಮೂಲನೆಯನ್ನು ತೀವ್ರಗೊಳಿಸುವುದು ಪ್ರಮುಖ ಗುರಿಯಾಗಿದೆ.

ಡೆಂಗ್ಯೂ ಜ್ವರ ನಿಯಂತ್ರಣದಲ್ಲಿ ಈಡೀಸ್ ಲಾರ್ವ ನಿರ್ಮೂಲನೆಯೇ ಅಸ್ತ್ರವಾಗಿದ್ದು, ಈಡೀಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ಪರಿಶೀಲಿಸಿ, ಸ್ವಚ್ಚಗೊಳಿಸಿ, ಮುಚ್ಚಿಡುವುದರ ಮೂಲಕ ಈಡೀಸ್ ಉತ್ಪತ್ತಿಯನ್ನು ನಿಯಂತ್ರಿಸಬಹುದಾಗಿದೆ. ಈ ಸರಳ ವಿಧಾನದಿಂದ ಡೆಂಗ್ಯೂ ಜ್ವರ ಪ್ರಕರಣವನ್ನು ತಡೆಗಟ್ಟಬಹುದಾಗಿದ್ದು, ಸದರಿ ಚಟುವಟಿಕೆಯನ್ನು ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ಹಾಗೂ ತಮ್ಮ ದೈನಂದಿನ ಕರ್ತವ್ಯದ ಭಾಗವಾಗಿ ಕೈಗೊಳ್ಳುವಂತೆ ಮಾಡುವುದು ಅಗತ್ಯವಾಗಿದೆ ಎಂದು ಹೇಳಿದರು.

ಡೆಂಗ್ಯೂ ಜ್ವರದ ಲಕ್ಷಣಗಳು:

ತೀವ್ರಜ್ವರ, ತೀವ್ರ ತಲೆನೋವು, ಕಣ್ಣುಗಳ ಹಿಂದೆ ನೋವು, ಸ್ನಾಯು ಮತ್ತು ಕೀಲು ನೋವು, ವಾಕರಿಕೆ ಮತ್ತು ವಾಂತಿ, ಚರ್ಮದ ದದ್ದು, ಸೌಮ್ಯ ರಕ್ತಸ್ರಾವ (ಉದಾ: ಮೂಗಿನ ರಕ್ತಸ್ರಾವ, ಒಸಡುಗಳಿಂದ ರಕ್ತಸ್ರಾವ).

ಹೆಚ್ಚಿನ ಡೆಂಗ್ಯೂ ಪ್ರಕರಣಗಳು ಸೌಮ್ಯವಾಗಿರುತ್ತವೆ. ಆದರೆ ಕೆಲವು ಸಂದರ್ಭಗಳಲ್ಲಿ ಇದು ತೀವ್ರವಾದ ಡೆಂಗ್ಯೂ ಆಗಿ ಮುಂದುವರಿಯಬಹುದು. ಇದನ್ನು ಡೆಂಗ್ಯೂ ಹೆಮರಾಜಿಕ್ಜ್ವರ ಎಂದೂ ಕರೆಯುತ್ತಾರೆ. ಇದು ಆಂತರಿಕ ರಕ್ತಸ್ರಾವ, ಅಂಗಾಂಗ ವೈಫಲ್ಯ ಮತ್ತು ಸಾವಿಗೆ ಕಾರಣವಾಗಬಹುದೆಂದು ತಿಳಿಸಿದರು.

ಇದೇ ವೇಳೆ ಕಾರ್ಯಕ್ರಮದಲ್ಲಿ ಡೆಂಗ್ಯೂ ನಿಯಂತ್ರಣ ನಮ್ಮೆಲ್ಲರ ಜವಬ್ದಾರಿ ಎಂಬ ಭಿತ್ತಿಪತ್ರವನ್ನು ಬಿಡುಗಡೆಗೊಳಿಸಿದರು.

ಬಳಿಕ ಜಿಲ್ಲಾ ವಿಬಿಡಿಸಿ ಸಮಾಲೋಚಕರಾದ ಪ್ರತಾಪ್. ಹೆಚ್ ಅವರು ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳಿಗೆ, ಮೇಲ್ವಿಚಾರಕರಿಗೆ ಹಾಗೂ ಪೌರ ಕಾರ್ಮಿಕರಿಗೆ ಈಡೀಸ್ ಲಾರ್ವ ಉತ್ಪತ್ತಿ ತಾಣಗಳ ನಾಶ ಕಾರ್ಯದ ಕುರಿತು ತರಬೇತಿ ನೀಡಿದರು.

ಡೆಂಗ್ಯೂ ದಿನಾಚರಣೆ ಅಂಗವಾಗಿ ಜಿಲ್ಲಾ ಆಸ್ಪತ್ರೆ ಮುಂಭಾಗದಲ್ಲಿ ಮಾನವ ಸರಪಳಿ ನಿರ್ಮಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳಾದ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ವೀರೇಂದ್ರಕುಮಾರ್, ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ವಿಬಿಡಿಸಿ ಕಾರ್ಯಕ್ರಮ ಅನುಷ್ಠನಾ ಅಧಿಕಾರಿಗಳಾದ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಈಶ್ವರ ದಾಸಪ್ಪನವರ ಸೇರಿದಂತೆ ರವೀಂದ್ರಜಿನಗಾ, ಮರಿಬಸವನ ಗೌಡ ಚಾನಾಳ್ ಹಾಗೂ ಶಕುಂತಲಾ.ಬಿ, ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ವಿಬಿಡಿಸಿ ಸಿಬ್ಬಂದಿ ವರ್ಗದವರು ಇತರರು ಉಪಸ್ಥಿತರಿದ್ದರು.

# 18, 19ರಂದು ಜಗನ್ನಾಥ ಮಂದಿರದಲ್ಲಿ ಅಮೋಘ ಲೀಲಲ ಅವರ ಕಾರ್ಯಕ್ರಮ: ರಾಮಕೃಷ್ಣನ್ ಸಾಳೆ



ಬೀದರ. ಮೇ. 16 : ಈ ತಿಂಗಳ 18 ಹಾಗೂ 19ರಂದು ಎರಡು ದಿನಗಳ ಕಾಲ ವಿಶ್ವ ವಿಖ್ಯಾತ ವಾಗ್ಮಿಗಳಾದ ಅಮೋಘ ಲೀಲ ಅವರು ನಗರದ ಹೊರವಲಯದಲ್ಲಿರುವ ಜಗನ್ನಾಥ ಮಂದಿರದಲ್ಲಿ ಎರಡು ದಿನಗಳ ಕಾಲ ಕಾರ್ಯಕ್ರಮ ನೀಡಲಿದ್ದಾರೆ ಎಂದು ವಿಶ್ವ ಹಿಂದು ಪರಿಷತ್ ಕೇಂದ್ರೀಯ ಅಧಿಕಾರಿ ರಾಮಕೃಷ್ಣನ್ ಸಾಳೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈ ತಿಂಗಳ 18ರಂದು ಅಮೋಘ ಲೀಲ ಅವರು ಹೈದ್ರಾಬಾದ್‌ನಿಂದ ಹೊರಟು ಸರಿಯಾಗಿ ಮಧ್ಯಾಹ್ನ 12 ಗಂಟೆಗೆ ನಗರದ ಹೈದ್ರಾಬಾದ್ ರಸ್ತೆಯಲ್ಲಿರುವ ಶಹಾಪುರ ಗೇಟ್‌ನಲ್ಲಿ ಅವರನ್ನು ಜಗನ್ನಾಥ ಮಂದಿರ ಟ್ರಸ್ಟಿನಿಂದ ಭವ್ಯವಾಗಿ ಸನ್ಮಾನಿಸಿ ಬೈಕ್ ರ್‍ಯಾಲಿ ಮೂಲಕ ಅವರನ್ನು ನಗರದ ಬಸವೇಶ್ವರ ವೃತ್ತ, ಅಂಬೇಡ್ಕರ್ ಸರ್ಕಲ್, ಜನವಾಡ ರಸ್ತೆಯಲ್ಲಿನ ರೋಕಡೆ ಹನುಮಾನ ಮಂದಿರದ ಮುಂಭಾಗದಿಂದ ಹಾದು ನಾವದಗೇರಿ ಮೂಲಕ ಚಿಕಪೇಟ್ ತೆರಳಿ ಅಲ್ಲಿಂದ ಮಧ್ಯಾಹ್ನ 12.30 ಗಂಟೆಗೆ ಜಗನ್ನಾಥ ಮಂದಿರಕ್ಕೆ ಕರೆ ತರಲಾಗುತ್ತದೆ ಎಂದರು.

ಸಾಯಂಕಾಲ 6.30 ಗಂಟೆಗೆ ಕಥಾ ಕೀರ್ತನ, ನಂತರ ಆರತಿ, ತದನಂತರ ರಾತ್ರಿ 8.00 ಗಂಟೆಗೆ ಮಹಾಪ್ರಸಾದ ವಿತರಿಸಲಾಗುವುದು. 19ರಂದು ಬೆಳಿಗ್ಗೆ 5 ಗಂಟೆಗೆ ಮಂಗಲ ಆರತಿ, ಬೆಳಿಗ್ಗೆ 5.30 ಗಂಟೆಯಿಂದ 7.30 ಗಂಟೆ ವರೆಗೆ ಜಪಯಜ್ಞ, ಬೆಳಿಗ್ಗೆ 8.30 ಗಂಟೆಯಿಂದ 9.30 ಗಂಟೆ ವರೆಗೆ ಭಗವತಮ ಕ್ಲಾಸ್, ಸಾಯಂಕಾಲ 6 ಗಂಟೆಯಿಂದ ರಾತ್ರಿ 8.30 ಗಂಟೆ ವರೆಗೆ ಕಥಾ ಕೀರ್ತನ, ನಂತರ ಆರತಿ, ತದನಂತರ ಮಹಾ ಪ್ರಸಾದ ವಿತರಿಸಲಾಗುವುದೆಂದು ಹೇಳಿದರು.

ಅಮೋಘಲೀಲ ಅವರು ಭಾರತದ ಎರಡನೇ ಅತಿ ದೊಡ್ಡಭಾಷಣಕಾರರಾಗಿರುವರು. ಇಸ್ಕಾನ್ ದೇವಾಲಯದ ಅಧ್ಯಾತ್ಮ ಪ್ರಚಾರಕರಾಗಿದ್ದಾರೆ. ಶ್ರೀಕೃಷ್ಣನ ಬಗ್ಗೆ ಇಡೀ ದೇಶ ಅಷ್ಟೆ ಅಲ್ಲ ಜಗತ್ತಿನಾದ್ಯಂತ ಭಗವಾನ ಶ್ರೀಕೃಷ್ಣನ ಬಗ್ಗೆ, ಅವರ ಲೀಲೆಯನ್ನು ಪ್ರಚುರಪಡಿಸುವ ಮಹತ್ತರ ಕಾರ್ಯಕೈಗೊಂಡಿರುವರು. ಅಂಥ ಮಹಾನ ವಾಗ್ಮಿಗಳು ಬೀದರ್‌ಗೆ ಬಂದು ತಮ್ಮ ಅನುಭಾವ ಪ್ರಸ್ತುತಪಡಿಸುತ್ತಿರುವುದು ಶ್ರೇಷ್ಠ ಕಾರ್ಯವಾಗಿದೆ. ಆದ್ದರಿಂದ ಜಿಲ್ಲೆಯ ಸನಾತನ ಪರಂಪರೆಯುಳ್ಳ ಸಮುದಾಯದವರು, ಹರಿಭಕ್ತರು, ಶ್ರೀಕೃಷ್ಣನ ಅನುಯಾಯಿಗಳು, ಜಗನ್ನಾಥ ಮಂದಿರದ ಸಮಸ್ತ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಎರಡು ದಿವಸದ ಕಾರ್ಯಕ್ರಮದ ಲಾಭ ಪಡೆದುಕೊಳ್ಳಬೇಕೆಂದು ಕಿವಿ ಮಾತು ಹೇಳಿದರು.

ಜಗನ್ನಾಥ ಮಂದಿರದ ಟ್ರಸ್ಟಿಗಳಾದ ರಾಜಕುಮಾರ ಅಳ್ಳೆ, ಡಾ.ನಿಲೇಶ ದೇಶಮುಖ, ಡಾ.ಯಲ್ಲಾಲಿಂಗ, ಅಭಿಷಕ ಆನಂದೆ, ಸಿದ್ರಾಮೇಶ್ವರ ಪತ್ರಿಕಾಗೋಷ್ಠಿಯಲ್ಲಿದ್ದರು.

# ಡಾ. ನಾಗರಾಜ ಲೋಕರೆ ಅವರಿಗೆ ಅಸ್ಲಾಂಮಿಯಾರಿಂದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮೇ.16: ಬೀದರ್ ಶಾಹೀನ ಶಿಕ್ಷಣ ಸಂಸ್ಥೆಯಲ್ಲಿ 2009ನೇ ಸಾಲಿನಲ್ಲಿ ಶಿಕ್ಷಣ ಪಡೆದು ಬೆಂಗಳೂರಿನಲ್ಲಿ ಎಂಬಿಬಿಎಸ್, ಎಂಡಿ ಶಿಕ್ಷಣ ಪಡೆದು ಗಂಗಾವತಿ ನಗರದ ವರಸಿದ್ಧಿ ಆಸ್ಪತ್ರೆಯಲ್ಲಿ ಸೇವೆಸಲ್ಲಿಸುತ್ತಿರುವ ಡಾ. ನಾಗರಾಜ ಲೋಕರೆ ಹಾಗೂ ಅವರ ಧರ್ಮ ಪತ್ನಿ ಡಾ. ಎ. ವಿ. ಶ್ರೀಶಾ ಅವರನ್ನು ಬೀದರನ ಶಾಹೀನ ಶಿಕ್ಷಣ ಸಂಸ್ಥೆಯಲ್ಲಿ ಚಿಟಗುಪ್ಪಪಟ್ಟಣದ ಉದ್ಯಮಿಗಳು ಸಾಮಾಜಿಕ ಕಾರ್ಯಕರ್ತರಾದ ಮಹಮ್ಮದ್ ಅಸ್ಲಾಂಮಿಯಾ ಅವರು ಶಾಲು ಹೊದಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶಾಹೀನ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ಚಾಂದಪಾಶ, ತಹೋರಾ ಮಾಹಿನ್ ಸೇರಿದಂತೆ ಇತರರಿದ್ದರು.

# ವಿದ್ಯಾರ್ಥಿಗಳಲ್ಲಿ ಸಂಸ್ಕಾರಯುತ ಶಿಕ್ಷಣ ಅಗತ್ಯ: ಮಂಜುನಾಥ ಭಾರತಿ ಶ್ರೀ

ಬೀದರ. ಮೇ. 16 : ವಿದ್ಯಾರ್ಥಿಗಳಲ್ಲಿ ಗುಣಾತ್ಮಕ ಶಿಕ್ಷಣದ ಜೊತೆಗೆ ಅವರಲ್ಲಿ ಸಂಸ್ಕಾರ ಒಡಮೂಡಬೇಕಾದಲ್ಲಿ ಸುಸಂಸ್ಕೃತ ಶಿಕ್ಷನದ ಅಗತ್ಯವಿದೆ ಎಂದು ಬೆಂಗಳೂರಿನ ಗೋಸಾವಿ ಮಠದ ಜಗದ್ಗುರು ವೇದಾಚಾರ್ಯ ಮಂಜುನಾಥ ಭಾರತಿ ಮಹಾಸ್ವಾಮಿಜಿ ನುಡಿದರು.

ತಾಲೂಕಿನ ಅಣದೂರವಾಡಿ ಗ್ರಾಮದಲ್ಲಿ ಗುರುವಾರ ನೂತನವಾಗಿ ಪ್ರಾರಂಭಿಸಲಾದ ಪರಿವರ್ತನ ಪದವಿ ಪೂರ್ವ ವಿಜ್ಞಾನ ವಸತಿ ಕಾಲೇಜು ಉದ್ಘಾಟಿಸಿ ಮಾತನಾಡಿರುವ ಶ್ರೀಗಳು, ಇಂದು ವಿದ್ಯರ್ಥಿಗಳಲ್ಲಿ ಸನ್ನಡತೆ, ಸಹನಶೀಲತೆ, ಸದ್ಗುಣ ಇವು ಬೇರೂರಲು ಸಂಸ್ಕಾರಯುತ ಶಿಕ್ಷಣದ ಅಗತ್ಯವಿದೆ. ವಿದ್ಯಾಥಿಗಳಲ್ಲಿ ಶಿಸ್ತುಬರಬೇಕಾದರೆ ಶಿಕ್ಷಣದಿಂದ ಮಾತ್ರಸಾಧ್ಯ. ಹಾಗಾಗಿ ನೈತಿಕ ಹಾಗೂ ಮೌಲ್ಯಾಧಾರಿತ ಶಿಕ್ಷಣದ ಜರೂರಿ ಇದೆ ಎಂದರು.

ಇಂದು ಶಿಕ್ಷಕರಾದವರು ವಿದ್ಯಾರ್ಥಿಗಳಿಗೆ ಸಂಸ್ಕೃತಿ, ಸಂಸ್ಕಾರ, ಜೀವನದ ನಡತೆಯನ್ನು ಕಲಿಸಿ ಕೊಡಬೇಕಿದೆ. ಅದು ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಅನುಕುಲ ಆಗಲಿದೆ. ಹಿಂದೆ ಪ್ರಭುಶ್ರೀರಾಮನು ತನ್ನ ಸಾಮ್ರಾಜ್ಯದಲ್ಲಿ ಜನ ಸಾಮಾನ್ಯರಿಗೆ ಮೊದಲು ಶಿಕ್ಷಣ ಬೊಧಿಸಿದನು. ಅದಕ್ಕಾಗಿಯೇ ಐದು ಸಾವಿರ ವರ್ಷವಾದರೂ ಅಯೋಧ್ಯೆಯಲ್ಲಿ ರಾಮನ ಮಂದಿರ ನಿರ್ಮಾಣ ಆಗಲು ಸಾಧ್ಯವಾಯಿತು. ಇವತ್ತಿಗೂ ಎಷ್ಟೊ ಜನರಿಗೆ ಬಸ್‌ಗಳ ಮೇಲಿರುವ ಬೋಡ್‌ಗಳು ತಿಳಿಯಲು ಆಗುವುದಿಲ್ಲ. ಇತರರಿಗೆ ಕೇಳಿ ಬಸ್ ಒಳಗೆ ಏರಬೇಕು. ಪರತಂತ್ರ ಜೀವನ ನಡೆಸಬೇಕಿದ್ದು ಶಿಕ್ಷಣ ಇದ್ದರೆ ಎಲ್ಲವೂ ಸಾಧ್ಯ. ಹಾಗಾಗಿ ಮನುಷ್ಯನ ಸರ್ವಾಮಗಿಣ ವಿಕಾಸಕ್ಕೆ ಇದು ರಹದಾರಿಯಾಗಿದೆ ಎಂದರು.

ಬೀದರ್ ಚಿದಂಬರಾಶ್ರಮದ ಪೂಜ್ಯ ಡಾ.ಶಿವಕುಮಾರ ಮಹಾಸ್ವಾಮಿಜಿ ಸಾನಿಧ್ಯ ವಹಿಸಿ ಮಾತನಾಡಿ, ಇಂದು ವಿದ್ಯಾರ್ಥಿಗಳಿಗೆ ಮೆಕಾಲೆ ಶಿಕ್ಷಣ ಬೇಕಿಲ್ಲ, ಬದಲಿಗೆ ತಂದೆ, ತಾಯಿ ಹಾಗೂ ಧರ್ಮವನ್ನು ಅರಿತುಕೊಳ್ಳುವ ನೈತಿಕ ಹಾಗೂ ಮಾನವಿಯ ಮೌಲ್ಯಯುತ ಶಿಕ್ಷಣದ ಅಗತ್ಯವಿದೆ. ಇಂದು ಬಹಳಷ್ಟು ವಿದ್ಯಾರ್ಥಿಗಳು ಇಂಜಿನಿಯರ್, ಡಾಕ್ಟರ್‌ನಂತಹ ವೃತ್ತಿ ಶಿಕ್ಷಣ ಪಡೆದ ತಕ್ಷಣ ತಮ್ಮ ತಂದೆ ತಾಯಿಗಳನ್ನು ಗ್ರಾಮದಲ್ಲಿಯೇ ಬಿಟ್ಟು ಸಿಟಿ ಸೇರಿ, ಸಂಸ್ಕಾವಿಲ್ಲದ ಬದುಕು ಸಾಗಿಸುತ್ತಾರೆ. ಅಂಥವರನ್ನು ಅನುಕರಿಸದೇ ನಿತ್ಯ ತಂದೆ, ತಾಯಿ, ಗುರು, ಹಿರಿಯರನ್ನು ಗೌರವಿಸುವ ಶಿಷ್ಯರನ್ನಾಗಿ ತಯ್ಯಾರಿಸಲು ಈ ಕಾಲೇಜು ಮುಂದೆ ಬರಬೇಕು ಎಂದರು.

ವಿಧಾನ ಪರಿಷತ್ ಸದಸ್ಯ ಮಾರೂತಿರಾವ ಮುಳೆ ಮುಖ್ಯ ಅತಿಥಿಗಳಾಗಿ ಮಾತನಾಡಿ, ಇಂದು ಸ್ಪರ್ಧಾತ್ಮಕ ಶಿಕ್ಷಣದ ಅಗತ್ಯವಿದೆ. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆ ಹಾಗೂ ಸಾಮಾನ್ಯ ಜ್ಞಾನವುಳ್ಳ ಶಿಕ್ಷಣ ಬೋಧಿಸಬೇಕೆಂದು ಕರೆಕೊಟ್ಟರು. ಬಸವಕಲ್ಯಾಣ ಶಾಸಕ ಶರಣು ಸಲಗರ, ಅಣದುರ ಗ್ರಾ.ಪಂ ಅಧ್ಯಕ್ಷೆ ಮೀನಾಕ್ಷಿ ಮಾದಪ್ಪ, ಗ್ರಾ.ಪಂ ಉಪಾಧ್ಯಕ್ಷೆ ಶ್ರೀದೇವಿ ಅಂಬಾದಾಸ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷೆ ಗೀತಾ ಚಿದ್ರಿ, ಮಾಜಿ ಜಿ.ಪಂ ಅಧ್ಯಕ್ಷ ಬಾಬುರಾವ ಕಾರಬಾರಿ, ಮಾಜಿ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಂಡಿತರಾವ ಚಿದ್ರಿ, ಮರಾಠಾ ಸಮಾಜದ ಮುಖಂಡರಾದ ಕಿಶನರಾವ ಪಾಟೀಲ ಇಂಚೂರಕರ್, ಜರ್ನಾಧನ ಬಿರಾದಾರ, ಜನಾರ್ಧನ ಪಾಟೀಲ, ಅಶೋಕ ಸೋಂಜಿ, ಡಿಗಂಬರರಾವ ಮಾನಕಾರಿ, ಕೇಶವರಾವ ಕಣಜಿಕರ್, ಸತೀಶ ವಾಸರೆ, ಮಾಧವರಾವ ಕಾದೆಪುರಕರ್, ವಸಂತಾ ಕಾಲೇಜಿನ ಅಧ್ಯಕ್ಷ ಚಂದ್ರಕಾಂತ ಗದ್ದಗಿ ವೇದಿಕೆಯಲ್ಲಿದ್ದರು.

ಆರಂಭದಲ್ಲಿ ಗ್ಲೋಬಲ್ ಮಲ್ಟಿ ಡೆವಲಪಮೆಂಟ್ ಟ್ರಸ್ಟ್ ಅಧ್ಯಕ್ಷ ವೆಂಕಟರಾವ ಮೆಯಿಂದೆ ಸ್ವಾಗತಿಸಿ, ರೋಹಿತ ಮೆಯಿಂದೆ ಕಾರ್ಯಕ್ರಮ ನಿರೂಪಿಸಿದರು.

ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿದ್ದರು.

# ಅಸೋಸಿಯೇಷನ್‌ನಿಂದ ಬಸವರಾಜ ಧನ್ನೂರ ಜನ್ಮದಿನ ಆಚರಣೆ



ಬೀದರ. ಮೇ. 16 : ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ವತಿಯಿಂದ ಇಲ್ಲಿಯ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಅಸೋಸಿಯೇಷನ್ ಅಧ್ಯಕ್ಷರೂ ಆದ ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ಅವರ 50ನೇ ಜನ್ಮದಿನ ಆಚರಿಸಲಾಯಿತು.

ಕಾರು ಹಾಗೂ ಬೈಕ್‌ಗಳ ರ್‍ಯಾಲಿ ಮೂಲಕ ಅವರನ್ನು ದೇವಸ್ಥಾನಕ್ಕೆ ಕರೆತರಲಾಯಿತು. ಬಳಿಕ ಕೇಕ್ ಕತ್ತರಿಸಿ ಜನ್ಮದಿನ ಆಚರಣೆ ಮಾಡಲಾಯಿತು.

ಅಸೋಸಿಯೇಷನ್ ಪದಾಧಿಕಾರಿಗಳು, ಗಾಂಧಿಗಂಜ್ ವ್ಯಾಪಾರಿಗಳು, ಸ್ನೇಹಿತರು ಹಾಗೂ ಹಿತೈಷಿಗಳು ಜನ್ಮದಿನ ಕಾರ್ಯಕ್ರಮ ಆಯೋಜಿಸಿ ತೋರಿದ ಪ್ರೀತಿ, ಅಭಿಮಾನಕ್ಕೆ ಚಿರಋಣಿಯಾಗಿದ್ದೇನೆ ಎಂದು ಬಸವರಾಜ ಧನ್ನೂರ ಹೇಳಿದರು.

ನಾನು ಗಾಂಧಿಗಂಜಗೆ ಬಂದು 32 ವರ್ಷಗಳಾಗಿವೆ. ಎಲ್ಲರ ಪ್ರೀತಿ, ವಿಶ್ವಾಸ ಹಾಗೂ ಸಹಕಾರದಿಂದಾಗಿ ಉದ್ಯಮ ಬೆಳೆಸಲು ಹಾಗೂ ಎರಡನೇ ಅವಧಿಗೆ ಗಾಂಧಿಗಂಜ್ ಅಸೋಸಿಯೇಷನ್ ಅಧ್ಯಕ್ಷನಾಗಲು ಸಾಧ್ಯವಾಗಿದೆ ಎಂದು ತಿಳಿಸಿದರು. ಬಸವಣ್ಣನವರ ತತ್ವದಡಿ ಬದುಕಲು ಪ್ರಯತ್ನಿಸುತ್ತಿರುವೆ. ಸ್ವಂತಕ್ಕಾಗಿ ಬದುಕುತ್ತಾ ಸಮಾಜಕ್ಕಾಗಿ ಬದುಕುವ ಜೀವನವೇ ಶ್ರೇಷ್ಠ ಎಂದು ಬಸವಣ್ಣನವರು ಹೇಳಿದ್ದಾರೆ. ನನ್ನ ಮುಂದಿನ ಜೀವನದಲ್ಲಿ ಇನ್ನೂ ಹೆಚ್ಚಿನ ಸಮಾಜ ಸೇವೆಗೈಯಲು ಪ್ರಯತ್ನಿಸುವೆ ಎಂದು ಹೇಳಿದರು. ಅಸೋಸಿಯೇಷನ್ ಉಪಾಧ್ಯಕ್ಷ ನಾಗಶೆಟ್ಟೆಪ್ಪ ದಾಡಗಿ, ಕಾರ್ಯದರ್ಶಿ ಭಗವಂತ ಔದತ್ತಪುರ, ಖಜಾಂಚಿ ಬಂಡೆಪ್ಪ ಗಡ್ಡೆ, ಸಹ ಕಾರ್ಯದರ್ಶಿ ನಾಗಶೆಟ್ಟೆಪ್ಪ ಕಾರಾಮುಂಗಿ, ನಿರ್ದೇಶಕರಾದ ಬಾಲಾಜಿ, ವ್ಯಾಪಾರಸ್ಥರಾದ ಚಂದ್ರಪ್ಪ ಹಳ್ಳಿ, ಅಣ್ಣೆಪ್ಪ ಹುಡಗೆ, ಗಿರೀಶ್ ಪಾಟೀಲ ಚಿದ್ರಿ, ವೀರಭದ್ರಪ್ಪ ಪಾಟೀಲ ಕನ್ನಳ್ಳಿ, ಬಸವರಾಜ ಲಾಧಾ, ನಾಗರಾಜ ನಂದಗಾಂವ್, ಸಂತೋಷ್ ನಂದಗಾಂವ್, ರಾಜಕುಮಾರ ಹಜ್ಜರಗಿ, ವಿಜಯಕುಮಾರ ಮಾಳಗೆ, ಚನ್ನಪ್ಪ, ಪ್ರಕಾಶ್ ಮುದ್ದಾ, ಶಿವು, ಸಂತೋಷ್ ರತ್ನಾಪುರ, ರಾಜಕುಮಾರ ಶಹಾಪುರ, ತುಕಾರಾಮ ಚಿಲ್ಲರ್ಗಿ, ಸಂತೋಷ್ ಕೆರಪಳ್ಳೆ, ದೇವಾನಂದ, ಶಿವಕುಮಾರ ಸ್ವಾಮಿ, ಯಲ್ಲಾಲಿಂಗ, ಪಂಚಾಕ್ಷರಿ, ವೀರೂ ಪುಲಗೇರಾ, ಸತೀಶ್, ಗಾಂಧಿಗಂ???ನ ಅನೇಕ ಗಣ್ಯ ವ್ಯಾಪಾರಿಗಳು, ಮುನೀಮರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ರಾಷ್ಟ್ರೀಯ ಡೇಂಗ್ಯೂ ಜನಜಾಗೃತಿ ಜಾಥಾಕ್ಕೆ ಚಾಲನೆ ಆರೋಗ್ಯ ಸಿಬ್ಬಂದಿಗಳು ಮನೆಗೆ ಭೇಟಿ ನೀಡಿದಾಗ ಸಹಕರಿಸಲು ಮನವಿ:ಡಿಎಚ್‌ಓ ಡಾ.ಶಂಕ್ರಪ್ಪ ಬೊಮ್ಮಾ



ಬೀದರ : ಮೇ.16:ಡೆಂಗ್ಯೂ ಪ್ರಕರಣಗಳು ಹೆಚ್ಚಾಗಿ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಕಂಡು ಬರುತ್ತಿದ್ದು, ಡೇಂಗ್ಯೂ/ಚಿಕ್ಕಂಗುನ್ಯಾ ಹರಡಿಸುವ ಸೊಳ್ಳೆಗಳ ನಿರ್ಮೂಲನೆಗಾಗಿ ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸುತ್ತಿರುವ ಆರೋಗ್ಯ ಸಹಾಯಕರನ್ನು ಪ್ರತಿ ತಿಂಗಳು ಮೊದಲನೆ ಶುಕ್ರವಾರ ಮತ್ತು ಮೂರನೇ ಶುಕ್ರವಾರದಂದು ಈಡೀಸ್ ಸೊಳ್ಳೆ ಉತ್ಪತ್ತಿ ತಾಣಗಳ ಸಮೀಕ್ಷೆ ಹಾಗೂ ನಿರ್ಮೂಲನೆ ಕಾರ್ಯವನ್ನು ನಿರಂತರವಾಗಿ ಕೈಕೊಳ್ಳಲಾಗುತ್ತಿದ್ದು, ಆರೋಗ್ಯ ಸಿಬ್ಬಂದಿಗಳು ತಮ್ಮ ಮನೆಗಳಿಗೆ ಭೆಟ್ಟಿ ನೀಡುವ ಸಿಬ್ಬಂದಿಗಳಿಗೆ ಸಹಕಾರ ನೀಡಿ ಅವರ ಸೂಚನೆ ಅನುಸಾರ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಹಾಗೂ ನಿಯಂತ್ರಣಕ್ಕಾಗಿ ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾಃಶಂಕ್ರಪ್ಪ ಬೊಮ್ಮಾ ತಿಳಿಸಿದರು.

ಅವರು ಶುಕ್ರವಾರದಂದು ರಾಷ್ಟ್ರೀಯ ಡೇಂಗ್ಯೂ ದಿನಾಚರಣೆ ನಿಮಿತ್ಯ ಬೀದರ ನಗರದಲ್ಲಿ ಸರಕಾರಿ ಶುಶ್ರೂಷ ಕಾಲೇಜು ವಿದ್ಯಾರ್ಥಿಗಳು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಆವರಣದಲ್ಲಿ ಹಮ್ಮಿಕೊಂಡಿದ್ದ "ಜನಜಾಗೃತಿ ಜಾಥಾ"ಕ್ಕೆ ಹಸಿರು ಬಾವುಟದ ಹಾರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಸಾರ್ವಜನಿಕರು ಆರೋಗ್ಯ ಸಿಬ್ಬಂದಿಗಳು ಮನೆಗೆ ಭೇಟಿ ನೀಡಿದಾಗ ಲಾರ್ವಾ ಸಮೀಕ್ಷೆ ಮತ್ತು ನಿರ್ಮೂಲನೆಗಾಗಿ ಸಹಕಾರ ನೀಡುವುದು. ಗ್ರಾಮೀಣ ಪ್ರದೇಶದಲ್ಲಿ ಜ್ವರ ಸಮೀಕ್ಷೆ ಹಾಗೂ ಲಾರ್ವಾ ಸಮೀಕ್ಷೆ ನಿರ್ಮೂಲನೆ ಕಾರ್ಯವನ್ನು ಆರೋಗ್ಯ ಸಹಾಯಕರಿಂದ ಹಾಗೂ ಆಶಾ ಕಾರ್ಯಕರ್ತರಿಂದ ನಿರಂತರವಾಗಿ ಚಟುವಟಿಕೆಗಳನ್ನು ಇಲಾಖೆಯಿಂದ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳಾದ ಡಾ.ರಾಜಶೇಖರ್ ಪಾಟೀಲ್ ಮಾತನಾಡಿ, ಜಿಲ್ಲೆಯಲ್ಲಿ ಡೆಂಗೀ/ಚಿಕ್ಕುಂಗುನ್ಯಾ ನಿಯಂತ್ರಣಕ್ಕಾಗಿ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆಗಾಗಿ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ-ಕ್ಕಾಗಿ ಅಂತರ್ ಇಲಾಖಾ ಸಮನ್ವಯದೊಂದಿಗೆ ನಿರಂತರವಾಗಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜನಜಾಗೃತಿ ಜಾಥಾ ನಗರದ ಪ್ರಮುಖ ರಸ್ತೆಗಳಾದ ಜನವಾಡಾ ರಸ್ತೆ, ನಗರದ ಪ್ರಮುಖ ಡಾ.ಅಂಬೇಡ್ಕರ ವೃತ್ತದಲ್ಲಿ ಮಾನವ ಸರಪಳಿಯೊಂದಿಗೆ ಜನಜಾಗೃತಿ ಜಾಥವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ ಆವರಣದಲ್ಲಿ ಮುಕ್ತಾಯಗೊಳಿಸಲಾಯಿತು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಜಿಲ್ಲಾ ಮಲೇರಿಯ ಅಧಿಕಾರಿ ರಾಜಶೇಖರ್ ಪಾಟೀಲ್, ಜಿಲ್ಲಾ ಮಟ್ಟದ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಅನೀಲ್ ಚಿಂತಾಮಣಿ, ಡಾ.ಶಿವಶಂಕರ.ಬಿ., ಡಾ.ದಿಲೀಪ್ ಡೋಂಗ್ರೆ, ಸಂಗಪ್ಪಾ ಕಾಂಬ್ಳೆ, ಅನೀತಾ, ಓಂಕಾರ್ ಮಲ್ಲಿಗೆ, ಜೇತುಲಾಲ ಪವಾರ್, ಮಹ್ಮದ ಅಬುಬಕರ್ ಮುಹ್ಮದ್ ಅಬ್ದುಲ್ ರಫೀ, ಕಾಶಿನಾಥ, ಎಂಡಿ ಸಮಿಯುದ್ದಿನ್, ಸತೀಶ ಪಾಂಡೆ, ವೀರಶಟ್ಟಿ ಚೆನಶಟ್ಟಿ, ಮಹ್ಮದ ಸಮಿಉದ್ದಿನ , ಶಿವರಾಜ ಸಾಗರ, ಹಾದಿ ತಬ್ರೇಜ್, ದೇವಿದಾಸ ಗಂಗೆನೋರ್, ಸೋನಾಬಾಯಿ, ಬಸವರಾಜ, ಅನೀಲ್ ಜಾಧವ, ಮಹೆಬುಬ ಮಿನ್ಯ, ಜಾವೇದ್ ಕಲ್ಯಾಣಕರ್ ಸೇರಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಕಾರ್ಯಕ್ರಮಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಇಂದು ಮಾಕ್ ಡ್ರಿಲ್ ಪ್ರದರ್ಶನ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ:ಮೇ.16:ಶನಿವಾರ (ಮೇ.17)ದಂದು ಬೀದರ ರೈಲ್ವೆ ನಿಲ್ದಾಣದಲ್ಲಿ ಮಾಕ್ ಡ್ರಿಲ್ (ಅಣಕು ಪ್ರದರ್ಶನ) ನಡೆಯಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಮೇ.17) ದಂದು ನಡೆಯುವ ಮಾಕ್ ಡ್ರಿಲ್ (ಅಣಕು ಪ್ರದರ್ಶನ) ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಗೆ ಪ್ರತಿಯಾಗಿ ಪಾಕಿಸ್ತಾನದ 9 ಕಡೆಗಳಲ್ಲಿ ಭಾರತ ನಿಖರ ದಾಳಿ ನಡೆಸಿ ಉಗ್ರರ ನೆಲೆಗಳನ್ನು ಧ್ವಂಸ ಮಾಡಿದೆ. ಇನ್ನಷ್ಟು ಇಂಥ ದಾಳಿಗಳ ಹಾಗೂ ಪ್ರತಿದಾಳಿಗಳ ಸಾಧ್ಯತೆಯ ಹಿನ್ನೆಲೆಯಲ್ಲಿ ಮೇ 7 ರಂದು ದೇಶಾದ್ಯಂತ ಮಾಕ್ ಡ್ರಿಲ್ ನಡೆಸಲು ಗೃಹ ಸಚಿವಾಲಯ ರಾಜ್ಯಗಳಿಗೆ ನಿರ್ದೇಶನ ನೀಡಿದೆ. ಅದರಂತೆ ಬೀದರ ರೈಲ್ವೆ ನಿಲ್ದಾಣದಲ್ಲಿ ಶನಿವಾರ (ಮೇ.17) ರಂದು ಸಾಯಂಕಾಲ 4:30 ರಿಂದ 5:30 ವರೆಗೆ ಮಾಕ್ ಡ್ರಿಲ್ (ಅಣಕು ಪ್ರದರ್ಶನ) ನಡೆಯಲಿದೆ ಎಂದರು. ಮಾಕ್ ಡ್ರಿಲ್‌ಗೆ ಎಲ್ಲಾ ರೀತಿಯ ತಯಾರಿಗಳನ್ನು ಮಾಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಾಕ್ ಡ್ರಿಲ್ (ಅಣಕು ಪ್ರದರ್ಶನ) ಪ್ರದರ್ಶನ ಸಂದರ್ಭದಲ್ಲಿ ಸಾರ್ವಜನಿಕರು ಯಾವುದೇ ರೀತಿಯ ಆತಂಕ ಪಡಬಾರದೆಂದರು. ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಬೀದರ ಉಪವಿಭಾಗಾಧಿಕಾರಿ ಎಂ.ಡಿ. ಶಕೀಲ್, ಕೆ.ಎಸ್.ಆರ್.ಟಿ.ಸಿ ವಿಭಾಗಿಯ ನಿಯಂತ್ರಣಾಧಿಕಾರಿ ವಿಶ್ವನಾಥ ಪುಲೇಕರ , ಜಿಲ್ಲಾ ಆರೋಗ್ಯ ಅಧಿಕಾರಿ ಧ್ಯಾನೇಶ್ವರ ನಿರಗುಡೆ, ಜಿಲ್ಲಾ ಶಸ್ತ್ರ ಚಿಕಿತ್ಸಾ ಅಧಿಕಾರಿ ಅಹಮದ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಎಮ್.ಡಿ ಮುಜಾಮಿಲ್ ಪಟೇಲ್, ಜಿಲ್ಲಾ ಗೃಹರಕ್ಷಕ ದಳದ ಅಧಿಕಾರಿ ಮನೋಜಕುಮಾರ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೃಷ್ಟಿಯ ಈ ಜಗದಲ್ಲಿ ಶಿಕ್ಷಣಕ್ಕೆ ತುಂಬಾನೇ ಮಹತ್ವವಿದೆ:ಉಸ್ತುವಾರಿ ಕಾರ್ಯದರ್ಶಿ ಡಿ.ರಣದೀಪ್



ಬೀದರ : ಮೇ.16: ಸೃಷ್ಟಿಯ ಈ ಜಗದಲ್ಲಿ ಶಿಕ್ಷಣಕ್ಕೆ ತುಂಬಾನೇ ಮಹತ್ವವಿದ್ದು, ಇದು ಜೀವನದಲ್ಲಿನ ಅಂಧಕಾರವನ್ನು ದೂರ ಮಾಡಿ ಕತ್ತಲೆಯ ಬದುಕಿಗೆ ಬೆಳಕನ್ನು ನೀಡಿ ಭವಿಷ್ಯವನ್ನು ನಿರ್ಮಾಣ ಮಾಡುತ್ತದೆ ಎಂದು ಬೆಂಗಳೂರು ಯುವಜನ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಕಾರ್ಯದರ್ಶಿಗಳಾದ ಡಿ.ರಣದೀಪ್ ಅವರು ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಸಮನ್ವಯಾಧಿಕಾರಿಗಳ ಕಾರ್ಯಾಲಯ ಬೀದರ ಹಾಗೂ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷಾ??ನ ಕೋರ ವಿಜ್ಞಾನ ಚಟುವಟಿಕೆ ಕೇಂದ್ರದ ವತಿಯಿಂದ 7ನೇ ತರಗತಿಯಿಂದ 10ನೇ ತರಗತಿಯ ವರೆಗಿನ ಮಕ್ಕಳಿಗೆ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರ ಕಾರ್ಯಕ್ರಮ ಉದ್ಘಾಟನೆ ಮಾಡಿ ಮಾತನಾಡಿದರು. ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಮಾತನಾಡಿ, ಮಕ್ಕಳಿಗೆ ಪಠ್ಯ ವಿಷಯಗಳನ್ನು ಹೊರತುಪಡಿಸಿ ರಜಾ ಅವಧಿಯಲ್ಲಿ ಇತರೆ ವಿಷಯಗಳಾದ ಚಿತ್ರಕಲೆ, ಪೇಂಟಿಂಗ್ಸ್, ನೃತ್ಯ ಕಲೆ, ರಾಕೆಟ್ ಅವಿಷ್ಕಾರ, ಹಿಂದುಸ್ತಾನಿ ಸಂಗೀತ, ಕೊಳಲು ವಾದ್ಯ ಮತ್ತು ಕ್ರೀಡೆಗಳಲ್ಲಿ ಭಾಗವಹಿಸಿದ್ದ 130 ಮಕ್ಕಳಿಗೆ ಪ್ರೇರೆಪಿಸಿದರು. ಈ ಸಂದರ್ಭದಲ್ಲಿ ಬೀದರ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸಲೀಂ ಪಾಷಾ, ಎಸ್‌ಎಸ್‌ಕೆ.ಯ ಜಿಲ್ಲಾ ಉಪಯೋಜನಾ ಅಧಿಕಾರಿಗಳಾದ ಸಂಗ್ರಾಮಪ್ಪ, ಆರ್.ಎಂ.ಎಸ್.ಎ.ದ ಜಿಲ್ಲಾ ಉಪಯೋಜನಾ ಅಧಿಕಾರಿಗಳಾದ ಗೋಪಾಲ ಪಿ., ಗುಂಡಪ್ಪ ಹುಡುಗೆ, ವಿಷಯ ಪರಿವೀಕ್ಷಕರಾದ ಫುರ್ಖಾನ್ ಪಾಷಾ, ಅಗಸ್ತ್ಯ ವಿಜ್ಞಾನ ಕೇಂದ್ರ ಬೀದರನ ಮುಖ್ಯಸ್ಥರಾದ ಬಾಬುರಾವ್ ಎನ್.ಎಸ್. ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರಕಾಶ್ ಹಳ್ಳಿಖೆಡ್ ರವರಿಂದ ಭಾರತೀಯ ಜನತಾ ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ



ಬೀದರ. ಮೇ. 16 : ಭಾರತೀಯ ಜನತಾ ಪಕ್ಷದ ಸದಸ್ಯರಾದ ಪ್ರಕಾಶ ತಂದೆ ದಶರಥ ಹಳ್ಳಿಖೆಡ್ ರವರು ಪಕ್ಷದ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಭಾರತೀಯ ಜನತಾ ಪಕ್ಷದ ಹುಮನಾಬಾದ ಮಂಡಲನ ಅಧ್ಯಕ್ಷರಾದ ಅನೀಲ ಕುಮಾರ್ ಪಸರ್ಗಿ ಯವರಿಗೆ ಬರೆದ ಪತ್ರದಲ್ಲಿ, 2018 ರಿಂದ ಪಕ್ಷದಲ್ಲಿ ಸತತವಾಗಿ 8 ವರ್ಷಗಳ ಕಾಲ ಸಂಘಟನೆಯಲ್ಲಿ ಕೆಲಸ ಮಾಡಿರುತ್ತೇನೆ. ವೈಯಕ್ತಿಕ ಕಾರಣಗಳಿಂದಾಗಿ ಪಕ್ಷದಲ್ಲಿ ಮುಂದುವರೆಯಲು ಆಗುವುದಿಲ್ಲ. ಆದ್ದರಿಂದ ರಾಜೀನಾಮೆಯನ್ನು ಅಂಗೀಕರಿಸಬೇಕೆಂದು ಕೋರಿರುತ್ತಾರೆ.

# ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ, ಶಿಬಿರಗಳು ಪೂರಕ :ತಹಸೀಲ್ದಾರ ಪಲ್ಲವಿ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.16:ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ, ಬೇಸಿಗೆ ಶಿಬಿರಗಳು ಪೂರಕವಾಗಿವೆ ಎಂದು ಗ್ರೇಡ್ 2 ತಹಸೀಲ್ದಾರ ಪಲ್ಲವಿ ಬೆಳಕೀರೆ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ, 7, 8, 9, ಮತ್ತು 10ನೇ ತರಗತಿಗಳ ವಿದ್ಯಾರ್ಥಿಗಳಿಗಾಗಿ ಜಿಲ್ಲಾಡಳಿತ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯದವತಿಯಿಂದ ಆಯೋಜಿಸಿದ್ದ ಬೇಸಿಗೆ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಶಾಲಾ ಅವಧಿಯಲ್ಲಿ ವಿದ್ಯಾರ್ಥಿಗಳು ಪಠ್ಯಕ್ಕೆ ಮಾತ್ರ ಸೀಮಿತವಾಗಿರುವರು. ಹೀಗಾಗಿ ಬೇಸಿಗೆ ಸಮಯದಲ್ಲಿ, ವಿದ್ಯಾರ್ಥಿಗಳಿಗಾಗಿ ಸರ್ಕಾರ ಶಿಬಿರ ಆಯೋಜಿಸಿದ್ದು, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗಿದೆ. ಶಿಬಿರದಲ್ಲಿ ಉತ್ತಮ ಚಟುವಟಿಕೆಗಳು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳನ್ನು ಉತ್ತೇಜಿಸಲಾಗುವುದು ಎಂದು ಹೇಳಿದರು. ನಂತರ ಸ್ವತ: ಒಂದು ಭಾವಗೀತೆ ಹಾಡುವುದರೊಂದಿಗೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೊಳಕರ, ಪ್ರಾಥಮಿಕ ಮತ್ತು ಪ್ರೌಢಶಾಲೆಯ 7, 8, 9 ಮತ್ತು 10ನೇ ತರಗತಿಗಳ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಬೇಸಿಗೆ ಶಿಬರದಲ್ಲಿ ಸುಮಾರು 100 ವಿದ್ಯಾರ್ಥಿಗಳು ಭಾಗವಹಿಸಿದ್ದಾರೆ. ಈ ಎಲ್ಲಾ ವಿದ್ಯಾರ್ಥಿಗಳಿಗೂ ಪಠ್ಯಕ್ರಮ ಹೊರತು ಪಡಿಸಿ, ಸಂಗೀತ, ಚಿತ್ರಕಲೆ, ಯೋಗಾಭ್ಯಾಸ, ದೈಹಿಕ ವ್ಯಾಯಾಮ, ಧ್ಯಾನ ಸೇರಿದಂತೆ ಹಲವಾರು ಚಟುವಟಿಕೆಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯ ತುಂಬಲಾಗುತ್ತಿದೆ ಎಂದು ಹೇಳಿದರು. ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತು ಕಾಕಟರ ವಿಶೇಷ ಉಪನ್ಯಾಸ ಮಂಡಿಸಿದರು. ಪ್ರೌಢಶಾಲೆಯ ಮುಖ್ಯಶಿಕ್ಷಕ ಮಾಧವರಾವ ಭೊಸಲೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದೇವೇಳೆ ಚಿತ್ರಕಲಾ ಶಿಕ್ಷಕ ಜಿಪ್ಸನ್ ಕೋಟೆಯವರಿಂದ ಸುಗಮ ಸಂಗೀತ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಣಾಧಿಕಾರಿ ರೋಹಿದಾಸ ರಾಠೋಡ, ವಿಶ್ವನಾಥ ಟೋಕರೆ, ಇಸಿಓ ಸಹದೇವ ಗೌಡಗಾವೆ, ಅನುದಾನಿತ ಪ್ರೌಢಶಾಲಾ ಮುಖ್ಯಶಿಕ್ಷಕರ ಸಂಘದ ಅಧ್ಯಕ್ಷ ಕಿರಣಕುಮಾರ ಭಾಟಸಾಂಗವಿ, ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಬಿಆರ್‌ಪಿ ಸಂತೋಷ ಮುದಾಳೆ, ಚೇತನಾ ಸಂತೋಷಕುಮಾರ ಉಪಸ್ಥಿತರಿದ್ದರು. ಸಿಆರ್‌ಪಿ ಅಂಬ್ರೀಶ್ ಖಂಡ್ರೆ ಸ್ವಾಗತಿಸಿದರು. ಬಿಆರ್‌ಪಿ ಚೇತನಾ ಚನಶೆಟ್ಟಿ ನಿರೂಪಿಸಿದರು. ಸಿಆರ್‌ಪಿ ಚನ್ನಪ್ಪ ತಳವಾಡೆ ವಂದಿಸಿದರು.

> ಬೇಸಿಗೆ ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಲಿನಲ್ಲಿ ನಡೆಸುವ ಪಠ್ಯ ಚಟುವಟಿಕೆಗಳನ್ನು ಹೊರತಾಗಿ ಪಠ್ಯೇತರ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಲ್ಲಿ ಕ್ರಿಯಾಶೀಲ ವ್ಯಕ್ತಿತ್ವ ನಿರ್ಮಿಸಲಾಗುತ್ತಿದೆ. ಪ್ರಸ್ತುತ ಸಾಲಿನಲ್ಲಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಎಲ್ಲದರಲ್ಲಿಯೂ ಮುಂದಿರಬೇಕು ಎನ್ನುವ ದೃಷ್ಟಿಯಿಂದ ಸರ್ಕಾರ 10 ದಿವಸಗಳ ಬೇಸಿಗೆ ಶಿಬಿರ ನಡೆಸುತ್ತಿದೆ.
>
> –ಸಿ.ಜಿ.ಹಳ್ಳದ್, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಭಾಲ್ಕಿ

# ಗಡಿಭಾಗದ ಮಕ್ಕಳಲ್ಲಿ ಅದ್ಭುತ ಪ್ರತಿಭೆ:ಡಾ.ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.16:ಗಡಿಭಾಗದ ಮಕ್ಕಳಲ್ಲಿ ಅದ್ಭುತ ಪ್ರತಿಭೆ ಹುದುಗಿದೆ ಅದನ್ನು ಪ್ರಾಮಾಣಿಕವಾಗಿ ಗುರುತಿಸುವ ಕೆಲಸ ಆಗಬೇಕಿದೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಶುಕ್ರವಾರ ಆಯೋಜಿಸಿದ್ದ 2024–25ನೆಯ ಸಾಲಿನ ಎಸ್ಸೆಸ್ಸೆಲ್ಸಿ ಸಾಧಕ ವಿದ್ಯಾರ್ಥಿಗಳ ಕರಪತ್ರ ಬಿಡುಗಡೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ತಾಲೂಕಿನ ಎಸ್ಸೆಸ್ಸೆಲ್ಸಿ ಫಲಿತಾಂಶ ವರ್ಷದಿಂದ ವರ್ಷಕ್ಕೆ ಸುಧಾರಣೆ ಕಂಡು ಬರುತ್ತಿದೆ. ಚನ್ನಬಸವೇಶ್ವರ ಗುರುಕುಲದ 93 ವಿದ್ಯಾರ್ಥಿಗಳು ಶೇ.85ಕ್ಕಿಂತ ಹೆಚ್ಚಿನ ಫಲಿತಾಂಶ ಪಡೆದು ಜಿಲ್ಲೆಗೆ ಗೌರವ ತಂದು ಕೊಟ್ಟಿದ್ದಾರೆ ಎಂದು ಹೆಮ್ಮೆ ವ್ಯಕ್ತ ಪಡಿಸಿದರು. ವಿದ್ಯಾರ್ಥಿಗಳಾದ ಈಶ್ವರ ವಿಜಯಕುಮಾರ ಮತ್ತು ಹರ್ಷಿತಾ ಶಿವಕುಮಾರ 625ಕ್ಕೆ ತಲಾ 618 ಅಂಕ ಪಡೆದು ರಾಜ್ಯಕ್ಕೆ 8ನೆಯ ರ್‍ಯಾಂಕ್ ಪಡೆದಿರುವುದು ಸಂತಸ ತರಿಸಿದೆ ಎಂದರು.

ನಮ್ಮ ಶಿಕ್ಷಣ ಸಂಸ್ಥೆಯಲ್ಲಿ ಕಲಿಕೆಗೆ ಪೂರಕ ವಾತವರಣ ಕಲ್ಪಿಸಲಾಗುತ್ತಿದೆ. ನುರಿತ ಬೋಧಕ ಸಿಬ್ಬಂದಿಗಳ ವರ್ಗ ವಿದೆ. ಹಾಗಾಗಿ ನಮ್ಮ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುವ ಮಕ್ಕಳು ಪ್ರತಿವರ್ಷ ಮಾದರಿ ಫಲಿತಾಂಶ ಪಡೆ–ಯುತ್ತಿದ್ದಾರೆ ಎಂದು ಸಂತಸ ವ್ಯಕ್ತ ಪಡಿಸಿದ್ದರು. ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ, ಬಸವಲಿಂಗಸ್ವಾಮೀಜಿ ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಶಶಿಧರ ಕೋಸಂಬೆ, ಆಡಳಿತಾಧಿಕಾರಿ ಮೋಹನ ರೆಡ್ಡಿ, ಪಿಯು ಕಾಲೇಜಿನ ಪ್ರಾಚಾರ್ಯ ಬಸವರಾಜ ಮೊಳಕೀರೆ, ಇಂಗ್ಲಿಷ ಮಾಧ್ಯಮದ ಪ್ರಾಚಾರ್ಯರಾದ ಎನ್.ರಾಜು, ರಂಗಾರೆಡ್ಡಿ, ಮುಖ್ಯಶಿಕ್ಷಕರಾದ ಮಹೇಶ ಮಹಾರಾಜ್, ಮಹೇಶ ಕುಲಕರ್ಣಿ, ಎಸ್ಸೆಸ್ಸೆಲ್ಸಿ ಸಂಯೋಜಕ ಪ್ರವೀಣ ಖಂಡಾಳೆ, ಪ್ರಾಚಾರ್ಯರಾದ ಆಶಾ ಮುದಾಳೆ, ಕಿರಣ ಸಜ್ಜನಶೆಟ್ಟಿ, ಸುಧಾಕರ ಬಿರಾದಾರ್, ವಸತಿ ವಿಭಾಗದ ಮುಖ್ಯಸ್ಥೆ ಜಯಕ್ಕಾ ಗಾಂವಕರ್, ಶೈಕ್ಷಣಿಕ ಸಂಯೋಜಕ ಬಾಲಾಜಿ ವಲ್ಲೂರೆ, ಪ್ರಮುಖರಾದ ಅನಿಲ್ ಪಾಟೀಲ್, ಶಶಿಕುಮಾರ, ಪ್ರಶಾಂತ್ ರೆಡ್ಡಿ, ಪ್ರಶಾಂತ ಸಂಗಮದ, ಪ್ರೇಮಾ ಸೇರಿದಂತೆ ಇತರರು ಇದ್ದರು.

> ನಮ್ಮ ಭಾಗದ ಮಕ್ಕಳಲ್ಲಿ ಕಲಿಕೆಯ ಹಸಿವಿದೆ. ಅದನ್ನು ಗುರುತಿಸಿ ಶಿಕ್ಷಕರು ಸೂಕ್ತ ಮಾರ್ಗದರ್ಶನ ತೋರಿದರೆ ಮಕ್ಕಳು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮತ್ತಷ್ಟು ಉತ್ತಮ ಸಾಧನೆ ತೋರುವ ವಿಶ್ವಾಸವಿದೆ.
>
> – ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅಧ್ಯಕ್ಷರು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿ
>
> ಗ್ರಾಮೀಣ ಭಾಗದ ಕನ್ನಡ ಮಾಧ್ಯಮದಲ್ಲಿ ಕಲಿತ ಮಕ್ಕಳು ಉತ್ತಮ ಫಲಿತಾಂಶ ಪಡೆದು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಕನಸು ನನಸು ಮಾಡುತ್ತಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ.
>
> –ಗುರುಬಸವ ಪಟ್ಟದ್ದೇವರು ಪೀಠಾಧಿಪತಿಗಳು ಹಿರೇಮಠ ಸಂಸ್ಥಾನ ಭಾಲ್ಕಿ

# ಮುಂಗಾರು ಹಂಗಾಮಿನ ರಸಗೊಬ್ಬರ ದಾಸ್ತಾನು, ಸರಬರಾಜು ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ



ಬೀದರ:ಮೇ.16: 2025ರ ಮುಂಗಾರು ಹಂಗಾಮಿಗೆ ಸೋಯಾಅವರೆ ಜಿಲ್ಲೆಗೆ ಹಂಚಿಕೆಯಾಗಿರುವ ಪ್ರಮಾಣವು ಕಡಿಮೆಯಾಗಿದ್ದು 1,20,000 ಕ್ವಿ.ಗಳಷ್ಟು ದಾಸ್ತಾನಿಕರಿಸಲು ಕ್ರಮವಹಿಸಬೇಕು ಹಾಗೂ ಹೆಚ್ಚುವರಿ ಪ್ರಮಾಣ ಹಂಚಿಕೆ ಮಾಡುವಂತೆ ಕೃಷಿ ಆಯುಕ್ತರಿಗೆ ಪತ್ರ ಬರೆಯಲು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಸೂಚಿಸಿದರು.

ಅವರು ಇತ್ತೀಚಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025ರ ಮುಂಗಾರು ಹಂಗಾಮಿನ ರಸಗೊಬ್ಬರಗಳ ದಾಸ್ತಾನು ಹಾಗೂ ಸರಬರಾಜು ಕುರಿತು ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೇ.26 ರಿಂದ ಬಿತ್ತನೆ ಬೀಜಗಳ ವಿತರಣೆ ಕಾರ್ಯವು ಪ್ರಾರಂಭಿಸಬೇಕು, ಬಿತ್ತನೆ ಬೀಜ ಹಾಗೂ ರಸಗೊಬ್ಬರ ಸಕಾಲದಲ್ಲಿ ರೈತರಿಗೆ ಕೊರತೆ–ಯಾಗದಂತೆ ವಿತರಿಸಲು ಕ್ರಮವಹಿಸಬೇಕು ಹಾಗೂ ಸೂಕ್ತ ಪೋಲಿಸ್ ಬಂದೋಬಸ್ತ್ ಕಾನೂನು ಪರಿಪಾಲನೆಯನ್ನು ಅನುಸರಿಸುವಂತೆ ಪೋಲೀಸ್ ಇಲಾಖೆಗೆ ಸೂಚಿಸಿದರು.

ಜಂಟಿ ಕೃಷಿ ನಿರ್ದೇಶಕರು, ಬೀದರ ರವರು ಪಿಪಿಟಿ ಪ್ರಸೆಂಟೇಶನ್ ಮೂಲಕ ಕೃಷಿ ಇಲಾಖೆಯ ಸಾಮಾನ್ಯ ಮಾಹಿತಿ, 2024–25ನೇ ಸಾಲಿನ ಜಿಲ್ಲೆಯ ಮಳೆ ವಿವರ, ಮುಂಗಾರು ಹಂಗಾಮಿನಲ್ಲಿ ಪ್ರಮುಖ ಬೆಳೆಗಳ ಬಿತ್ತನೆ ಕ್ಷೇತ್ರ, ಬಿತ್ತನೆ ಬೀಜಗಳ ವಿತರಣಾ ಪ್ರಮಾಣ ಹಾಗೂ ಹೆಚ್ಚುವರಿ ವಿತರಣಾ ಕೇಂದ್ರಗಳ ವಿವರ ಹಾಗೂ 2025ರ ಮುಂಗಾರು ಹಂಗಾಮಿನ ಜಿಲ್ಲೆಯ ಪ್ರಮುಖ ಬೆಳೆಗಳ ಬಿತ್ತನೆ ಕ್ಷೇತ್ರ ಗುರಿ, ಜಿಲ್ಲೆಯ ಬಿತ್ತನೆ ಬೀಜಗಳ ಕಾರ್ಯಕ್ರಮ, ಬಿತ್ತನೆ ಬೀಜಗಳ ದಾಸ್ತಾನು ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಹೆಚ್ಚುವರಿ ವಿತರಣಾ ಕೇಂದ್ರಗಳು, ಮುಂಗಾರು ಹಂಗಾಮಿನ ರಸಗೊಬ್ಬರ ಮಾಹೆವಾರು ಬೇಡಿಕೆ ಪ್ರಮಾಣ ಮತ್ತು ಪ್ರಸ್ತುತ ದಾಸ್ತಾನು ಕುರಿತು ಮಾನ್ಯ ಜಿಲ್ಲಾಧಿಕಾರಿಯವರಿಗೆ ಹಾಗೂ ಸಭೆಯ ಸದಸ್ಯರಿಗೆ ಮಾಹಿತಿ ನೀಡಿದರು.

ಈ ಸಭೆಯಲ್ಲಿ ಬಸವಕಲ್ಯಾಣ ಉಪ ಕೃಷಿ ನಿರ್ದೇಶಕರು–2, ತಾಲ್ಲೂಕು ಮಟ್ಟದ ಅಧಿಕರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೆ|| ಎಲ್ ಆಂಡ್ ಟಿ ಕಂಪನಿಯ ಸಿಬ್ಬಂದಿಗಳಿಂದ ಬೋಸಗಾ ಕೆರೆಯಲ್ಲಿ ಸ್ವಚ್ಛತಾ ಕಾರ್ಯ



ಕಲಬುರಗಿ,ಮೇ.16:"ಕಲಬುರಗಿ ನಗರದ ನೀರು ಸರಬರಾಜಿನ ಮೂಲವಾದ ಬೋಸಗಾ ಕೆರೆಯಲ್ಲಿ ನೀರು ಕಲುಷಿತಗೊಳ್ಳುವ ಹಂತಕ್ಕೆ ತಲುಪಿರುವುದನ್ನು ಮನಗಂಡು ಕಲಬುರಗಿ ಯೋಜನಾ ಅನುಷ್ಠಾನ ಘಟಕದ ಅಧೀಕ್ಷಕ ಅಭಿಯಂತರರ ಆದೇಶದನ್ವಯ ನಗರದ ನೀರು ಸರಬರಾಜಿನ ಮೇಲುಸ್ತುವಾರಿ ವಹಿಸಿಕೊಂಡ ಮೆ|| ಎಲ್ ಆಂಡ್ ಟಿ ಕಂಪನಿಯ ಎಲ್ಲಾ ಸಿಬ್ಬಂದಿಗಳು ಬೋಸಗಾ ಕೆರೆಯಲ್ಲಿ ಇತ್ತೀಚೆಗೆ ಸ್ವಚ್ಛತಾ ಅಭಿಯಾನಯನ್ನು ಹಮ್ಮಿಕೊಂಡಿರುತ್ತಾರೆ. ವಿಶ್ವ ಜಲದಿನ ಆಚರಣೆ ಹಿನ್ನೆಲೆಯಲ್ಲಿ ಮೆ|| ಎಲ್ & ಟಿ ಕಂಪನಿ ಸಿಬ್ಬಂದಿಗಳು ಕೈಯಲ್ಲಿ ಪೊರಕೆ, ಸಲಿಕೆ, ಬುಟ್ಟಿಗಳು ಹಿಡಿದು, ಕಾಲಿನಲ್ಲಿ ಬೂಟು, ಕೈಗವಸು, ಮುಖಗವಸು ಧರಿಸಿದ್ದ ಸಿಬ್ಬಂದಿಗಳು ಬೋಸಗಾ ಕೆರೆ ಮತ್ತು ಜಲಾನಾಯನ ಪ್ರದೇಶದಲ್ಲಿ ಬಿದ್ದಿರುವ ಕಸ, ಕಂಟಿ, ಎಲೆ, ಪ್ಲಾಸ್ಟಿಕ್ ಮತ್ತು ಇತರೆ ವಸ್ತುಗಳನ್ನು, ಕಪ್ಪು ಪ್ಲಾಸ್ಟಿಕ್‌ನಲ್ಲಿ ಸಂಗ್ರಹಿಸಿ ಸ್ಥಳಾಂತರಿಸಿದರು. ನೀರಿನಲ್ಲಿ ಬೆಳೆದಿರುವ ಸಸಿಗಳು ಹಾಗೂ ವಸ್ತುಗಳನ್ನು ಹೊರಗೆ ತೆ–ಗೆದರು. ಮೆ|| ಎಲ್ ಆಂಡ್ ಟಿ ಕಂಪನಿಯ ಪ್ರಧಾನ ವ್ಯವಸ್ಥಾಪಕ ಕುಮಾರೇಶನ್ ಸೇತುರಾಜ್ ಅವರು ಮಾತನಾಡಿ, 6 ತಿಂಗಳಿಗೊಮ್ಮೆ ಬೋಸಗಾ ಕೆರೆಯ ಸ್ವಚ್ಛತಾ ಅಭಿಯಾನವನ್ನು ಆಯೋಜಿಸಲಾಗುವುದು ಎಂದರು. ಮೆ|| ಎಲ್ ಆಂಡ್ ಟಿ ಕಂಪನಿಯ ಸಿಬ್ಬಂದಿಗಳು 500 ಕೆ.ಜಿ. ಹಸಿ ತ್ಯಾಜ್ಯ ಹಾಗೂ 700 ಕೆ.ಜಿ. ಒಣ ತ್ಯಾಜ್ಯ ಸಂಗ್ರಹಿಸಿ ಕಂಪನಿಯ ಲಾರಿಯ ಮೂಲಕ ತ್ಯಾಜ್ಯವನ್ನು ವಿಲೇವಾರಿ ಮಾಡಿದರು. ಈ ಕಾರ್ಯವನ್ನು ಮೆಚ್ಚಿ ಯೋಜನಾ ಅನುಷ್ಠಾನ ಘಟಕದ ಅಧೀಕ್ಷಕ ಅಭಿಯಂತರರು ಪ್ರಶಂಸಿಸಿ ಪ್ರತಿ 6 ತಿಂಗಳಿಗೊಮ್ಮೆ ನಗರಕ್ಕೆ ನೀರು ಸರಬರಾಜು ಮಾಡುವ ಜಲ ಮೂಲಗಳನ್ನು ಅಭಿಯಾನದ ಮೂಲಕ ಸ್ವಚ್ಛತೆ ಮಾಡಬೇಕೆಂದು ಸೂಚಿಸಿದ್ದಾರೆ ಎಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಅಪರೇಷನ್ ಅಭ್ಯಾಸ್" ಅಣುಕು ಪ್ರದರ್ಶನ ಭಾಗವಾಗಿ:

### ಮೇ 19 ರಂದು ಕಲಬುರಗಿ ನಗರ 10 ನಿಮಿಷಗಳ ಕಾಲ ಬ್ಲ್ಯಾಕ್ ಔಟ್

ಕಲಬುರಗಿ,ಮೇ.16:"ಅಪರೇಷನ್ ಅಭ್ಯಾಸ್" ನಾಗರಿಕ ರಕ್ಷಣಾ ಕಾರ್ಯಚರಣಾಯ ಅಣುಕು ಪ್ರದರ್ಶನದ ಭಾಗವಾಗಿ ಕೇಂದ್ರಸರ್ಕಾರ ಹಾಗೂ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಮೇ 19 ರಂದು ಸೋಮವಾರ ರಾತ್ರಿ 8 ಗಂಟೆಯಿಂದ 8.10 ನಿಮಿಷದವರೆಗೆ (ಹತ್ತು ನಿಮಿಷಗಳ ಕಾಲ) ಕಲಬುರಗಿ ನಗರವನ್ನು ಸಂಪೂರ್ಣವಾಗಿ ಬ್ಲಾಕ್‌ಔಟ್ (BLACKOUT) ನ್ನು ಮಾಡಲು ನಿರ್ಧರಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ತುರ್ತು ಸೇವೆಗಳನ್ನು ಹೊರತುಪಡಿಸಿ ತಮ್ಮ ಮನೆಯಲ್ಲಿರುವ ಇನ್ವರ್ಟರ್ (Invertor) ಗಳನ್ನು ಸ್ಥಗಿತಗೊಳಿಸಿ ಮಾಕ್ ಡ್ರಿಲ್ (MOCK DRILL) ನ್ನು ಯಶಸ್ವಿಗೊಳಿಸಲು ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ.

# ಜೀವನ ಕೌಶಲ ಅರಿಯಲು ಎನ್‌ಎಸ್‌ಎಸ್ ಸಹಕಾರಿ




ಬೀದರ. ಮೇ. 16 : ಜೀವನ ಕೌಶಲ ಅರಿಯಲು ರಾಷ್ಟ್ರೀಯ ಸೇವಾ ಯೋಜನೆ ಸಹಕಾರಿಯಾಗಿದೆ ಎಂದು ಮನ್ನಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯ ಪ್ರೊ. ಧನರಾಜ ಬಿರಾದಾರ ಹೇಳಿದರು.

ನಗರದ ಓಡವಾಡದಲ್ಲಿ ನಡೆದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಯೋಜನೆ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ನಿವೃತ್ತ ಪ್ರಾಚಾರ್ಯ ಪ್ರೊ. ಎಂ.ಜಿ. ದೇಶಪಾಂಡೆ ಮಾತನಾಡಿ, ಎನ್‌ಎಸ್‌ಎಸ್ ಶಿಸ್ತು, ಶ್ರಮದ ಘನತೆ ಹಾಗೂ ಮಾನವೀಯ ಮೌಲ್ಯಗಳನ್ನು ಕಲಿಸುತ್ತದೆ. ವಿದ್ಯಾರ್ಥಿಗಳು ಶಿಬಿರದಲ್ಲಿ ಕಲಿತ ಮೌಲ್ಯಗಳನ್ನು ನಿಜ ಜೀವನದಲ್ಲಿ ಪಾಲಿಸಬೇಕು ಎಂದು ಹೇಳಿದರು.

ಅಂಜಲಿ, ನಂದಿನಿ, ಪವಿತ್ರಾ, ಮುಹಮ್ಮದಿ ಹಾಗೂ ಭವಾನಿ ಅತ್ಯುತ್ತಮ ಸ್ವಯಂ ಸೇವಕ ಪ್ರಶಸ್ತಿಗೆ ಭಾಜನರಾದರು.

ಸಾಂಚಿ ಹೊನ್ನಮ್ಮ, ರಾಣಿ ಲಕ್ಷ್ಮಿಬಾಯಿ, ಸರೋಜಿನಿ ನಾಯ್ಡು, ಮದರ್ ತೆರೆಸಾ ಹಾಗೂ ಅಕ್ಕಮಹಾದೇವಿ ತಂಡಗಳು ಅತ್ಯುತ್ತಮ ಪ್ರಾರ್ಥನೆ, ಅತ್ಯುತ್ತಮ ವೇದಿಕೆ, ಅತ್ಯುತ್ತಮ ಶ್ರಮದಾನ, ಅತ್ಯುತ್ತಮ ಊಟದ ವ್ಯವಸ್ಥೆ, ಅತ್ಯುತ್ತಮ ವಿಡಿಯೋ/ರೀಲ್‌ಗಾಗಿ ಬಹುಮಾನ ಪಡೆದುಕೊಂಡವು. ಕಾಲೇಜಿನ ಪ್ರಾಚಾರ್ಯ ಪ್ರೊ. ಮನೋಜಕುಮಾರ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಬಿ ಘಟಕದ ಕಾರ್ಯಕ್ರಮ ಅಧಿಕಾರಿ ಡಾ. ವಿದ್ಯಾ ಪಾಟೀಲ, ಎ ಘಟಕದ ಕಾರ್ಯಕ್ರಮ ಅಧಿಕಾರಿ ಪ್ರೊ. ಶ್ರೀನಿವಾಸ್ ರೆಡ್ಡಿ ಉಪಸ್ಥಿತರಿದ್ದರು. ಪವಿತ್ರಾ ನಿರೂಪಿಸಿದರು. ಮಂಜುಳಾ ಸ್ವಾಗತಿಸಿದರು. ಪೂಜಾ ವಂದಿಸಿದರು.

# ಆರೋಗ್ಯವಂತರಾಗಿರಲು ಆರೋಗ್ಯ ತಪಾಸಣೆ ಸಹಕಾರಿ : ಹನಮಂತ ಬನ್ನಿಕೊಪ್ಪ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ:ಮೇ.16:ಕುಕನೂರ ತಾಲೂಕಿನ ಮಸಬಹಂಚಿನಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಗಾವರಾಳ ಗ್ರಾಮದಲ್ಲಿ ನರೇಗಾ ಕಾಮಗಾರಿಸ್ಥಳದಲ್ಲಿ ಕೂಲಿಕಾರರಿಗೆ ಆರೋಗ್ಯ ತಪಾಸಣಾ ಶಿಭಿರ, ರೋಜಗಾರ ದಿನಾಚರಣೆ, ಸ್ತ್ರೀ ಚೇತನ ಅಭಿಯಾನ, ದುಡಿಯೋಣ ಬಾ ಅಭಿಯಾನ, ತ್ಯಾಜ್ಯ ಶುಲ್ಕ ಸಂಗ್ರಹಣಾ ಅಭಿಯಾನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.ಕಾರ್ಯಕ್ರಮದಲ್ಲಿ ಮಸಬಹಂಚಿನಾಳ ಗ್ರಾಮ ಪಂಚಾಯತಿಯ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಪ್ರಕಾಶ ಮಾತನಾಡುತ್ತಾ ಇಂದು ವಿಶ್ವ ಡೆಂಗ್ಯೂ ದಿನ, ಡೆಂಗ್ಯೂ ಖಾಯಿಲೆ ಸೊಳ್ಳೆ ಕಡಿತದಿಂದ ಹರಡುತ್ತದೆ. ಅದಕ್ಕಾಗಿ ಕೂಲಿಕಾರರು ತಮ್ಮ ವೈಯಕ್ತಿಕ ಶುಚಿತ್ವದ ಕಡೆಗೆ ಗಮನ ಕೊಡಬೇಕು, ನಿಂತ ನೀರು, ತೆರೆದಿಟ್ಟ ಪಾತ್ರೆಯ ನೀರು ಮುಚ್ಚುವುದು, ಗುಡ್ ನೈಟ್ ಕ್ವಾಯಿಲ್ ಗಳನ್ನು ಬಳಸುವುದು, ಸೊಳ್ಳೆ ಪರದೆ ಬಳಕೆ ಬಳಕೆ ಮಾಡಬೇಕು ನಿರಂತರ ಜ್ವರ ಖಾಯಿಲೆ ಬಂದಾಗ ವೈಧ್ಯಾಧಿಕಾರಿಗಳ ಸಲಹೆ ಪಡೆಯಬೇಕು ಸ್ವಂತ ಮಾತ್ರೆಗಳನ್ನುತೆಗೆದುಕೊಳ್ಳಬಾರದು, ಅದೇ ರೀತಿ ಹಾವು ಕಡಿದಾಗ ಮುಂಜಾಗ್ರತವಾಗಿ ಮಾಡುವ ಕೆಲಸ,ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮ, ಹೃದಯಸಂಬಂದಿ ಖಾಯಿಲೆಗಳು, ಕಿವಿಸುರಕ್ಷತೆಬಗ್ಗೆಜಾಗ್ರತರಾಗಿರಲು ಕೂಲಿಕಾರರಿಗೆ ಮನವರಿಕೆ ಮಾಡಿದರು.

ನಂತರ ರಾಜೀವ್ ಗಾಂಧಿ ಫೆಲೋ ಶಿಪ್ ಅಧಿಕಾರಿ ಸೀಮಾ ಕೌಸರ್ ಮಾತನಾಡಿ ಜಿಪಿಎಲ್ ಎಫ್ ಹಾಗೂ ಗ್ರಾಮ ಪಂಚಾಯಿತಿ ನಡುವುವೆ ಕಸ ವಿಲೇವಾರಿ ಬಗ್ಗೆ ಒಡಂಬಡಿಕೆ ಗ್ರಾಮ ಪಂಚಾಯತಿ ಹಂತದಲ್ಲಿ ಆಗಿದ್ದು ಸ್ವ-ಸಹಾಯ ಸಂಘದ ಮಹಿಳೆಯರಿಗೆ ಆರ್ಥಿಕ ಬಲವರ್ದನೆಗೆ ತ್ಯಾಜ್ಯ ಶುಲ್ಕ ವನ್ನು ಎಲ್ಲರೂ ಪಾವತಿಸಲು ಕೇಳಿದರು.

ಗ್ರಾಮ ಪಂಚಾಯತಿ ಅಧ್ಯಕ್ಷ ಹನಮಂತಬನ್ನಿಕೊಪ್ಪಮಾತನಾಡಿ ಗ್ರಾಮ ಪಂಚಾಯತಿಯಿಂದ ಸ್ವ-ಸಹಾಯ ಸಂಘದ ಮಹಿಳೆಯರಿಗೆ ಹಲವಾರು ಸವಲತ್ತುಗಳನ್ನು ನೀಡಿದೆ. ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಬ್ಯಗಳು ಸಿಗಲಿವೆ, ಸಣ್ಣ ಸಣ್ಣ ಉದ್ಯಮೆಗಳನ್ನು ಮಾಡಿಕೊಂಡು ಆರ್ಥಿಕವಾಗಿ ಸದೃಡರಾಗಬೇಕು, ಮತ್ತು ನರೇಗಾ ಕಾಮಗಾರಿಯಲ್ಲಿ ನಿರಂತರ ಕೆಲಸಕ್ಕೆ ಬರುವುದರ ಜ್ಯೋತೆಗೆ ವೈಯಕ್ತಿಕ ಕಾಮಗಾರಿ ಮಾಡಿಕೊಂಡು, ದ್ವಿಗುಣ ಆದಾಯ ಮೂಲಗಳನ್ನು ಸೃಷ್ಠಿ ಮಾಡಿಕೊಳ್ಳಬೇಕು ಎಂದರು.

ಗ್ರಾಮಪಂಚಾಯತಿಸದಸ್ಯರಾದ ಮಹೇಶಗಾವರಾಳ ಮಾತನಾಡಿ ಗ್ರಾಮ ಪಂಚಾಯತಿ ಹಂತದಲ್ಲಿ ಕಸ ಸಂಗ್ರಹಣೆ, ವಿಲೇವಾರಿ ಜವಬ್ದಾರಿಗಳನ್ನುಸ್ವ-ಸಹಾಯ ಸಂಘದ ಪ್ರತಿನಿಧಿಗಳಿಗೆ ಕೊಟ್ಟಿದ್ದು ಇದರ ಉದ್ದೇಶ ಸಕಾರವಾಗಲು ಎಲ್ಲಾ ಗ್ರಾಮದ ಕುಟುಂಬದವರು ತ್ಯಾಜ್ಯ ಶುಲ್ಕದ ವಂತಿಕೆಯನ್ನು ಕಟ್ಟಬೇಕು, ಈಗಾಗಲೇ ಸ್ವ-ಸಹಾಯ ಸಂಘದ ಮಹಿಳೇಯರಿಗೆ ಕೀಟನಾಶಕ ಸಿಂಪಡನೆ ಡ್ರೋನ್ ತರಬೇತಿ ನೀಡಿದೆ, ಮತ್ತು ಉಪ್ಪಿನಕಾಯಿ ಉದ್ಯಮಕ್ಕೆ ಕಡಿಮೆ ಬಡ್ಡಿಯ ದರದಲ್ಲಿ 10 ಲಕ್ಷ ಗಳ ಸಾಲ ಸೌಲಭ್ಯ ನೀಡಿದೆ. ಎಂದರು.

ಸ್ಥಳದಲ್ಲಿ ಮಾಜಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಗಾಳೆಪ್ಪದೊಡ್ಮನಿ,ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ವೈಜನಾಥ ಸಾರಂಗಮಠ ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ, ಆರೋಗ್ಯ ಸಿಬ್ಬಂದಿ ಪವಿತ್ರಾ, ಕ್ಲಸ್ಟರ್ ಸುಪರ್ ವೈಜರ್ ಪೂಜಾ ನಾಯಕ, ಬಿಲ್ ಕಲೆಕ್ಟರ್ ಮಂಜುನಾಥ ಉಳ್ಳಾಗಡ್ಡಿ, ಗ್ರಾಮ ಕಾಯಕ ಮಿತ್ರರಾದ ಗೀತಾ ಈಳಿಗೇರ,ಸ್ವ-ಸಹಾಯ ಸಂಘದ ಮಹಿಳೆಯರು ನರೇಗಾ ಕೂಲಿಕಾರರು ಭಾಗವಹಿಸಿದ್ದರು.

# ರಾಷ್ಟ್ರೀಯ ಡೆಂಗಿ ದಿನ ನಗರದ ಪ್ರಮುಖ ಬೀದಿಗಳಲ್ಲಿ ಜನಜಾಗೃತಿ ರ್‍ಯಾಲಿ



ರಾಯಚೂರು ಮೇ 16: ರಾಷ್ಟ್ರೀಯ ಡೆಂಗಿ ದಿನಾಚರಣೆ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ವಿಭಾಗದಿಂದ ನಗರದಲ್ಲಿ ಮೇ 16ರಂದು ಶುಕ್ರವಾರ ಡೆಂಗಿ ಕುರಿತ ಜನಜಾಗೃತಿ ರ್‍ಯಾಲಿ ನಡೆಯಿತು.

ರ್‍ಯಾಲಿಗೆ ಚಾಲನೆ ನೀಡಿದ ಪ್ರಭಾರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾ.ಗಣೇಶ್ ಅವರು ಮಾತನಾಡಿ, ಡೆಂಗಿ ರೋಗ ನಿಯಂತ್ರಣಕ್ಕಾಗಿ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಮಾಡಬೇಕು. ಸೊಳ್ಳೆ ಕಡಿತದಿಂದ ರಕ್ಷಣೆ ಪಡೆಯಬೇಕು ಎಂದು ಹೇಳಿದರು.

ಪರಿಶೀಲನೆ, ಸ್ವಚ್ಚಗೊಳಿಸಿ, ಮುಚ್ಚಿಡಿ ಎಂಬ ಧ್ಯೇಯ ವಾಕ್ಯದೊಂದಿಗೆ ರಾಷ್ಟ್ರೀಯ ಡೆಂಗಿ ದಿನ

ಆಚರಿಸಲಾಗುತ್ತಿದೆ. ಸೊಳ್ಳೆಗಳ ನಿಯಂತ್ರಣವೊಂದೇ ಡೆ-ಂಗೆ ರೋಗದ ಹತೋಟಿಗೆ ಮುಖ್ಯ ವಿಧಾನ. ನೀರನ್ನು ಶೇಖರಿಸಿಡುವ ಸಿಮೆಂಟ್ ತೊಟ್ಟಿ, ಕಲ್ಲು ಚಪ್ಪಡಿಯಿಂದ ನಿರ್ಮಿಸಿದ ತೊಟ್ಟಿ, ಡ್ರಮ್ ಬ್ಯಾರಲ್, ಎರ್‌ಕೂಲರ್, ಮಣ್ಣಿನ ಮಡಿಕೆಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ತಿಕ್ಕಿ ತೊಳೆದು ಒಣಗಿಸಿ ಮತ್ತೆ ಭರ್ತಿ ಮಾಡಿಕೊಳ್ಳಬೇಕು.ಬಯಲಿನಲ್ಲಿರುವ ತ್ಯಾಜ್ಯವಸ್ತುಗಳಾದ ಟಯರ್, ಎಳನೀರಿನ ಚಿಪ್ಪು, ಒಡೆದ ಬಾಟಲಿ ಮುಂತಾದವುಗಳಲ್ಲಿ ನೀರು ಸಂಗ್ರಹಣವಾಗದಂತೆ ಎಚ್ಚರ ವಹಿಸಬೇಕು. ಸ್ವ-ಯಂ ರಕ್ಷಣಾ ವಿಧಾನಗಳನ್ನು ಅನುಸರಿಸಬೇಕು. ಯಾವುದೇ ಜ್ವರವಿರಲಿ ಹತ್ತಿರದ ಸರ್ಕಾರಿ ಆರೊಗ್ಯ ಕೇಂದ್ರಕ್ಕೆ ಭೇಟಿ ನೀಡಿ ರಕ್ತಪರೀಕ್ಷೆ ಮಾಡಿಸಿಕೊಳ್ಳಬೇಕು. ರೋಗ ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ರೋಗ ಬಾರದಂತೆ ಮುಂಜಾಗ್ರತ ಕ್ರಮ ತೆಗೆದುಕೊಳ್ಳುವುದು ಉತ್ತಮ ಎಂದರು.

ಧ್ವನಿವರ್ಧಕಗಳ ಮೂಲಕ ಜಾಗೃತಿ: ರ್‍ಯಾಲಿಯಲ್ಲಿ ಡೆಂಗಿ, ಚಿಕುನ್‌ಗುನ್ಯ ಅರಿವು ಮೂಡಿಸುವ ಫಲಕಗಳು ಗಮನ ಸೆಳೆದವು. ಡೆಂಗಿ ರೋಗವು ಈಡೀಸ್ ಈಜಿಪ್ತಿ ಸೊಳ್ಳೆಗಳಿಂದ ಹರಡುತ್ತದೆ. ಇದೊಂದು ಮಾರಣಾಂತಿಕ ಕಾಯಿಲೆಯಾಗಿದೆ. ಜ್ವರ ಬಂದ ಕೂಡಲೇ ರಕ್ತ ತಪಾಸಣೆ ಮಾಡಿಸಬೇಕು. ಮನೆಯ ಸುತ್ತ-ಮುತ್ತ ಕಲುಷಿತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಸೊಳ್ಳೆ ಉತ್ಪತ್ತಿ ತಾಣಗಳನ್ನು ನಿರ್ಮೂಲನೆಗೊಳಿಸಿ, ಸೊಳ್ಳೆಗಳ ಬೆಳವಣಿಗೆ ನಿಯಂತ್ರಿಸಿದಲ್ಲಿ ಡೆಂಗಿ ಹಾಗೂ ಇತರ ಸೊಳ್ಳೆ ಜನಿತ ರೋಗಗಳಾದ ಚಿಕುನ್ ಗುನ್ಯ, ಆನೆ ಕಾಲು ರೋಗ, ಮಲೇರಿಯಾ ರೋಗಗಳನ್ನು ನಿಯಂತ್ರಿಸಬಹುದು ಎನ್ನುವ ಮಾಹಿತಿಯನ್ನು ಧ್ವನಿವರ್ಧಕಗಳ ಮೂಲಕ ನೀಡಲಾಯಿತು.

ನಗರದ ಪ್ರಮುಖ ಬೀದಿಗಳಲ್ಲಿ ಜಾಥ: ರಾಷ್ಟ್ರೀಯ ಡೆಂಗಿ ದಿನಾಚರಣೆಯ ಅಂಗವಾಗಿ ಆಯೋಜಿಸಿರುವ ಜಾಥಾವು ಬೆಳಿಗ್ಗೆ 8 ಗಂಟೆಗೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ ಪ್ರಾರಂಭವಾಗಿ ಭಗತ್‌ಸಿಂಗ್ ವೃತ್ತದ ಮಾರ್ಗವಾಗಿ ತಿನ್‌ಕಂದಿಲ್, ಉಸ್ಮಾನಿಯಾ ತರಕಾರಿ ಮಾರುಕಟ್ಟೆ ಮೂಲಕ ಮಹಾವಿರ ವೃತ್ತದವರೆಗೆ ಸಾಗಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ, ಜಿಲ್ಲಾ ವಿಬಿಡಿಸಿ ಅಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳಾದ ಡಾ.ಎಂ.ಡಿ.ಶಾಕೀರ್, ಮನೋರೊಗ ತಜ್ಞರಾದ ಡಾ.ಮನೊಹರ್ ಪತ್ತಾರ್, ಸಂಧ್ಯಾ ನಾಯಕ ಸೇರಿದಂತೆ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು, ಸಿಬ್ಬಂದಿ ಇದ್ದರು.

# ಕೊಪ್ಪಳ ಜಿಲ್ಲೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಜನಾಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.16: ಜಿಲ್ಲೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಒತ್ತಾಯಿಸಿ ಜನಪರ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ವಿವಿಧ ಸಂಘಟನೆಗಳಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕೊಪ್ಪಳ ಬಸಾಪುರ ಸಮೀಪದ ವಿಮಾನ ನಿಲ್ದಾಣದ ಬಳಿ ಶುಕ್ರವಾರ ಜನಾಗ್ರಹ ಮನವಿ ಸಲ್ಲಿಸಲಾಯಿತು. ಮನವಿಯಲ್ಲಿ ತಾವು ಕರ್ನಾಟಕದ ಮುಖ್ಯಮಂತ್ರಿಯಾಗಿ ಎರಡನೇ ಬಾರಿಗೆ ಆಯ್ಕೆಯಾದ ಬಳಿಕದಿಂದ ಎರಡು ಬಜೆಟ್ ಗಳನ್ನು ಮಂಡಿಸಿದ್ದೀರಿ, ಆದರೂ ಇನ್ನುವರೆಗೆ ಕೊಪ್ಪಳಕ್ಕೆ ಹೇಳಿಕೊಳ್ಳುವಂತಹ ಯಾವುದೇ ದೊಡ್ಡ ಯೋಜನೆಗಳು ಬಂದಿರುವುದಿಲ್ಲ. ಕಾರಣ ತಮ್ಮ ಮೇಲೆ ಕೊಪ್ಪಳದ ಜನತೆ ಬಹಳಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ತಾವು 1991ರಲ್ಲಿ ಕೊಪ್ಪಳ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ನಗರದ ಪ್ರಮುಖ ರಸ್ತೆಗಳಲ್ಲಿ ಪಾದಯಾತ್ರೆ ಮಾಡಿ ಜನರನ್ನು ಸಮೀಪದಿಂದ ದರ್ಶನವಾಗಿ ಅಚ್ಚಳಿಯದಂತೆ ಉಳಿದದ್ದು, ಅಭಿಮಾನದಿಂದ ಕೊಪ್ಪಳಕ್ಕೆ ಅನೇಕ ದೊಡ್ಡ ಯೋಜನೆಗಳು ಮಂಜೂರು ಮಾಡುವಿರೆಂದು ಅಪೇಕ್ಷೆ ಪಟ್ಟಿದ್ದಾರೆ. ತಾವು ಕೊಪ್ಪಳಕ್ಕೆ ಬಂದಾಗೊಮ್ಮೆ" ಕೊಪ್ಪಳ ನನ್ನ ಪ್ರೀತಿಯ ಕ್ಷೇತ್ರ," ನಾನು ಎಂದಿಗೂ ಮರೆಯಲಾರೆ "ಎಂದು ಸ್ಮರಿಸುತ್ತೀರಿ, ತಾವು ಈ ಬಾರಿಯೂ ಮುಖ್ಯಮಂತ್ರಿ ಆಗಲೆಂದು ಕೊಪ್ಪಳ ವಿಧಾನ ಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಕೆ,ರಾಘವೇಂದ್ರ ಬಿ,ಹಿಟ್ನಾಳ್ ಅವರನ್ನು ಆಯ್ಕೆ ಮಾಡಿದ್ದಾರೆ, ಅಲ್ಲದೆ ಕೊಪ್ಪಳ ನಗರ ಸಭೆ ಅಧ್ಯಕ್ಷರು ೨.ಶಾಸಕರು.ಸಂಸದರು.ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಮುಖ್ಯಮಂತ್ರಿಯಾಗಿರುವ ತಾವು ಕಾಂಗ್ರೆಸ್ ಪಕ್ಷದವರೇ ಇದ್ದರೂ ತಮ್ಮಿಂದ ಯಾವ ದೊಡ್ಡ ಯೋಜನೆಗಳು ಮಂಜೂರು ಆಗದೆ ಇರುವುದು ವಿಷಾದನೀಯ. ಈಗಲಾದರೂ ತಾವು ಹೆಚ್ಚಿನ ಕಾಳಜಿ ವಹಿಸಿ ನಮ್ಮ ಕೊಪ್ಪಳ ಜಿಲ್ಲೆಗೆ ಕೆಲವು ದೊಡ್ಡ ಯೋಜನೆಗಳನ್ನು ಜಾರಿಗೊಳಿಸಬೇಕು. ಅಗತ್ಯವಾಗಿ ಬೇಕಾಗಿರುವ ಜಿಲ್ಲಾ ಕೇಂದ್ರ ಕೊಪ್ಪಳಕ್ಕೆ ಅತ್ಯಾಧುನಿಕ ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ. ಕುಕನೂರು. ಕನಕಗಿರಿ. ಕಾರಟಗಿ ತಾಲೂಕುಗಳಲ್ಲಿ ನೂರು ಹಾಸಿಗೆಯ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳನ್ನು ಮಂಜೂರು ಮಾಡಬೇಕು. ಕೊಪ್ಪಳಕ್ಕೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮಂಜೂರು ಮಾಡಬೇಕು, ಜಿಲ್ಲಾ ಆಸ್ಪತ್ರೆಗೆ ಎಮ್. ಆರ್.ಐ,ಯಂತ್ರ,ಟ್ರಕ್‌ಟರ್ಮಿನಲ್ ನಿರ್ಮಾಣ. ಕೊಪ್ಪಳ ನಗರಕ್ಕೆ ವರ್ತುಲದ ರಸ್ತೆ ನಿರ್ಮಾಣ ವಿಳಂಬವಾಗುತ್ತಿದ್ದು.ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ಒಂದರ್ಧ ಭಾಗದಲ್ಲಿ ಬರುವುದರಿಂದ ಉಳಿದ ಅರ್ಧ ಭಾಗ ಮಾತ್ರ ಅಂದರೆ ದದೆಗಲ್ ಬಳಿಯಿಂದ ಭಾಗ್ಯನಗರದ ಹೊರವಲಯದಿಂದ ಕಿನ್ನಾಳ, ಕುಷ್ಟಗಿ ರಸ್ತೆ ಒಳಗೊಂಡು ಕಿಡದಾಳ ಬಳಿಯಿಂದ ರಾಷ್ಟ್ರೀಯ ಹೆದ್ದಾರಿ ಚತುಷ್ಪಥ ರಸ್ತೆವರೆಗೆ ಹೊಸ ಅರ್ಧ ವರ್ತುಲ ರಸ್ತೆ ನಿರ್ಮಿಸಬೇಕು.ನಗರದ ರಾಜ್‌ಕಾಲುವೆ ನವೀಕರಣ. ಕೊಪ್ಪಳ ನಗರದಲ್ಲಿ ಹಾಗೂ ಗ್ರಾಮೀಣ ಭಾಗದಲ್ಲಿ ಹದಗೆಟ್ಟಿರುವ ಬಹುತೇಕ ರಸ್ತೆಗಳಿಗೆ ತಕ್ಷಣ ಡಾಂಬರೀಕರಣ. ಕೊಪ್ಪಳ ನಗರದ ಪ್ರಮುಖ ರಸ್ತೆಗಳ ಎರಡೂ ಬದಿಗಳಲ್ಲಿ ಬೀದಿದೀಪ ಕಂಬಗಳ ವಿದ್ಯುತ್ ತಂತಿಗಳು ಭೂಗತ (ಅಂಡರ್ ಗ್ರೌಂಡ್) ವಾಗಿ ಅಳವಡಿಸುವ ಯೋಜನೆ ಜಾರಿಗೆ ತರಬೇಕು.ಎಲ್. ಕೆ.ಜಿ,ಯಿಂದ ಅತ್ಯಾಧುನಿಕ ತಾಂತ್ರಿಕ ಶಿಕ್ಷಣದೊಂದಿಗೆ ವಿವಿಧ ಉನ್ನತ ಪದವಿಗಳನ್ನು ಓದಲು ಅವಕಾಶ ಮಾಡಿ ಒಂದೇ ಕಡೆ ಶೈಕ್ಷಣಿಕ ವಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಬೇಕು. ಹುಲಿಕೆರೆ ಮತ್ತು ಮೋಥಿ ಕೆರೆ ಪ್ರವಾಸಿ ತಾಣಗಳಾಗಿವೆ. ಇವುಗಳನ್ನು ಅಭಿವೃದ್ಧಿ ಪಡಿಸಿ ಸಾಹಸ ಕ್ರೀಡೆಗಳನ್ನು ಪ್ರಾರಂಭಿಸಬೇಕು. ಕೊಪ್ಪಳ ನಗರದ ಪ್ರಮುಖ ವೃತ್ತಗಳನ್ನು ನವೀಕರಣ ಗೊಳಿಸಬೇಕು. ಐದು ವರ್ಷಗಳಿಂದ ಸ್ಥಗಿ-ತಗೊಂಡ ನಗರ ಸಾರಿಗೆ ಬಸ್ ಸಂಚಾರ ಪುನಃ ಪ್ರಾರಂಭಿಸಬೇಕು.ದಶಕಕ್ಕೂ ಹೆಚ್ಚು ದಿನಗಳಿಂದ ನೆನೆಗುದಿಗೆ ಬಿದ್ದಿರುವ ಬಸಾಪುರ ಬಳಿಯ ಸಣ್ಣ ಕೈಗಾರಿಕಾ ವಲಯ ಸ್ಥಾಪನೆಗೆ 2025 – 26ನೇ ಸಾಲಿನಲ್ಲಿ ಪ್ರಾರಂಭಿಸಲು ಜನಾಗ್ರಹ ಮೂಲಕ ತಮ್ಮಲ್ಲಿ ಕೋರುತ್ತೇವೆ ಎಂದು ಜನಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಎಸ್.ಎ.ಗಫಾರ್. ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಬಸವರಾಜ್ ಶೀಲವಂತರ್, ಕೊಳಚೆ ನಿರ್ಮೂಲನಾ ವೇದಿಕೆಯ ಸಂಚಾಲಕ ಮಖಬೂಲ್ ರಾಯಚೂರು ಮುಂತಾದವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಅರ್ಪಿಸಿದರು.



ಚಿಟಗುಪ್ಪ: ಕನ್ನಡ ಸೇನೆ ಕರ್ನಾಟಕ ಸಂಘಟನೆ ವತಿಯಿಂದ ಜೂನ್ 19ರಂದು ಬೀದರ್ ನಗರದಲ್ಲಿ ನಡೆಯುವ ಗಡಿ ನಾಡು ಕನ್ನಡ ಜಾಗೃತ ಸಮಾವೇಶದ ಕಾರ್ಯಕ್ರಮಕ್ಕೆ ಅಗಮಿಸುವಂತೆ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಕೆ.ಆರ್.ಕುಮಾರಣ್ಣನವರ ನೇತೃತ್ವದಲ್ಲಿ ಕರ್ನಾಟಕ ಗಡಿ ಪ್ರದೇಶದ ಪ್ರಾಧಿಕಾರ ಅಭಿವೃದ್ಧಿ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ಅವರನ್ನು ಬೆಂಗಳೂರಿನ ಅವರ ಕಚೇರಿಯಲ್ಲಿ ಅಮಂತ್ರಣ ಪತ್ರಿಕೆ ನೀಡಿದರು. ಈ ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ, ಬೀದರ್ ಜಿಲ್ಲಾಧ್ಯಕ್ಷ ಸುಭಾಷ್ ಕೆನೆಡೆ, ರಾಜಶೇಖರ್ ಮಂಗಲಪೇಟ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಾಧನೆಗೆ ಶಿಕ್ಷಣ ಸಾಧನವಾಗಿಸಿಕೊಳ್ಳಿ




ಬೀದರ. ಮೇ. 16 : ವಿದ್ಯಾರ್ಥಿಗಳು ಜೀವನದಲ್ಲಿ ಸಾಧನೆಗೆ ಶಿಕ್ಷಣವನ್ನು ಸಾಧನವಾಗಿಸಿಕೊಳ್ಳಬೇಕು ಎಂದು ಚಿದಂಬರ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಸ್ವಾತ್ಮಾನಂದಸ್ವಾಮೀಜಿಹೇಳಿದರು. ನಗರದ ಸದ್ಗುರು ಸಿದ್ಧಾರೂಢ ಮಹಿಳಾ ಪದವಿ ಕಾಲೇಜಿನಲ್ಲಿ ಗುರುವಾರ ನಡೆದ ಬಿ.ಎ. ಹಾಗೂ ಬಿ.ಕಾಂ. ಅಂತಿಮ ವರ್ಷದ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು, ಸಾಧನೆ ಇಲ್ಲದ ಜೀವನಕ್ಕೆ ಮೌಲ್ಯ ಇಲ್ಲ ಎಂದು ತಿಳಿಸಿದರು.

ಒಳ್ಳೆಯವರ ಸಹವಾಸ ಮಾಡಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮಾತನಾಡಿ, ಹೆಣ್ಣುಮಕ್ಕಳು ಮನಸ್ಸು ಮಾಡಿದರೆ ಏನೂ ಬೇಕಾದರೂ ಸಾಧಿಸಬಹುದು ಎಂದು ತಿಳಿಸಿದರು. ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ವಿಶ್ವವಿದ್ಯಾಲಯದ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಪ್ರೊ. ಆರ್.ವಿ.ಗಂಗಶೆಟ್ಟಿ ಮಾತನಾಡಿ, ಜೀವನದಲ್ಲಿ ಉನ್ನತ ಗುರಿ ಇಟ್ಟುಕೊಳ್ಳಬೇಕು. ಕಠಿಣ ಪರಿಶ್ರಮದ ಮೂಲಕ ಅದನ್ನು ಸಾಧಿಸಬೇಕು ಎಂದು ಹೇಳಿದರು.

ಚಂದ್ರಪ್ಪಗೌರಶೆಟ್ಟಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ಡಾ. ಚಂದ್ರಪ್ಪ ಭತಮುರ್ಗೆ, ಶ್ರೀಮತಿ ಇಂದಿರಾಬಾಯಿ ಗುರುತಪ್ಪ ಶೆಟಕಾರ್ ಪ್ರೌಢಶಾಲೆಯ ಮುಖ್ಯಶಿಕ್ಷಕ ಲಕ್ಷ್ಮಣ ಪೂಜಾರಿ, ಉಪನ್ಯಾಸಕ ಸೂರ್ಯಕಾಂತ ಐನಾಪುರೆ ಮಾತನಾಡಿದರು. ವಿದ್ಯಾರ್ಥಿನಿಯರಾದ ದೀಪಿಕಾ, ಧನಲಕ್ಷ್ಮಿ, ಭವಾನಿ, ಶಿವಾನಿ ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಕಾಲೇಜು ಪ್ರಾಚಾರ್ಯ ನಾಗಪ್ಪ ಜಾನಕನೋರ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕರಾದ ಈಶ್ವರ ರೆಡ್ಡಿ, ರಾಜಶೇಖರ ಸಜ್ಜನ್, ಬಸವರಾಜ ಬಿರಾದಾರ, ಮಂಗಲಾ ಲಕ್ಕಶೆಟ್ಟಿ, ರಾಜಮ್ಮ ನೇಳಗೆ, ವಿಜಯಲಕ್ಷ್ಮಿ ಶೆಟಕಾರ್, ಸಪ್ನಾ ಸ್ವಾಮಿ, ಅರ್ಚನಾ ಹಲಬುರ್ಗೆ, ಶ್ವೇತಾ ಯದಲಾಪುರೆ, ಆಕಾಶ್ ಜಮಾದಾರ್ ಶೋಭಾ ಇದ್ದರು. ಉಪನ್ಯಾಸಕಿ ರಾಖಿ ಕಾಡಗೆ ಸ್ವಾಗತಿಸಿದರು. ಶಾಂತಮ್ಮ, ಸುಖೇಸಿನಿ ನಿರೂಪಿಸಿದರು. ಅಂಜಲಿ ವಂದಿಸಿದರು.

# ಗಣೇಶ್ ನಗರ ಬಡಾವಣೆಗೆ ನಗರಸಭಾ ಅಧ್ಯಕ್ಷ ಅಮ್ಜದ್ ಪಟೇಲ್ ಭೇಟಿ: ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.16: ನಗರಸಭೆಯ 26 ನೇ ವಾರ್ಡಿನ ವ್ಯಾಪ್ತಿಯಲ್ಲಿ ಬರುವ ಗಣೇಶ್ ನಗರ ಬಡಾವಣೆಗೆ ಕೊಪ್ಪಳ ನಗರಸಭೆಯ ಅಧ್ಯಕ್ಷ ಅಮ್ಜದ್ ಪಟೇಲ್ ಭೇಟಿ ಮಾಡಿ ವಾರ್ಡಿನ ಸಾರ್ವಜನಿಕರಿಂದ ದೂರು, ಕುಂದು ಕೊರತೆಗಳ ಅಹವಾಲು ಸ್ವೀಕರಿಸಿದರು, ಅಲ್ಲಿ ನಡೆಯುತ್ತಿರುವ ಕೆಲಸಗಳನ್ನು ವೀಕ್ಷಣೆ ಮಾಡಿದರು ಚರಂಡಿ ರಸ್ತೆ ಉಪ ರಸ್ತೆಗಳ ದುರಸ್ತಿ, ಕುಡಿಯುವ ನೀರಿನ ಬೋರ್ವೆಲ್ ಪೈಪ್ಲೈನ್ ಇತ್ಯಾದಿ ಕೆಲಸಗಳನ್ನು ಕೂಡಲೇ ಕೈಗೊಂಡು ವಾರ್ಡಿನ ಜನತೆಗೆ ಅನುಕೂಲತೆ ಒದಗಿಸಿಕೊಡುವ ದಾಗಿ ಭರವಸೆ ನೀಡಿದರು, ಕೂಡಲೆ ಜನರ ಬೇಕು ಬೇಡಿಕೆಗಳ ಈಡೇರಿಕೆಗಾಗಿ ಮತ್ತು ಅಗತ್ಯ ಸೌಕರ್ಯ ಒದಗಿಸಿ ಕೊಡುವ ನಿಟ್ಟಿನಲ್ಲಿ ಈಗಾಗಲೇ ನಾನು 4 ತಿಂಗಳ ಹಿಂದುಗಡೆ ನಾನು ಆ ವಾಡಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮತ್ತು ಶಾಸಕರು ಕೂಡ ಭೇಟಿ ನೀಡಿ ಅಲ್ಲಿಯ ದೊಡ್ಡನೀರಿನ ಸಮಸ್ಯೆ ಮತ್ತು ಚರಂಡಿಗಳ ಸಮಸ್ಯೆ ಬಹಳವಾಗಿದ್ದು ಆದ ಕಾರಣ ಈಗಾಗಲೇ ಒಂದು ಕೋಟಿ 43 ಲಕ್ಷ ರೂಪಾಯಿಗಳು ಜಿಲ್ಲಾಧಿಕಾರಿಗಳು ಮಂಜೂರು ಮಾಡಲಾಗಿದ್ದು ನಗರಸಭೆಯ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕೆಂದು ಕೊಪ್ಪಳನಗರಸಭೆಯ ಅಧ್ಯಕ್ಷರಾದ ಅಮ್ಜದ್ ಪಟೇಲ್ ಸೂಚನೆ ನೀಡಿದರು, ಈ ಸಂದರ್ಭದಲ್ಲಿ ನಗರಸಭೆಯ ಅಧಿಕಾರಿ ಸಿಬ್ಬಂದಿ ವರ್ಗದವರು, ವಾರ್ಡಿನ ನಾಗರಿಕರು, ಸೇರಿದಂತೆ ಕಾರ್ಯಕರ್ತರು ಮತ್ತು ಅಭಿಮಾನಿಗಳು ಪಾಲ್ಗೊಂಡಿದ್ದರು.

# ಮಕ್ಕಳ ಪ್ರಕರಣಗಳಲ್ಲಿ ಕಟ್ಟುನಿಟ್ಟಾಗಿ ನಿಯಮ ಪಾಲಿಸಿ:ರಾಮತ್ನಾಳ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ಪೊಲೀಸ್ ಠಾಣೆಗಳಲ್ಲಿ ದಾಖಲಾಗುವ ಮಕ್ಕಳ ಮೇಲಿನ ಪ್ರಕರಣಗಳ ನಿರ್ವಹಣೆ ಸಮಯದಲ್ಲಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಪೊಲೀಸ್ ಠಾಣಾಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಮಕ್ಕಳ ವಿಶೇಷ ಪೊಲೀಸ್ ಘಟಕದ ಮಕ್ಕಳ ಕಲ್ಯಾಣಾಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಮಕ್ಕಳ ಪ್ರಕರಣಕ್ಕೆ ಸಂಬಂಧಿಸಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಧಿಕಾರಿಗಳು ಮಕ್ಕಳ ಸಾಮಾಜಿಕ ಹಿನ್ನೆಲೆ ಮತ್ತು ಅಪರಾಧದಲ್ಲಿ ಮಗು ಒಳಗೊಳ್ಳುವ ಪ್ರತಿಯೊಂದು ಪ್ರಕರಣಗಳಲ್ಲಿ ಬಂಧಿಸುವ ಸಂದರ್ಭದಲ್ಲಿ ಸಾಮಾಜಿಕ ಹಿನ್ನೆಲೆ ವರದಿಯನ್ನು ಮಂಡಳಿಗೆ ಕಡ್ಡಾಯವಾಗಿ ಸಲ್ಲಿಸಲು ತಿಳಿಸಿದರು.

ಎಸ್‌ಜೆಪಿಯು ಕಲ್ಯಾಣ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳ ಬಾಲನ್ಯಾಯ ಕಾಯ್ದೆ–2015ರ ಕುರಿತು ತರಬೇತಿ ಪಡೆದ ಬಗ್ಗೆ ಮಾಹಿತಿ ಪಡೆದರಲ್ಲದೇ ಪ್ರತಿ ಪೊಲೀಸ್ ಠಾಣೆಯಲ್ಲಿ ಮಕ್ಕಳ ಪ್ರಕರಣಗಳನ್ನು ನಿರ್ವಹಿಸಿದ ರಜಿಸ್ಟರ್ ಹಾಗೂ ಠಾಣೆಯಲ್ಲಿ ಮಕ್ಕಳ ರಕ್ಷಣೆಗೆ ಸಂಬಂಧಿಸಿದ ನಾಮಫಲಕಗಳನ್ನು ಪ್ರದರ್ಶನ ಮಾಡಿರುವ ಕುರಿತು ಮಾಹಿತಿ ಪಡೆದುಕೊಂಡರು.

ಮಕ್ಕಳ ಸಹಾಯವಾಣಿ ಸಹಯೋಗದಲ್ಲಿ ಠಾಣೆಯಲ್ಲಿ ನಡೆಸಲಾದ ತೆರೆದ ಮನೆ ಕಾರ್ಯಕ್ರಮದಡಿ ವಿವಿಧ ಶಾಲೆಗಳಿಗೆ ತೆರಳಿ ಬಾಲ್ಯವಿವಾಹ ನಿಷೇಧ ಕಾಯ್ದೆ, ಬಾಲ ಕಾರ್ಮಿಕ ಪದ್ಧತಿ, ಲೈಂಗಿಕ ಅಪರಾಧಗಳಿಂದ ಮಕ್ಕಳಾ ರಕ್ಷಣಾ ಕಾಯ್ದೆ ಹಾಗೂ ಆರ್.ಟಿ.ಇ ಕಾಯ್ದೆಗಳ ಬಗ್ಗೆ ತೆಗೆದುಕೊಂಡ ಕ್ರಮಗಳ ಕುರಿತು ಅಧಿಕಾರಿಗಳು ಸಭೆಗೆ ತಿಳಿಸಿದರು.

2024–25ನೇ ಸಾಲಿನಲ್ಲಿ ಪೋಕ್ಸೋ, ಬಾಲ್ಯವಿವಾಹಕ್ಕೆ ಸಂಬಂಧಿಸಿದ ಪ್ರಕರಣಗಳು, ಬಾಲ ಮತ್ತು ಕಿಶೋರಿ ಕಾರ್ಮಿಕ ಪದ್ಧತಿ ಪ್ರಕರಣಗಳು, ಮಕ್ಕಳ ನಾಪತ್ತೆ (ಮಕ್ಕಳ ಅಪಹರಣ) ಪ್ರಕರಣಗಳು, ಮಕ್ಕಳ ಕಳ್ಳ ಸಾಗಣೆಗೆ ಸಂಬಂಧಿಸಿದ ಪ್ರಕರಣಗಳು, ಮಕ್ಕಳ ನ್ಯಾಯ ಕಾಯ್ದೆಯ ಅಧ್ಯಾಯ 9 ರಡಿಯಲ್ಲಿ ದಾಖಲಾದ ಪ್ರಕರಣಗಳು, ಮಕ್ಕಳ ನ್ಯಾಯ ಕಾಯ್ದೆಗಳ ಅಡಿಯಲ್ಲಿ ದಾಖಲಾದ ಪ್ರಕರಣಗಳ ಬಗ್ಗೆ ದಾಖಲಾಗಿರುವ ಠಾಣಾವಾರು ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಡಿ.ಎಸ್.ಪಿ ಗಜಾನನ ಸುತಾರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ ಎಂ, ಸೇರಿದಂತೆ ಸಹಾಯಕ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು ಹಾಗೂ ಠಾಣಾವಾರು ನೇಮಕ ಮಾಡಲಾಗಿರುವ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆ

## ಸೌಲಭ್ಯಗಳ ದುರುಪಯೋಗವಾದರೆ ಶಿಸ್ತುಕ್ರಮ : ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಅಡಿಯಲ್ಲಿ ಅರ್ಹ ಫಲಾನುಭವಿಗಳೆಂದು ಗುರುತಿಸಿಕೊಂಡು ಕೃಷಿ ಮತ್ತು ಇನ್ನಿತರ ಇಲಾಖೆಗಳಿಂದ ಕೃಷಿ ಸಲಕರಣೆ, ಟ್ರ್ಯಾಕ್ಟರ್, ಯಂತ್ರೋಪಕರಣಗಳನ್ನು ಪಡೆದು ನಂತರದಲ್ಲಿ ಅವುಗಳನ್ನು ಮಾರಾಟ ಮಾಡಿದಲ್ಲಿ ಅವುಗಳನ್ನು ತೆಗೆದುಕೊಂಡವರು ಮತ್ತು ಮಾರಾಟ ಮಾಡಿದವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಮ್ ಹೇಳಿದರು.

ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಸಮಾಜ ಕಲ್ಯಾಣ ಇಲಾಖೆಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಇಲಾಖಾವಾರು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರದಿಂದ ಪಡೆದಂತಹ ಉಪಕರಣ, ಯಂತ್ರೋಪಕರಣಗಳನ್ನು ಅಥವಾ ಇನ್ನಾವುದೇ ಸೌಲಭ್ಯವನ್ನಾದರೂ ಫಲಾನುಭವಿಗಳೇ ಉಪಯೋಗಿಸಿಕೊಳ್ಳಬೇಕೆ ಹೊರತು ಮಾರಾಟ ಮಾಡುವುದಾಗಲಿ ಅಥವಾ ವರ್ಗಾಯಿಸುವ ಕಾರ್ಯವಾಗಬಾರದು ಎಂದರು.

ಈ ಹಿನ್ನಲೆಯಲ್ಲಿ ಆಯಾ ತಾಲೂಕಿನ ಸಮಾಜ ಕಲ್ಯಾಣಾಧಿಕಾರಿ ಸೌಲಭ್ಯಗಳನ್ನು ಪಡೆದ ಫಲಾನುಭವಿಗಳ ಮನೆಗೆ ಭೇಟಿ ನೀಡಿ ಯೋಜನೆಯಡಿ ಪಡೆದ ಸಲಕರಣೆಗಳು ಮತ್ತು ಯಂತ್ರೋಪಕರಣಗಳು ಸದ್ಬಳಕೆಯಾಗುತ್ತಿವೆಯೇ ಅಥವಾ ಆರ್ಥಿಕವಾಗಿ ಸಬಲರಾಗಿರುವವರ ಪಾಲಾಗಿವೆಯೇ ಎಂಬುದನ್ನು ಖಚಿತ ಪಡೆಸಿಕೊಳ್ಳಬೇಕು ಎಂದು ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಸದಾಶಿವ ಬಡಿಗೇರ, ಕಳೆದ ಬಾರಿಯ ಸಭೆಯಲ್ಲಿ ಜಿಲ್ಲಾಧಿಕಾರಿಗಳು ಸೂಚಿಸಿದಂತೆ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಎಸ್‌ಸಿಎಸ್‌ಪಿ ಹಾಗೂ ಟಿಎಸ್‌ಪಿ ಸಭೆಯನ್ನು ಕಡ್ಡಾಯವಾಗಿ ಜರುಗಿಸುವಂತೆ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಿಗೆ ಹೇಳಲಾಗಿ, ಎಲ್ಲ ತಾಲ್ಲೂಕುಗಳಲ್ಲಿ ಸಭೆಯನ್ನು ನಡೆಸಲಾಗಿರುತ್ತದೆ.

2024–25 ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ(ಎಸ್‌ಸಿಎಸ್‌ಪಿ) ಗಿರಿಜನ ಉಪಯೋಜನೆ(ಟಿಎಸ್‌ಪಿ) ಯಡಿ 2024 ರ ಏಪ್ರಿಲ್ 1 ರಿಂದ 2025 ರ ಮಾರ್ಚ 31 ರವರಗೆ ಕೃಷಿ ಇಲಾಖೆಯಲ್ಲಿ ಎಸ್‌ಸಿಎಸ್‌ಪಿ ಅಡಿಯಲ್ಲಿ ಶೇ.67.32 ರಷ್ಟು ಮತ್ತು ಟಿ ಎಸ್ ಪಿ ಅಡಿಯಲ್ಲಿ ಶೇ.79.22 ರಷ್ಟು, ತೋಟಗಾರಿಕೆ ಇಲಾಖೆಯಲ್ಲಿ ಶೇ.60.83 ಹಾಗೂ ಶೇ.62.89, ರೇಷ್ಮೆ ಇಲಾಖೆಯಲ್ಲಿ ಶೇ.96.43 ಹಾಗೂ ಶೇ.100 ರಷ್ಟು ಭೌತಿಕ ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಪಿ.ರುಟ್ರುನ್ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲಾ ಸಮನ್ವಯ ಸಮಿತಿ ಸಭೆ-ಜಿಲ್ಲಾಧಿಕಾರಿ ಜಾನಕಿ ಸೂಚನೆ

## ನಿಗದಿತ ಅವಧಿಯಲ್ಲಿ ಜನನ, ಮರಣ ನೋಂದಣಿಗೆ ಕ್ರಮವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ಆಸ್ಪತ್ರೆಗಳಲ್ಲಿ ಸಂಭವಿಸಿದ ಜನನ, ಮರಣ ಮತ್ತು ನಿರ್ಜೀವ ಜನನ ಘಟನೆಗಳನ್ನು ನಿಗದಿತ ಸಮಯದೊಳಗೆ ನೋಂದಣಿಗೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಗರಿಕ ನೋಂದಣಿ ಪದ್ಧತಿಯನ್ನು ಉತ್ತಮ ಪಡಿಸುವ ಸಲುವಾಗಿ ಶುಕ್ರವಾರ ಜರುಗಿದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇ–ಜನ್ಮ ತಂತ್ರಾಂಶದಲ್ಲಿ ಜನನ ಮತ್ತು ಮರಣ ನೋಂದಣಿಯನ್ನು 21 ದಿನಗಳೊಳಗಾಗಿ ಮಾಡಬೇಕು. ನೋಂದಣಿಯಾಗದೇ ಸಾರ್ವಜನಿಕರಿಗೆ ತೊಂದರೆಯಾದಲ್ಲಿ ಸಂಬಂಧಿಸಿದ ಉಪನೋಂದಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಹೇಳಿದರು. ನೋಂದಣಿ ಪ್ರಕ್ರಿಯೆಗೆ ಪೊಲೀಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಇಲಾಖೆಗಳ ಸಹಕಾರ ಪಡೆದುಕೊಳ್ಳಬೇಕು. ಜಿಲ್ಲೆಯ ಎಲ್ಲ ಆರೋಗ್ಯ ಸಂಸ್ಥೆಗಳಲ್ಲಿ ಘಟಿಸಿದ ಜನನ, ಮರಣ ಹಾಗೂ ನಿರ್ಜೀವ ಜನನ ಘಟನೆಗಳನ್ನು 21 ದಿನಗಳಲ್ಲಿ ನೋಂದಾಯಿಸಿ ಉಚಿತ ಪ್ರಮಾಣ ಪತ್ರವನ್ನು ಸಂಬಂಧಿಸಿದ ಮಾಹಿತಿದಾರರಿಗೆ ವಿತರಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು. ಜನನ, ಮರಣ ತಿದ್ದುಪಡಿ, ರದ್ದತಿಗೆ ಸಂಬಂಧಿಸಿದಂತೆ ಜನನ, ಮರಣ ನೋಂದಣಾಧಿಕಾರಿಗಳು, ಉಪನೋಂದಣಾಧಿಕಾರಿಗಳು ತಾವೇ ಆದೇಶವನ್ನು ಮಾಡಿ ಮೂಲದಾಖಲೆಯಲ್ಲಿ ತಿದ್ದುಪಡಿ ಮಾಡಬಹುದಾಗಿದೆ. ಜನನ, ಮರಣಗಳ ದಾಖಲೆಗಳಲ್ಲಿ ತಿದ್ದುಪಡಿ ಮಾಡಲು ಸತ್ಯಾಸತ್ಯತೆಯನ್ನು ಪರಿಶೀಲಿಸಿ ಕ್ರಮವಹಿಸಬೇಕು. ನೋಂದಣಿ ಘಟಕಗಳ ಪರಿಶೀಲನಾ ಸಮಯದಲ್ಲಿ ಕೆಲವು ನ್ಯೂನ್ಯತೆಗಳು ಕಂಡುಬಂದಿವೆ. ಅವುಗಳನ್ನು ಗಣನೆಗೆ ತೆ–ಗೆದುಕೊಂಡು ನೋಂದಣಿ ಪ್ರಕ್ರಿಯೆ ನಡೆಸುವಂತೆ ಸೂಚನೆ ನೀಡಿದರು. ಇ–ಜನ್ಮ ತಂತ್ರಾಂಶ ಜಾರಿಗೊಳ್ಳುವ ಪೂರ್ವದಲ್ಲಿ ದಾಖಲಾತಿಗಳ ಸ್ಕ್ಯಾನಿಂಗ್ ಮತ್ತು ಡಿಜಿಟೈಜೇಷನ್ ಪ್ರಕ್ರಿಯೆ ಮೊದಲ ಹಂತದಲ್ಲಿ ಆಗಿದ್ದು, ಎರಡನೇ ಹಂತದಲ್ಲಿ ಈ ಕಾರ್ಯ ಆಗಿಲ್ಲ. ಜಿಲ್ಲೆಯಲ್ಲಿ ಒಟ್ಟು ಜನನಕ್ಕೆ ಸಂಬಂಧಿಸಿದ 26100 ಮತ್ತು ಮರಣಕ್ಕೆ ಸಂಬಂಧಿಸಿದ 13600 ಸೇರಿ ಒಟ್ಟು 39700 ದಾಖಲಾತಿಗಳ ಸ್ಕ್ಯಾನಿಂಗ್ ಮತ್ತು ಡಿಜಿಟೈಜೇಷನ್‌ಗೆ ಬಾಕಿ ಉಳಿದಿವೆ. ಸಂಬಂಧಿಸಿದ ಅಧಿಕಾರಿಗಳು ಈ ಬಗ್ಗೆ ಕ್ರಮಕೈಗೊಳ್ಳಬೇಕು ಎಂದ ಜಾನಕಿ, ಸಭೆಗೆ ಗೈರು ಹಾಜರಾದ ಮೂರು ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೋಟಿಸ್ ನೀಡುವಂತೆ ಸೂಚಿಸಿದರು. ಕಳೆದ 2024–25ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಹಿಂಗಾರು ಮತ್ತು ಬೇಸಿಗೆ ಹಂಗಾಮಿನ ಬೆಳೆ ಕಟಾವು ಪ್ರಯೋಗಗಳನ್ನು ನಿಯಮಾನುಸಾರ ಕೈಗೊಳ್ಳಲು ಮತ್ತು ಯಾವುದೇ ಪ್ರಯೋಗಗಳು ನಷ್ಟಗೊಳಿಸದಂತೆ ನೋಡಿಕೊಳ್ಳಲು ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕಿನ ಅನುಷ್ಠನಾಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಅಂಕಿ ಸಂಖ್ಯೆ ಅಧಿಕಾರಿ ಗೌರಮ್ಮ ಸುಂಕದ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ ಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ರವೀಂದ್ರ ಹಕಾಟಿ, ಆಯಾ ತಾಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಚಿತ್ತರಗಿಯಲ್ಲಿ ವೈಭವದ ಮಲ್ಲಮ್ಮ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ಜಿಲ್ಲೆಯ ಹುನಗುಂದ ತಾಲೂಕಿನ ಚಿತ್ತರಗಿ ಗ್ರಾಮದಲ್ಲಿ ಗುರುವಾರ ಮಹಾಸಾಧ್ವಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮಳ 603ನೇ ಜಯಂತೋತ್ಸವವನ್ನು ಸಂಭ್ರಮ, ಸಡಗರ ಹಾಗೂ ಶೃದ್ಧಾ–ಭಕ್ತಿಯಿಂದ ಆಚರಿಸಲಾಯಿತು.

ಗ್ರಾಮದ ವಿಜಯ ಮಹಾಂತೇಶ ಮಠದಲ್ಲಿ ಮಲ್ಲಮ್ಮಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಎತ್ತಿನ ಚಕ್ಕಡಿಯಲ್ಲಿ ಮಲ್ಲಮ್ಮಳ ಭಾವಚಿತ್ರವಿರಿಸಿ ಮೆರವಣಿಗೆ ನಡೆಸಲಾಯಿತು. ಪ್ರಮುಖ ಬೀದಿಗಳಲ್ಲಿ ನಡೆದ ವೈಭವದ ಮೆರವಣಿಗೆಗೆ ಕುಂಭ ಹೊತ್ತ ಹಾಗೂ ಕಳಸಾರತಿ ಹಿಡಿದ ಮಹಿಳೆಯರು ಕಳೆತಂದರಲ್ಲದೇ, ಸಾಂಬಾಳ, ಹಲಗೆ ವಾದನ ಸೇರಿ ವಿವಿಧ ವಾದ್ಯ ವೈಭವ ಗಮನ ಸೆಳೆಯಿತು. ಮಧ್ಯಾಹ್ನ ಶ್ರೀಮಠದಲ್ಲಿ ಭಕ್ತರಿಗೆ ಹೋಳಿಗೆ ಹಾಗೂ ಅಂಬಲಿ ಊಟದ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಗ್ರಾಮದ ಗುರು ಹಿರಿಯರು, ಯುವಕರು, ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದರು.

# ಉತ್ತಮ ಜೀವನ ಶೈಲಿಯಿಂದ

## ಆರೋಗ್ಯ ಕಾಪಾಡಿಕೊಳ್ಳಿ:ಹಾವೋಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು, ಉತ್ತಮ ಜೀವನಶೈಲಿ ರೂಢಿಸಿಕೊಂಡು ಆರೋಗ್ಯವಂತರಾಗಿ ಬಾಳಬೇಕು ಎಂದು ಕೊಪ್ಪಳದ ಕಾರಾಗ್ರಹ ಹಾಗೂ ಸುಧಾರಣೆ ಸೇವೆ ಇಲಾಖೆಯ ಮನೋವೈದ್ಯಕೀಯ ಆಪ್ತ ಸಮಾಲೋಚಕ ಎಂ.ಕೆ. ಹಾವೋಜಿ ಹೇಳಿದ್ದಾರೆ.

ತಾಲೂಕಿನ ಬೇವೂರ ಗ್ರಾಮದ ಪಿ.ಎಸ್.ಸಜ್ಜನ ಕಲಾ ಮಹಾವಿದ್ಯಾಲಯದಲ್ಲಿ ಗುರುವಾರ ಎನ್‌ಎಸ್‌ಎಸ್ ಹಾಗೂ ಸಾಂಸ್ಕೃತಿಕ ವೇದಿಕೆಯ ಸಹಯೋಗದಲ್ಲಿ ಜರುಗಿದ ವಿಶೇಷ ಉಪನ್ಯಾಸ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು. ಆಧುನಿಕ ಕಾಲಘಟ್ಟದಲ್ಲಿ ಒತ್ತಡದ ಬದುಕಿನಲ್ಲಿರುವ ಪ್ರತಿಯೊಬ್ಬರೂ ಮಾನಸಿಕ ಹಾಗೂ ದೈಹಿಕವಾಗಿ ಆರೋಗ್ಯವನ್ನು ಸುಸ್ಥಿತಿಯಲ್ಲಿ ಕಾಪಾಡಿಕೊಳ್ಳಬೇಕಿದೆ. ಆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಉತ್ತಮ ಜೀವನಶೈಲಿ ರೂಢಿಸಿಕೊಂಡು ನೈತಿಕ ಮೌಲ್ಯಗಳನ್ನು ಬೆಳೆಸಿಕೊಂಡು ಸಮಾಜದ ಆಸ್ತಿಯಾಗಬೇಕು ಎಂದು ಹಾವೋಜಿ ಹೇಳಿದರು.

ಪ್ರಾಚಾರ್ಯ ಜಗದೀಶ ಭೈರಮಟ್ಟಿ, ಬಿ.ಬಿ.ಬೇವೂರ, ಎಸ್.ಎಸ್.ಆದಾಪೂರ, ಎಸ್.ಬಿ.ಹಂಚಿನಾಳ, ಜಿ.ಎಸ್.ಗೌಡರ, ಡಿ.ವಾಯ್.ಬುಡ್ಡಿಯವರ, ಎ.ಎಂ.ಗೊರಚಿಕ್ಕನವರ, ನಾಗಲಿಂಗೇಶ ಬೆಣ್ಣೂರ ಇದ್ದರು. ನಂತರ ಎನ್.ಎಸ್.ಎಸ್. ಘಟಕದ ವತಿಯಿಂದ ನಡೆದ ಶ್ರಮದಾನದಲ್ಲಿ ವಿದ್ಯಾರ್ಥಿಗಳು ಕಾಲೇಜಿನ ಆವರಣ ಸ್ವಚ್ಚತಾ ಕಾರ್ಯ ಮಾಡಿದರು.

# ಎನ್‌ಎಸ್‌ಎಸ್‌ನಿಂದ ನಾಯಕತ್ವದ

## ಗುಣ:ನಂದಿಕೋಲಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ಎನ್‌ಎಸ್‌ಎಸ್ ವಾರ್ಷಿಕ ವಿಶೇಷ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಗುಣಗಳನ್ನು ಬೆಳೆಸುತ್ತವೆ ಎಂದು ಪ್ರೊ.ಜಿ.ಐ.ನಂದಿಕೋಲಮಠ ಹೇಳಿದರು.

ನಗರದ ಬಿವಿವಿ ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಮತ್ತು ಭೂ ಘಟಕಗಳ ವತಿಯಿಂದ ದತ್ತು ಗ್ರಾಮ ಮುಚಖಂಡಿಯಲ್ಲಿ ನಡೆದ ಎನ್.ಎಸ್.ಎಸ್ ಶಿಬಿರದ ಸಮಾರೋಪ ಸಮಾರಂಭದ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ಎನ್.ಎಸ್.ಎಸ್ ಶಿಬಿರಗಳು ಗ್ರಾಮೀಣ ಭಾಗಗಳಲ್ಲಿ ನಡೆಯುವುದರಿಂದ ಅಲ್ಲಿನ ಸಮಸ್ಯೆಗಳನ್ನು ತಿಳಿಯಲು ವಿದ್ಯಾರ್ಥಿಗಳಿಗೆ ಅನುಕೂಲವಾಗುತ್ತದೆಯಲ್ಲದೇ, ಜನರ ಕಷ್ಟಗಳಿಗೆ ಸ್ಪಂದಿಸಿ ಸಹಾಯ, ಸಹಕಾರ ಮಾಡಬೇಕೆನ್ನುವ ಮನೋಭಾವ ಬೆಳೆಯುತ್ತದೆ ಎಂದು ನಂದಿಕೋಲಮಠ ಹೇಳಿದರು. ಅತಿಥಿ ಆರ್.ಐ.ಗೌಡರ ಮಾತನಾಡಿ, ಎನ್‌ಎಸ್‌ಎಸ್ ನಿಂದ ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯಪ್ರಜ್ಞೆ ಬೆಳೆಯುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜೆ. ಒಡೆಯರ ವಹಿಸಿದ್ದರು. ಎಂ.ವ್ಹಿ.ಬಾಜಪ್ಪನವರ, ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳು ಪಾಲ್ಗೊಂಡಿದ್ದರು.

# ಉದ್ಯಮಶೀಲರನ್ನು ಬೆಳೆಸುವಲ್ಲಿ

## ನಿರ್ವಹಣಾ ಶಾಸ್ತ್ರದ ಪಾತ್ರ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.16–ಉದ್ಯೋಗಾವಕಾಶಗಳ ಜೊತೆಗೆ ಉದ್ಯಮಶೀಲರನ್ನು ಬೆಳೆಸುವಲ್ಲಿ ನಿರ್ವಹಣಾ ಶಾಸ್ತ್ರ ಅಧ್ಯಯನದ ಪಾತ್ರ ಬಹಳ ಮುಖ್ಯವಾಗಿದೆ ಎಂದು ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಕೌಸಾಳಿ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜಮೆಂಟ್ ಸ್ಟಡೀಸ್‌ನ ಪ್ರಾಧ್ಯಾಪಕ ಡಾ.ಉತ್ತಮ ಕಿಣಂಗೆ ಹೇಳಿದರು.

ನಗರದ ಬಿವಿವಿ ಸಂಘದ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ ಸ್ಟಡೀಸ್ ನಿಂದ ಆಯೋಜಿಸಿದ ಬಿಮ್ಸ್ ಕಲಾಪರ್ವ–2025 ಎಂಬ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಿರ್ವಹಣಾ ಶಾಸ್ತ್ರವನ್ನು ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ಅನೇಕ ಕೌಶಲ್ಯಗಳು ಅವಶ್ಯವಾಗಿರುತ್ತವೆ. ಅವುಗಳಲ್ಲಿ ಉದ್ಯಮಶೀಲ ಕೌಶಲ್ಯ, ತಾಂತ್ರಿಕ ಕೌಶಲ್ಯ, ನಾಯಕತ್ವ ಕೌಶಲ್ಯಗಳು, ಸಂವಹನ ಕೌಶಲ್ಯಗಳು ಬಹುಮುಖ್ಯವಾಗಿವೆ. ನಿರ್ವಹಣಾ ಶಾಸ್ತ್ರವು ಕೇವಲ ಉದ್ಯೋಗಾವಕಾಶಗಳನ್ನು ಒದಗಿಸದೇ, ಅದರ ಜೊತೆಗೆ ಉದ್ಯಮಶೀಲರನ್ನು ಬೆಳೆಸುವುದರಲ್ಲಿ ಬಹುಮುಖ್ಯ ಪಾತ್ರವಹಿಸುತ್ತದೆ ಎಂದರು.

ಮಹಾವಿದ್ಯಾಲಯದ ನಿರ್ದೇಶಕ ಡಾ.ಪ್ರಕಾಶ ವಡವಡಗಿ ಅಧ್ಯಕತ್ಷೆ ವಹಿಸಿದ್ದರು. ಡಾ.ಎಸ್.ಎಂ.ಗಾಂವಕರ, ಇದ್ದರು. ರಂಗೋಲಿ, ಫೇಸ್ ಪೇಂಟಿಂಗ್, ಗುಂಪು ಗಾಯನ, ಗುಂಪು ನೃತ್ಯ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, 25 ಪದವಿ ಮಹಾವಿದ್ಯಾಲಯಗಳ 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ಕೌಶಲ್ಯಗಳನ್ನು ಪ್ರದರ್ಶಿಸಿದರು.

ಸ್ಪರ್ಧೆಗಳ ಮೌಲ್ಯಮಾಪಕರಾಗಿ ಶ್ರದ್ಧಾ ಕಮತಗಿ, ಸತೀಶ್ ಹಿರೇಮಠ, ಪರಮೇಶ್ವರಿ ಮೇಲ್ನಾಡ, ನಮ್ರತಾ ಹಿರೇಮಠ್, ಮೇಘಾ ಗುಮಾಸ್ಥೆ, ಪದ್ಮಾ ಅಣ್ಣಿಗೇರಿ ಕಾರ್ಯನಿರ್ವಹಿಸಿದರು. ಡಾ.ಅಮರೇಶ ಚರಂತಿಮಠ ಸ್ವಾಗತಿಸಿದರು. ಶೃತಿ ಮ್ಯಾಗೇರಿ ಪರಿಚಯಿಸಿದರು. ಅಭಿನವ ಮತ್ತು ನಿಖಿತಾ ಏಡಕೆ ನಿರೂಪಿಸಿದರು. ಪ್ರಿಯಾಂಕ ಮಾಗಿರವರು ಡಾ.ಅಮರೇಶ ಚರಂತಿಮಠ ಸ್ವಾಗತಿಸಿದರು, ಶ್ರೀಮತಿ ಶೃತಿ ಮ್ಯಾಗೇರಿರವರು ಪರಿಚಯಿಸಿದರು. ಪ್ರಿಯಾಂಕ ಮಾಗಿ ವಂದಿಸಿದರು.

# ಸಮಗ್ರ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯ : ಶಾಸಕ ಪಾಟೀಲ್



ಚುನಾವಣೆಗಳು ಬಂದಾಗ ಮಾತ್ರ ರಾಜಕೀಯ ಮಾಡಬೇಕು. ಚುನಾವಣೆಗಳು ಮುಗಿದ ನಂತರದ ದಿನಗಳಲ್ಲಿ ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಕಲ್ಯಾಣಕ್ಕಾಗಿ ಉತ್ತಮ ಯೋಜನೆಗಳನ್ನು ಅನುಷ್ಠಾನ ಮಾಡಬೇಕು.

ಡಾ. ಸಿದ್ದು ಪಾಟೀಲ್ ಶಾಸಕ, ಹುಮನಾಬಾದ್

ಮಲ್ಲಮ್ಮನುಡಿವಾರ್ತೆಹುಮನಾಬಾದ್ : ಕ್ಷೇತ್ರ ವ್ಯಾಪ್ತಿಯ ಪಟ್ಟಣ ಸೇರಿ ಗ್ರಾಮೀಣ ಭಾಗದ ಹಳ್ಳಿಗಳ ಸಮಗ್ರ ಅಭಿವೃದ್ಧಿ ಆಗಬೇಕಾದರೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.ಪಟ್ಟಣದ ಪ್ರವಾಸಿ ಮಂದಿರದ ಮುಂಭಾಗದ ಮುಖ್ಯ ರಸ್ತೆಬದಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಶುಕ್ರವಾರ ನಡೆದ 2022-23ನೇ ಸಾಲಿನ ಅಪೆಂಡಿಕ್ಸ್-ಇಯೋಜನೆಅಡಿಯಲ್ಲಿ ನಿರ್ಮಾಣಗೊಂಡ ರಸ್ತೆ ಸುಧಾರಣೆ ಕಾಮಗಾರಿ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹುಮನಾಬಾದ್‌ಕ್ಷೇತ್ರದಲ್ಲಿಕೈಗೊಳ್ಳುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಸ್ಥಳೀಯ ಕಾಂಗ್ರೆಸ್ ನಾಯಕರಿಗೆ ಸಹಿಸಿಕೊಳ್ಳಲು ಆಗುತ್ತಿಲ್ಲ. ಸರಕಾರಿ ಕಾರ್ಯಕ್ರಮಗಳಲ್ಲಿ ಭಾಗಿಯಾಗದಂತೆ ಪುರಸಭೆ ಸದಸ್ಯರ ಮೇಲೆ ಸ್ಥಳೀಯ ಕಾಂಗ್ರೆಸ್ ನಾಯಕರು ಒತ್ತಡ ಹಾಕುವ ಮೂಲಕ ಇಬ್ಬರು ಎಂಎಲ್ಸಿಗಳು ಕೂಡಾ ಕಾರ್ಯಕ್ರಮ ಹಾಜರಾಗಿಲ್ಲ ಎಂದು ಗುಡುಗಿದರು.ಶಿಷ್ಟಾಚಾರ ಪಾಲನೆ ಕುರಿತು ಮಾತನಾಡುವ ಕಾಂಗ್ರೆಸ್ ಸ್ಥಳೀಯ ನಾಯಕರು ಮೊದಲು ಅವರು ಶಿಷ್ಟಾಚಾರ ಪಾಲನೆ ಮಾಡುವುದನ್ನು ಕಲಿಯಬೇಕು. ಜತೆಗೆ ರಾಜ್ಯದಲ್ಲಿ ತಮ್ಮದೇ ಸರಕಾರವಿದೆ. ಹೀಗಾಗಿ ಸರಕಾರದ ಮೇಲೆ ಒತ್ತಡ ಹಾಕುವ ಮೂಲಕ ವಿಶೇಷ ಅನುದಾನ ತರುವ ಕೆಲಸ ಮಾಡಬೇಕು. ಇದನ್ನೆಲ್ಲ ಬಿಟ್ಟು ಕೇವಲ ರಾಜಕಾರಣ ಮಾಡುವ ಮೂಲಕ ಜನರಿಗೆ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.ಹುಮನಾಬಾದ್‌ನ ಇಬ್ಬರು ವಿಧಾನ ಪರಿಷತ್ ಸದಸ್ಯರಿಬ್ಬರು ಸರ್ವಾಧಿಕಾರಿಯಂತೆ ನಡೆದುಕೊಂಡು ರಸ್ತೆ ಸುಧಾರಣೆ ಲೋಕಾರ್ಪಣೆ ಕಾರ್ಯಕ್ರಮ ಎರಡು ಬಾರಿ ಮುಂದುಡುವಂತೆ ಅಧಿಕಾರಿಗಳ ಮೇಲೆ ಒತ್ತಡ ಹಾಕಿದ್ದರು, ಹುಮನಾಬಾದ್ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯುವ ಸರಕಾರಿ ಕಾರ್ಯಕ್ರಮಗಳು ನನ್ನ ಅಧ್ಯಕ್ಷತೆಯಲ್ಲಿ ನಡೆಯುತ್ತವೆ ಎನ್ನುವ ವಿಚಾರ ಅರಿತುಕೊಂಡು ಅಧಿಕಾರಿಗಳ ಮೇಲೆ ಒತ್ತಡ ಹಾಕುವುದನ್ನು ಬಿಟ್ಟು ಇಬ್ಬರು ಎಂಎಲ್ಸಿಗಳು ಸರಕಾರದ ನಿರ್ದೇಶನಗಳನ್ನು ಪಾಲಿಸುವ ಮೂಲಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದು ಸಹಲೆ ನೀಡಿದರು.ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ವಿಜಯಕುಮಾರ ದುರ್ಗದ್, ರಮೇಶ ಕಲ್ಲೂರ್, ಧನಲಕ್ಷ್ಮಿ, ಎಇಇ ಧನರಾಜ ಚವ್ಹಾಣ, ಡಾ. ಬಿ.ಆರ್. ಅಂಬೇಡ್ಕರ್ ನಿಗಮದ ಮಾಜಿ ನಿರ್ದೇಶಕ ಬಸವರಾಜ ಆರ್ಯ, ಮಲ್ಲಿಕಾರ್ಜುನ್ ಸೀಗಿ, ವಿನಾಯಕ ಮಣಕೋಜಿ, ಚಂದ್ರಪ್ರಕಾಶ ಆರ್ಯ, ನಾಗಭೂಷಣ ಸಂಗಮ್, ಗಿರೀಶ ತುಂಬಾ, ಸೇರಿ ಅನೇಕರಿದ್ದರು.

# ಪಾಕ್‌ಗೆ ಬೆಂಬಲ ಕೊಟ್ಟ ಚೀನಾಗೆ ಬಾಯ್ಕಾಟ್ ಹೇಳೋ ಧೈರ್ಯ ಇದೆಯಾ? : ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.16:ಬಾಯ್ಕಾಟ್ ಟರ್ಕಿ, ಅಜರ್‌ಬೈಜಾನ್ ಎಂದು ಹೇಳುತ್ತಾರೆ. ಪಾಕಿಸ್ತಾನಕ್ಕೆ ಬೆಂಬಲ ಕೊಟ್ಟ ಚೀನಾಗೆ ಬಾಯ್ಕಾಟ್ ಹೇಳುವ ಧೈರ್ಯ ಇದೆಯಾ? ಎಂದು ಪ್ರಿಯಾಂಕ್ ಖರ್ಗೆ ಟಾಂಗ್ ಕೊಟ್ಟಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನದ ಜೊತೆ ಓಪನ್ ಆಗಿ ಟರ್ಕಿ, ಚೀನಾ ಬಂತು. ನಮ್ಮ ಜೊತೆ ಯಾವುದಾದರೂ ದೇಶ ಬಂದಿದ್ಯಾ? ಮೋದಿ ನೂರು ದೇಶಗಳನ್ನು ಪ್ರವಾಸ ಮಾಡಿದ್ದರು. ಎಲ್ಲಾ ಪ್ರಧಾನಿಗಳನ್ನ ಅಪ್ಪಿಕೊಂಡರು. ಒಬ್ಬರಾದರೂ ಸಹಾಯಕ್ಕೆ ಬಂದರಾ? ಹುಚ್ಚರ ಜಾತ್ರೆ ನಡೆದಿದೆ. ಬಾಯ್ಕಾಟ್ ಟರ್ಕಿ, ಅಜರ್‌ಬೈಜಾನ್ ಎಂದು ಹೇಳುತ್ತಿದ್ದಾರೆ. ಬಾಯ್ಕಾಟ್ ಅಮೆರಿಕಾ, ಬಾಯ್ಕಾಟ್ ಟ್ರಂಪ್ ಮಾಡುತ್ತಾರಾ? ಬಾಯ್ಕಾಟ್ ಚೀನಾ ಎಂದು ಹೇಳುವ ಧೈರ್ಯ ಇದೆ-ಯಾ? ಜೈಶಂಕರ್ ಚೀನಾ ಜೊತೆ ಯುದ್ಧ ಮಾಡೋಕೆ ಆಗುವುದಿಲ್ಲ ಎಂದರು. ಇದು ಅವರ ಸಾಮರ್ಥ್ಯ ಎಂದು ಲೇವಡಿ ಮಾಡಿದರು.

ಭಾರತ-ಪಾಕಿಸ್ತಾನ ಕದನ ವಿರಾಮ ವಿಚಾರವಾಗಿ ಮಾತನಾಡಿದ ಅವರು, ಮುಂಚೆಯಿಂದಲೂ ನಮ್ಮ ನಿಲುವು ಸ್ಪಷ್ಟವಾಗಿದೆ. ಎಲ್ಲಾ ವಿಪಕ್ಷಗಳು ಸರ್ಕಾರದ ಬೆಂಬಲಕ್ಕೆ ನಿಂತಿವೆ. ಏನೇ ನಿರ್ಧಾರ ಮಾಡಿದರೂ ನಿಮ್ಮ ಜೊತೆ ಇದ್ದೀವಿ. ದೇಶದ ಹಿತಕ್ಕೋಸ್ಕರ ಏನೇ ನಿರ್ಧಾರ ಮಾಡಿದರೂ ಬೆಂಬಲ ಕೊಡುವುದಾಗಿ ಹೇಳಿದ್ದೇವೆ. ಆದರೆ ನಮ್ಮ ವಿದೇಶಾಂಗ ನೀತಿ ಬಗ್ಗೆ ನಮ್ಮ ಆಕ್ಷೇಪವಿದೆ. ಕದನ ವಿರಾಮ ಇರಬಹುದು, ಬೇರೆ ನೀತಿಗಳು, ನಿರ್ಣಯಗಳನ್ನ ಟ್ರಂಪ್ ಯಾಕೆ ಘೋಷಣೆ ಮಾಡುತ್ತಿದ್ದಾರೆ. ಒಂದು ಸಾರಿ ಅಲ್ಲ. 6 ಸಾರಿ ಮಾತನಾಡಿದ್ದಾರೆ. ನನ್ನಿಂದ ಕದನ ವಿರಾಮ ಆಗಿದೆ ಎಂದು ಹೇಳುತ್ತಿದ್ದಾರೆ. ಭಾರತ-ಪಾಕಿಸ್ತಾನಕ್ಕೆ ವ್ಯಾಪಾರ ಮಾಡಿ, ನಾನು ವ್ಯಾಪಾರ ಕೊಡುತ್ತೇನೆ ಎಂದು ಟ್ರಂಪ್ ಹೇಳುತ್ತಿದ್ದಾರೆ. ಇದು ಬೆದರಿಕೆನಾ? ಆಮಿಷನಾ? ಗೊತ್ತಾಗಬೇಕು ಎಂದು ಆಗ್ರಹಿಸಿದರು.

ಕಾಶ್ಮೀರ ನಮ್ಮ ಆಂತರಿಕ ವಿಚಾರ. ಶಿಮ್ಲಾ ಒಪ್ಪಂದದ ಪ್ರಕಾರವೂ ಇದು ಆಂತರಿಕ ವಿಚಾರ. ಇದು ಅಂತರರಾಷ್ಟ್ರೀಯ ವಿಷಯ ಯಾಕೆ ಆಗುತ್ತಿದೆ. ಟ್ರಂಪ್ ಹೇಳುವಾಗ ನಮ್ಮ ಪ್ರಧಾನಿ ಯಾಕೆ ಸುಮ್ಮನಿದ್ದಾರೆ. ಬೇರೆ ಸಮಯದಲ್ಲಿ ಮಾತಾಡುತ್ತಾರೆ. ಈಗ ಯಾಕೆ ಮಾತಾಡುತ್ತಿಲ್ಲ. ಈ ಬಗ್ಗೆ ಮೋದಿ ಮಾತಾಡಬೇಕು. ಮಾತಾಡಲು ಆಗಿಲ್ಲ ಅಂದರೆ ನಮ್ಮ ವಿದೇಶಾಂಗ ನೀತಿಯನ್ನು ಬೇರೆಯವರಿಗೆ ಔಟ್ ಸೋರ್ಸ್ ಕೊಟ್ಟಿದ್ದೇವೆ ಎಂದು ಹೇಳಲಿ. ಕಾಶ್ಮೀರ ಅಂತಾರಾಷ್ಟ್ರೀಯ ವಿಷಯ ಅಂತ ಹೇಳಿ ಬಿಡಿ. ನಾವೇನಿದ್ದರೂ ಅಮೆರಿಕ ಮುಂದೆ ಮಂಡಿ ಊರುತ್ತೇವೆ ಅಂತ ಹೇಳಿಬಿಡಿ, ಚರ್ಚೆಯೇ ನಿಂತು ಹೋಗುತ್ತದೆ ಎಂದು ಆಗ್ರಹಿಸಿದರು.

ಅಮೆರಿಕ ಹೇಳಿದ ಹಾಗೆ ಕೇಳುವುದು, ತಿರಂಗಾ ಯಾತ್ರೆ ಮಾಡೋದಷ್ಟೇನಾ? ನಮ್ಮ ವಿದೇಶಾಂಗ ನೀತಿಗೆ ಯಾರು ಇನ್‌ಚಾರ್ಜ್? ನಮ್ಮ ನೀತಿ ಬಗ್ಗೆ ನಮ್ಮ ಪ್ರಧಾನಿಗಳು ಹೇಳಬೇಕು. ಇದನ್ನ ತೀರ್ಮಾನ ಮಾಡೋಕೆ ಟ್ರಂಪ್ ಯಾರು? ಆದರೂ ಪದೇ ಪದೇ ಮಾತಾಡ್ತಿದ್ದಾರೆ. ಮೋದಿ ಯಾಕೆ ಮಾತಾಡ್ತಿಲ್ಲ. ಸರ್ವಪಕ್ಷ ಸಭೆಗೆ ಬರುವುದಿಲ್ಲ. ಸಂಸತ್ ಅಧಿವೇಶನ ಕರೆಯಿರಿ ಅಂದರೆ ಕರೆಯುವುದಿಲ್ಲ. ಯುದ್ಧ ಆಗುವ ಸಮಯದಲ್ಲಿ ಆರ್‌ಎಸ್‌ಎಸ್ ಅವರಿಗೆ ಬ್ರಿಫಿಂಗ್ ಕೊಡ್ತಾರೆ. ಆರ್‌ಎಸ್‌ಎಸ್‌ಗೂ ಇದಕ್ಕೂ ಏನು ಸಂಬಂಧ? ಅವರು ಯಾರು? ಕಿಡಿಕಾರಿದರು.

ವಿಶ್ವಗುರು, ಹಿಂದೂ ಹೃದಯ ಸಾಮ್ರಾಟ್ ಅಂತ ಮೋದಿಗೆ ಹೇಳುವುದೆಲ್ಲ ಇವರೇ ಟೈಟಲ್ ಕೊಟ್ಟುಕೊಂಡಿದ್ದಾರೆ. ಮೋದಿಗೆ ಕೊಡುವ ಟೈಟಲ್‌ಗಳು ಅವರ ಪದ್ಧತಿ. ವೀರ ಸಾವರ್ಕರ್‌ಗೆ ಹೇಗೆ ವೀರ ಎಂದು ಸಿಕ್ಕಿತು ಅದೇ ರೀತಿ ಇವರಿಗೂ ಕೂಡ. ಸ್ವಯಂ ಘೋಷಿತ ವಿಶ್ವಗುರು, ಸ್ವಯಂ ಘೋಷಿತ ಹಿಂದೂವಿ ಸಾಮ್ರಾಟ್ ಇವರು ಎಂದರು. ನೂರು ಟೈಟಲ್ ಇದೆ. ಇವರೇ ಕೊಟ್ಟುಕೊಂಡಿದ್ದಾರೆ. ಇದನ್ನು ಪ್ರಶ್ನೆ ಮಾಡಿದರೆ ಕಾಂಗ್ರೆಸ್ ಅವರನ್ನು ಆಸ್ಪತ್ರೆಗೆ ಸೇರಿಸಬೇಕು ಎನ್ನುತ್ತಾರೆ. ಅದು ಬಿಟ್ಟು ಬಿಜೆಪಿಯವರಿಗೆ ಇನ್ನೇನು ಗೊತ್ತಿಲ್ಲ ಎಂದರು.

ಇದೇ ವೇಳೆ ಕೊತ್ತನೂರು ಮಂಜುನಾಥ್ ಹೇಳಿಕೆ ವಿಚಾರವಾಗಿ ಮಾತನಾಡಿ, ಪಾಕಿಸ್ತಾನಕ್ಕೆ ಪಾಠ ಕಲಿಸಬೇಕಾದರೆ ಬೇರು ಸಮೇತ ಭಯೋತ್ಪಾದನೆ ಕಿತ್ತು ಹಾಕಬೇಕಿತ್ತು. ಭಯೋತ್ಪಾದನೆ ಕಿತ್ತು ಬಿಸಾಕುವಾಗ ವಿರಾಮ ಯಾಕೆ ಆಯ್ತು ಹೇಳಬೇಕು. ಸೇನೆ ವಿಷಯ ಬಂದಾಯ ಯಾರು ರಾಜಕೀಯ ಮಾಡಬಾರದು. ಏನೇ ಇದ್ದರೂ ಕೂಡ ಕೇಂದ್ರ, ಮೋದಿ ಹೇಳಲಿ. ಮಾಹಿತಿ ಕೇಳುವುದರಲ್ಲಿ ತಪ್ಪೇನಿದೆ? ಆಪರೇಷನ್ ಸಿಂಧೂರ ಆದಮೇಲೆಯೂ ಪಾಕ್‌ಗೆ ಐಎಮ್‌ಎಫ್‌ನಿಂದ ಸಾಲ ಸಿಕ್ಕಿದೆ. ಆ ಹಣ ಭಯೋತ್ಪಾದಕರಿಗೆ ಕೊಡುತ್ತಾರೆ. ಐಎಮ್‌ಎಫ್ ಕೊಡುವ ಸಾಲವನ್ನು ಭಾರತಕ್ಕೆ ತಡೆಹಿಡಿಯಲು ಆಗಲಿಲ್ಲ. ಏನು ಆಗ್ತಿದೆ ಎನ್ನುವ ಬಗ್ಗೆ ಜನರಿಗೆ ತಿಳಿಸಲಿ ಎಂದು ಹೇಳಿದರು.

# ಜನಾರ್ಧನ ರೆಡ್ಡಿಗೆ ಬೆಂಬಲಿಸಿದ್ದೆ ಎಂಬುದು ಸುಳ್ಳು:ಸಿಎಂ



ಕೊಪ್ಪಳ,ಮೇ16:ಕಳೆದ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಜನಾರ್ಧನರೆಡ್ಡಿ ಅವರಿಗೆ ತಾವು ಬೆಂಬಲಿಸಿದ್ದೆ ಎಂಬ ಸುದ್ದಿ ಸುಳ್ಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಕೊಪ್ಪಳದ ಗಿಣಗೇರ ವಿಮಾನನಿಲ್ದಾಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತನ್ನ 50 ವರ್ಷದ ರಾಜಕೀಯ ಜೀವನದಲ್ಲಿ ಬಿಜೆಪಿ ಮತ್ತು ಆರ್‌ಎಸ್‌ಎಸ್‌ನ್ನು ವಿರೋಧಿಸಿದಷ್ಟು ಬೇರೆ ಯಾರನ್ನೂ ವಿರೋಧಿಸಿಲ್ಲ. ಹೀಗಾಗಿ ಬಿಜೆಪಿಯಲ್ಲಿರುವ ರೆಡ್ಡಿಯನ್ನು ಬೆಂಬಲಿಸುವ ಅಗತ್ಯವಿಲ್ಲ ಎಂದು ಹೇಳಿದರು. ಬಲ್ಡೋಟಾ ಕಂಪನಿ ಉಕ್ಕಿನ ಕಾರ್ಖಾನೆ ಸ್ಥಾಪನೆ ಬಗ್ಗೆ ಪ್ರತಿಕ್ರಿಯಿಸಿ, ಸದ್ಯ ಕಾಮಗಾರಿ ನಿಲ್ಲಿಸಲು ಜಿಲ್ಲಾಧಿಕಾರಿಗೆ ಸೂಚಿಸಿದೆ. ಕಂಪನಿ ಭೂಮಿ ಖರೀದಿ ಮಾಡಿದ್ದು ನಾನು ಆ ಕಂಪನಿಗೆ ಕಾರ್ಖಾನೆ ಸ್ಥಾಪಿಸಲು ಅನುಮತಿ ನೀಡಿದ್ದೂ ನಿಜ. ಪರಿಸ್ಥಿತಿ ಅವಲೋಕಿಸಿ ವರದಿ ನೀಡಲು ಹೇಳಿರುವೆ. ವರದಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದರು.

ರಾಜ್ಯ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗಿದ್ದು ಹೊಸಪೇಟೆಯಲ್ಲಿ ಹಮ್ಮಿಕೊಂಡಿರುವ ಸಾಧನಾ ಸಮಾವೇಶದಲ್ಲಿ ಒಂದು ಲಕ್ಷ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಣೆ ಮಾಡಲಾಗುವುದು ಅಂ-ದು 'ನಮ್ಮ ಸರ್ಕಾರ ಅಧಿಕಾರಕ್ಕೆ ಬಂದು ಮೇ 20ಕ್ಕೆ ಎರಡು ವರ್ಷ ಪೂರ್ಣಗೊಳ್ಳುತ್ತವೆ. ಸರ್ಕಾರದ ಸಾಧನೆ ಬಗ್ಗೆ ರಾಜ್ಯದ ಜನತೆಗೆ ತಿಳಿಸಲಿದೆಂದರು. ಆಪರೇಷನ್ ಸಿಂಧೂರ ಬಗ್ಗೆ ಶಾಸಕ ಕೊತ್ತನೂರು ಮಂಜುನಾಥ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಕಾಂಗ್ರೆಸ್ ಶಾಸಕರ ಹೇಳಿಕೆ ಅವರ ವೈಯಕ್ತಿಕ ಅಭಿಪ್ರಾಯ. ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ತಮ್ಮದೇ ಹೇಳಿಕೆ ನೀಡಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೊದಲು ಕದನ ವಿರಾಮ ಬಗ್ಗೆ ಹೇಳಿಕೆ ನೀಡಿದರು. ಗುರುವಾರ ಮತ್ತೊಂದು ಹೇಳಿಕೆ ನೀಡಿದ್ದಾರೆ. ನನ್ನ ಪ್ರಕಾರ ಮೊದಲು ನೀಡಿದ ಹೇಳಿಕೆ ಸರಿ ಇರಬಹುದೆಂದರು. ಕದನ ವಿರಾಮದಿಂದ ಉಗ್ರರಿಗೆ ನೆಲೆ ನೀಡಿರುವ ಪಾಕಿಸ್ತಾನದವರಿಗೆ ಮತ್ತೊಂದು ಅವಕಾಶ ಸಿಕ್ಕಂತಾಯಿತು. ಇದಕ್ಕೆಲ್ಲ ಅವಕಾಶ ನೀಡದೇ ಭಯೋತ್ಪಾದನೆ ನಾಶ ಮಾಡಬೇಕು. ನಾನು ಯುದ್ಧ ಬೇಡವೇ ಬೇಡ ಎಂದಿಲ್ಲ. ದೇಶದ ಜನರನ್ನು ರಕ್ಷಿಸಲು ಯುದ್ಧ ಮಾಡಬೇಕಾಗುತ್ತದೆ. ಸಾರ್ವಭೌಮತ್ವ, ಒಗ್ಗಟ್ಟು ಉಳಿಸಿಕೊಳ್ಳಲು ಈ ಕೆಲಸ ಮಾಡಬೇಕು. ಪಾಕಿಸ್ತಾನದ ವಿರುದ್ಧ ತೋರಿದ ಪ್ರತಿರೋಧಕ್ಕೆ ಇಡೀ ಭಾರತ ಬೆಂಬಲ ನೀಡಿದೆಂದರು ಆರ್. ಅಶೋಕ್ ಅವರ ಕ್ವಾರ್ಟರ್ ಬೆಂಗಳೂರು ಎಂಬ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ, ಅವರಿಗೆ ಕ್ವಾರ್ಟರ್ ಅಷ್ಟೇ ಅಭ್ಯಾಸ ಇರೋದು. ಅದಕ್ಕೆ ಅದನ್ನೇ ಹೇಳುತ್ತಾರೆ. ಬೆಂಗಳೂರು ವಿಭಜನೆ ಮಾಡುವ ಯೋಜನೆ ರೂಪಿಸಿದ್ದೇ ಬಿಜೆಪಿ. ಒಂದೂವರೆ ಕೋಟಿ ಜನಸಂಖ್ಯೆ ಇರುವ ಬೆಂಗಳೂರಿಗೆ ಒಂದೇ ಮಹಾನಗರ ಪಾಲಿಕೆಯಡಿ ನಿರ್ವಹಣೆ ಮಾಡುವುದು ಕಷ್ಟ. ಹೀಗಾಗಿ ವಿಭಜನೆ ಮಾಡಲಾಗುವುದು. ಆಡಳಿತಾತ್ಮಕ ದೃಷ್ಟಿಯಿಂದ ಮೂರು ಅಥವಾ ಅದಕ್ಕಿಂತ ಹೆಚ್ಚು ಭಾಗವಾಗಿ ವಿಭಜಿಸಲಾಗುವುದೆಂದರು.

# ಬಸ್ ಹತ್ತುವಾಗ 1.20 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

ಮಲ್ಲಮ್ಮನುಡಿ ವಾರ್ತೆ ಕಲಬುರಗಿ, ಮೇ.16:ಮಹಿಳೆಯೊಬ್ಬರು ಬಸ್ ಹತ್ತುತ್ತಿದ್ದ ವೇಳೆ ಅವರ ವ್ಯಾನಿಟಿಬ್ಯಾಗ್‌ನಲ್ಲಿ ಇದ್ದ 1,20,600ರೂ.ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರ ನಡೆದಿದೆ. ನಗರದ ಇಸ್ಲಾಮಾಬಾದ ಕಾಲೋನಿಯ ಹಲಿಮಾ ಬೀ ಖದೀರ್ ಅಹ್ಮೇದ್ ಸಗರಿ (55) ಎಂಬುವವರು ಆಳಂದ ಪಟ್ಟಣದಲ್ಲಿ ಸಂಬಂಧಿಕರೊಬ್ಬರು ಮೃತಪಟ್ಟಿದ್ದರಿಂದ ಅವರ ಅಂತಿಮಸಂಸ್ಕಾರಕ್ಕೆಂದು ಆಳಂದ ಚೆಕ್‌ಪೋಸ್ಟ್ ಬಳಿ ಬಂದು ಆಳಂದಗೆ ಹೋಗುವ ಬಸ್ ಹತ್ತಿದ್ದರು. ಈ ವೇಳೆ ಅವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 60 ಸಾವಿರ ರೂಪಾಯಿ ಮೌಲ್ಯದ 5 ಗ್ರಾಂ.ಬಂಗಾರದ 2 ಉಂಗುರ, 60 ಸಾವಿರ ರೂಮೌಲ್ಯದ 10 ಗ್ರಾಂ.ಬಂಗಾರದ ಪದಕ ಉಳ್ಳ ಲಾಕೇಟ್, 600 ನಗದು ಸೇರಿ 1.20 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಮತ್ತು ನಗದನ್ನು ಕಳವು ಮಾಡಲಾಗಿದೆ. ಈ ಸಂಬಂಧ ಅವರು ಸಬ್-ಅರ್ಬನ್ ಪೊಲೀಸ್ ಠಾಣೆಯಲ್ಲಿ

ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ಜಾತಿ ಗಣತಿ ಸಮೀಕ್ಷೆ ಸ್ಥಳಕ್ಕೆ ಡಿಸಿ ಡಾ.ಸುಶೀಲಾ.ಬಿ. ಭೇಟಿ, ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ:16:ಕಳೆದ ಮೇ 5 ರಂದು ಆರಂಭವಾಗಿರುವ ಪರಿಶಿಷ್ಟಜಾತಿ ಒಳಮೀಸಲಾತಿ ಸಮೀಕ್ಷೆ ಪರಿಶೀಲನೆಗಾಗಿ ಜಿಲ್ಲಾಧಿಕಾರಿ ಡಾ. ಸುಶೀಲಾ.ಬಿ ಅವರು ಶುಕ್ರವಾರ ನಗರದ ಗಾಂಧಿ ನಗರ ತಾಂಡಾ, ಅಂಬೇಡ್ಕರ್ ನಗರ, ಕೋಟಗೇರಾವಾಡಾಕ್ಕೆ ಭೇಟಿ ನೀಡಿದರು. ಕಳೆದ 15 ದಿನಗಳಿಂದ ಜಿಲ್ಲೆಯಲ್ಲಿ ನಡೆದಿರುವ ಈ ಸಮೀಕ್ಷೆ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಮೂಲಕ ನಿರಂತರ ಮಾಹಿತಿ ಪಡೆಯುತ್ತಿರುವ ಡಿಸಿ ಅವರು ಸಮೀಕ್ಷಾ ಸ್ಥಳಕ್ಕೆ ತಾವೇ ಖುದ್ದು ಭೇಟಿ ನೀಡುವ ಮೂಲಕ ಸಮೀಕ್ಷೆಯಲ್ಲಿರುವ ಸಿಬ್ಬಂದಿ ಮತ್ತು ಜನರಿಗೆ ಅಗತ್ಯ ಹೆಚ್ಚಿನ ಮಾಹಿತಿ ನೀಡಿದರು.ಈ ವೇಳೆ ಗಾಂಧಿ ನಗರದಲ್ಲಿ ಸಮೀಕ್ಷೆ ನಡೆಸುತ್ತಿರುವ ಬಗ್ಗೆ ದಾಖಲೆಗಳನ್ನು ಪರಿಶೀಲಿಸಿದರು.ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ, ತಾಲೂಕು ದಂಡಾಧಿಕಾರಿ ಸುರೇಶ ಅಂಕಲಗಿ, ಬಿಇಓ ಸೇರಿದಂತೆಯೇ ಇತರರಿದ್ದರು.

# ಸೈನಿಕರ ಯಶಸ್ಸು; ತಿರಂಗಾ ಯಾತ್ರೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಸಿಂಧೂರ ಕಾರ್ಯಾಚರಣೆ ಯಶಸ್ವಿ ಹಿನ್ನಲೆಯಲ್ಲಿ ಪಟ್ಟಣದಲ್ಲಿ ಶಾಸಕ ಡಾ. ಸಿದ್ದು ಪಾಟೀಲ್ ನೇತೃತ್ವದಲ್ಲಿ ಶುಕ್ರವಾರ ತಿರಂಗಾ ಯಾತ್ರೆ ಜರುಗಿತು.

ಬಸವೇಶ್ವರ ವೃತ್ತದಿಂದ, ಬಾಲಾಜಿ ಮಂದಿರ, ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಪ್ರವಾಸಿ ಮಂದಿರದ ವರೆಗೆ ನಡೆದ ಯಾತ್ರೆಯಲ್ಲಿ ಭಾರತ ಮಾತೆಯ ಜೈಘೋಷಣೆಗಳನ್ನು ಕೂಗಿ ಭಾರತೀಯ ಸೇನೆಗೆ ಅಭಿನಂದನೆ ಸಲ್ಲಿಸಲಾಯಿತು.

ಈ ಸಂದರ್ಬದಲ್ಲಿ ಶಿವಾನಂದ ಮಂತಾಳ್ಕರ್, ಬಸವರಾಜ ಆರ್ಯ, ಪ್ರಭಾಕರ ನಾಗರಾಳೆ, ಸಂತೋಷ ಪಾಟೀಲ್, ನಾರಾಯಣ ರಾಂಪೂರ, ರವಿ ಹೊಸಳ್ಳಿ, ಡಿ.ಎನ್. ಪತ್ರಿ, ವಿನಾಯಕ ಮಣಕೋಜಿ, ನಾಗಭೂಷಣ ಸಂಗಮ್, ಗಿರೀಶ ತುಂಬಾ ಸೇರಿ ಅನೇಕರಿದ್ದರು.

# ದೇಶದ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಿ : ಡಾ. ಪಪ್ಪು ಮೇತ್ರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಆರೋಗ್ಯಪೂರ್ಣ ಸಮಾಜ ಹಾಗೂ ಬಲಿಷ್ಠ ಭಾರತ ದೇಶದ ನೀರ್ಮಾಣಕ್ಕೆ ಯುವ ಸಮುದಾಯದವರು ಕೈಜೋಡಿಸಿಸಬೇಕು ಎಂದು ಹುಮನಾಬಾದ್ ಸರಕಾರಿ ಪದವಿ ಪೂರ್ವ (ಬಾಲಕರು) ಕಾಲೇಜಿನ ಉಪನ್ಯಾಸಕ ಡಾ. ಪಪ್ಪು ಮೇತ್ರೆ ಹೇಳಿದರು.

ಪಟ್ಟಣದ ಎಸ್ ಬಿ ಸಿ ಎಸ್ ಮತ್ತು ಎಸ್ ವ್ಹಿ ಕಾಲೇಜಿನ ಸಭಾಂಗಣದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಸಮಾರೋಪ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವನೆಯನ್ನು ಬೆಳೆಸುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಅದರ ಸದುಪಯೋಗ ಪಡೆದುಕೊಂಡು ಉತ್ತಮ ಸಾಧನೆ ಮಾಡಬೇಕು ಎಂದು ತಿಳಿಸಿದರು.

ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ, ಪ್ರಾಧ್ಯಾಪಕ ಪ್ರವೀಣಕುಮಾರ ಕಲಬುರ್ಗಿ ಮಾತನಾಡಿ, ವಿದ್ಯಾರ್ಥಿಗಳ ಜ್ಞಾನದ ಮಟ್ಟ ಹೆಚ್ಚಳಕ್ಕೆ ಉತ್ತೇಜನ ನೀಡುವ ರಾಷ್ಟ್ರೀಯ ಸೇವಾ ಯೋಜನೆಯ ಉದ್ದೇಶ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಂಡು ದೇಶ ಅಭಿವೃದ್ಧಿಗೆ ಸಹಕಾರ ನೀಡಬೇಕು ಎಂದು ಸಲಹೆ ನೀಡಿದರು.

ಪ್ರಾಧ್ಯಾಪಕ ಅವಿನಾಶ ಪಾಟೀಲ್ ಮಾತನಾಡಿ, ಮನುಷ್ಯನ ದೈಹಿಕ ಹಾಗೂ ಮಾನಸಿಕ ನೆಮ್ಮದಿಗೆ ಯೋಗ ಸಹಕಾರಿಯಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ನಿತ್ಯ ಜೀವನದಲ್ಲಿ ಬೆಳಗ್ಗಿನ ಜಾವ ದೈಹಿಕ ಕಸರತ್ತು ಸೇರಿದಂತೆ ಯೋಗ ಮತ್ತು ಪ್ರಾಣಾಯಾಮ ಮಾಡಬೇಕು ಎಂದು ತಿಳಿಸಿದರು. ಬಳಿಕ ಪ್ರಾಧ್ಯಾಪಕ ಅವಿನಾಶ ಪಾಟೀಲ್ ಅವರಿಂದ ವಿವಿಧ ಭಂಗಿಯ ಯೋಗಾಸನ ಪ್ರದರ್ಶಿಸುವ ಮೂಲಕ ವಿದ್ಯಾರ್ಥಿಗಳಿಗೆ ಯೋಗದ ಮಹತ್ವ ಒಡಮೂಡಿಸಿದರು.ಈ ಸಂದರ್ಭದಲ್ಲಿ ಎಸ್ ಬಿ ಸಿ ಎಸ್ ಮತ್ತು ಎಸ್ ವ್ಹಿ ಕಾಲೇಜಿನ ಪ್ರಾಂಶುಪಾಲ ರವೀಂದ್ರನಾಥಪ್ಪ, ಪ್ರವೀಣಕುಮಾರ ಕಲಬುರ್ಗಿ, ಡಾ. ವಿಕಾಸ ಪೋಸ್ತಾರ್, ದೀಪಕ ಕಲಬುರ್ಗಿ, ಡಾ. ರಮಾದೇವಿ, ಎಸ್. ಎಸ್. ಧರ್ಮರೆಡ್ಡಿ, ಕ್ರಾಂತಿಕುಮಾರ, ಚಂದ್ರಕಾಂತ ಲದ್ದಿ, ಡಾ. ಅರವಿಂದ ರಾಠೋಡ ಸೇರಿ ಅನೇಕರು ಉಪಸ್ಥಿತರಿದ್ದರು.

# ದ್ವಿತೀಯ ಪಿಯುಸಿ ಪರೀಕ್ಷೆ- 2 ಫಲಿತಾಂಶ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ.16: ದ್ವಿತೀಯ ಪಿಯುಸಿ ಪರೀಕ್ಷೆ-2ರ ಫಲಿತಾಂಶ ಪ್ರಕಟವಾಗಿದ್ದು 31.27% ಫಲಿತಾಂಶ ದಾಖಲಾಗಿದೆ. ಕರ್ನಾಟಕ ಶಾಲಾ ಶಿಕ್ಷಣ ಮತ್ತು ಮೌಲ್ಯ ನಿರ್ಣಯ ಮಂಡಳಿ ಏ.24 ರಿಂದ ಮೇ 8 ರವರೆಗೆ ಪರೀಕ್ಷೆ ನಡೆಸಿತ್ತು.

1,94,077 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾದರೆ 60,692 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಫಲಿತಾಂಶ ಸುಧಾರಣೆಗೆ 71,964 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಈ ಪೈಕಿ 41,719 ವಿದ್ಯಾರ್ಥಿಗಳು ಅಂಕ ಹೆಚ್ಚಿಸಿದ್ದಾರೆ. ವಿದ್ಯಾರ್ಥಿಗಳು www. karresults.nic.in ವೆಬ್‌ಸೈಟ್‌ಗೆ ಭೇಟಿ ನೀಡಿ ಫಲಿತಾಂಶವನ್ನು ವೀಕ್ಷಿಸಬಹುದು.

# ಮತ್ತೆ ಶುರುವಾದ ಕೋವಿಡ್ ಭೀತಿ : ಹೊಸ ಅಲೆಗೆ ಸಿಂಗಾಪುರ, ಹಾಂಕಾಂಗ್ ತತ್ತರ

ವಿಕ್ಟೋರಿಯಾ:ಮೇ.16: ಏಷ್ಯಾದ ರಾಷ್ಟಗಳಲ್ಲಿ ಕೋವಿಡ್-19ರ ಹೊಸ ಅಲೆ ಶುರುವಾಗಿದ್ದು, ಸಿಂಗಾಪುರ, ಹಾಂಕಾಂಗ್ ತತ್ತರಿಸಿಹೋಗಿವೆ.

ಕೋವಿಡ್ ಆತಂಕ ಹೆಚ್ಚಾಗುತ್ತಿದ್ದು, ಈಗಾಗಲೇ ಸಿಂಗಾಪುರ ಮತ್ತು ಹಾಂಕಾಂಗ್‌ನಲ್ಲಿ ಅಲರ್ಟ್ ಘೋಷಿಸಲಾಗಿದೆ. ಸಿಂಗಾಪುರದಲ್ಲಿ ಕೋವಿಡ್ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿದೆ. ಮೇ 03ರಿಂದ ಇಲ್ಲಿಯವರೆಗೂ 14,200 ಕೇಸ್ ದಾಖಲಾಗಿದ್ದು, ಅದರ ಹಿಂದಿನ ವಾರಕ್ಕಿಂತ ಶೇ.28ರಷ್ಟು ಹೆಚ್ಚಾಗಿದೆ. ಆಸ್ಪತ್ರೆಗೆ ದಾಖಲಾಗುತ್ತಿರುವವರ ಸಂಖ್ಯೆ ಸುಮಾರು ಶೇ.30ರಷ್ಟು ಹೆಚ್ಚಾಗಿದೆ ಎಂದು ಸಿಂಗಾಪುರ ಆರೋಗ್ಯ ಸಚಿವಾಲಯ ತಿಳಿಸಿದೆ.

ಹಾಂಕಾಂಗ್ ಆರೋಗ್ಯ ಸಚಿವಾಲಯದ ಸಾಂಕ್ರಾಮಿಕ ರೋಗ ಶಾಖೆಯ ಮುಖ್ಯಸ್ಥ ಆಲ್ಬರ್ಟ್ ಆಯು ಮಾಧ್ಯಮದವರೊಂದಿಗೆ ಮಾತನಾಡಿ, ಈ ಒಂದು ವರ್ಷದಲ್ಲಿ ಕೋವಿಡ್ ಪಾಸಿಟಿವ್ ಪರೀಕ್ಷೆಗಾಗಿ ಆಸ್ಪತ್ರೆಗೆ ಬರುವ ಉಸಿರಾಟದ ಮಾದರಿಗಳ ಸಂಖ್ಯೆ ಹೆಚ್ಚಾಗಿದೆ. ಕಳೆದ ಎರಡು ವರ್ಷಗಳಿಂದ ವೈರಸ್ ಇರಲಿಲ್ಲ. ಈಗ ಮತ್ತೆ ಪ್ರಕರಣಗಳು ದಾಖಲಾಗುತ್ತಿವೆ. ಈ ವರ್ಷದ ಆರಂಭದಿಂದ ಮೇ 3ರವರೆಗೆ ಗಂಭೀರ ಪ್ರಕರಣಗಳು ಹಾಗೂ ಸಾವನ್ನಪ್ಪಿದವರು ಸೇರಿದಂತೆ 31 ಪ್ರಕರಣಗಳು ದಾಖಲಾಗಿವೆ ಎಂದರು.

ಕರ್ನಾಟಕ ಸರ್ಕಾರ

ಕಾರ್ಯಲಯ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೀದರ.

ಸಂ: ಕಾನಿಅ/ಪಂರಾಇಂವಿ/ಬೀದರ/ತಾಶಾ-3/2025-26/234 ದಿನಾಂಕ: 14-05-2025

ಅಲ್ಪಾವಧಿ ಟೆಂಡರ್ ಪ್ರಕಟ(ಇ-ಪ್ರೊಕ್ಯುರ್‌ಮೆಂಟ್)

ಕರ್ನಾಟಕ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ, ಬೀದರ ಇವರಿಂದ 2024-25ನೇ ಸಾಲಿನ ನರೇಗಾ ಯೋಜನೆಯಡಿ ಮಂಜೂರಾದ 14 ಕಾಮಗಾರಿಗಳಿಗೆ (ಕನಿಷ್ಟ ರೂ. 12,39,768.70 (Rupees Twelve Lakhs Thirty Nine Thousand Seven Hundred Sixty Eight and paise seventy only) ಮತ್ತು ಗರಿಷ್ಟ ರೂ. 13,98,375.11 ಮೊತ್ತದ (Rupees Thirteen Lakhs Ninety Eight Thousand Three Hundred Seventy Five and paise eleven only) ಗುತ್ತಿಗೆದಾರರನ್ನು ನೇಮಿಸಲು, ಪೂರೈಕೆದಾರರು / ಒದಗಿಸುವವ ಕೆ.ಟಿ.ಪಿ.ಪಿ. ಕಾಯ್ದೆ ನಿಬಂಧನೆಗೊಳಪಟ್ಟು ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಂತರಜಾಲ ತಾಣ https://kppp.karnataka.gov.inನ್ನು ಸಂಪರ್ಕಿಸಬಹುದು.

**ಟೆಂಡರ್ ಪ್ರಕ್ರಿಯೆ ದಿನಾಂಕಗಳು:** 1.ಇ-ಪ್ರಾಕ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : 15.05.2025 ರಿಂದ 31.05.2025 16:00 ಗಂಟೆವರೆಗೆ, 2.ಅರ್ಥಿಕ ಬಿಡ್ ತೆರೆಯುವ ದಿನಾಂಕ : 02.06.2025 ರಂದು 11:00 ಗಂಟೆ ನಂತರ

ಸಹಿ/- ಕಾರ್ಯನಿರ್ವಾಹಕ ಅಭಿಯಂತರರು, ಪಂ. ರಾ. ಇಂ. ವಿಭಾಗ-ಬೀದರ

ವಾ.ಸಾ.ಸಂ.ಇ/ಬೀದರ/42/ಕೆ.ಎಸ್.ಎಂ.ಸಿ.&ಎ/2025-26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.